ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ


ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 43 ಸಂಚಿಕೆ- 43 | PAGE-8 ಪುಟ-8 | ಶುಕ್ರವಾರ 21.03.2025 | RS.2/- ಬೆಲೆ 2/-

## ಕೃಷ್ಣಾ ಮೇಲ್ದಂಡೆ ಯೋಜನೆ

### ರಾಷ್ಟ್ರೀಯ ಯೋಜನೆಯಾಗಿಸಲು ಶ್ರಮಿಸೋಣ: ಡಿ.ಕೆ.ಶಿ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು: ಮಾ. 20:ಕೃಷ್ಣಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆ ಎಂದು ಘೋಷಿಸುವಂತೆ ಮಾಡಬೇಕು. ಹೀಗಾದಾಗ ಮಾತ್ರ ಕೃಷ್ಣ ಮೇಲ್ದಂಡೆ ಯೋಜನೆಗೆ ಏನಾದರೂ ಮುಕ್ತಿ ಸಿಗಬಹುದು. ಇದಕ್ಕೆ ಪ್ರಸ್ತಾವನೆ ತಯಾರು ಮಾಡಲಾಗುವುದು. ಸರ್ವಸದ್ಯರು ಎಲ್ಲಾರು ಒಗ್ಗೂಡಿ ಕೇಂದ್ರಕ್ಕೆಹೋಗಿ ಮನವಿ ಸಲ್ಲಿಸೋಣ, ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ತಿಳಿಸಿದರು.

ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ಪಿ.ಎಚ್.ಪೂಜಾರ್ ಅವರು ಕೃಷ್ಣಾ ಮೇಲ್ದಂಡೆ ಯೋಜನೆಯ 3ನೇ ಹಂತ ಯೋಜನೆಗೆ ಒಂದೇ ಹಂತದಲ್ಲಿ ಭೂಸ್ವಾಧೀನ ಪ್ರಕ್ರಿಯೆ ಆರಂಭವಾಗಿದೆಯೇ ಎಂದು ಕೇಳಿದ ಪ್ರಶ್ನೆಗೆ ಉತ್ತರಿಸಿದ ಉಪ ಮುಖ್ಯಮಂತ್ರಿಗಳು ಸಣ್ಣ ಹಾಗೂ ದೊಡ್ಡ ನೀರಾವರಿ ಈ ಎರಡೂ ಇಲಾಖೆಗಳ ಬಜೆಟ್ ಇರುವುದೇ ರೂ. 22 ಸಾವಿರ ಕೋಟಿ. ಆದರೂ ಈ ಯೋಜನೆ ಜಾರಿಗೆ ನಾವು ಬದ್ಧವಾಗಿದ್ದೇವೆ. ಕೇಂದ್ರ ಜಲಶಕ್ತಿ ಸಚಿವರಿಗೆ ನಾನು ಹಾಗೂ ಸಣ್ಣ ನೀರಾವರಿ ಸಚಿವರಾದ ಎನ್.ಎಸ್. ಭೋಸರಾಜು ಅವರು ಉದಯಪುರ ಸಮಾವೇಶದ ವೇಳೆ, ದೆಹಲಿಯಲ್ಲಿ ಭೇಟಿಯಾಗಿ ಯೋಜನೆ ಅನುಮೋದನೆಗೆ ಮನವರಿಕೆ ಮಾಡಿದ್ದೇವೆ. ಇದಕ್ಕೂ ಮುಂಚಿತವಾಗಿ ಕಾನೂನಿನ ಚೌಕಟ್ಟಿನಲ್ಲಿ ಏನೇನು ಮಾಡಬೇಕು ಎಂದು ನಾವು ಆಲೋಚನೆ ಮಾಡಿದ್ದೇವೆ ಎಂದು ಹೇಳಿದರು.

ಈಗಾಗಲೇ 75,563 ಎಕರೆ ಸಬ್ ಮರ್ಜ್ ಆಗಿದೆ, 2,543 ಎಕರೆ ಭೂ ಸ್ವಾಧೀನಕ್ಕೆ ಅಧಿಸೂಚನೆ ಹೊರಡಿಸಲಾಗಿದೆ. 29,568 ಎಕರೆ ಭೂಮಿ ವಿವಿಧ ಹಂತಗಳಲ್ಲಿದೆ. 43,452 ಎಕರೆ ಭೂಮಿ ಸ್ವಾಧೀನಕ್ಕೆ ಒಳಪಡಬೇಕಿದೆ. ಆರ್.ಸಿ ಭೂಮಿಗೆ 6,467 ಎಕರೆ ಬೇಕಾಗಿದೆ ಇದರಲ್ಲಿ ಶೇ 50 ರಷ್ಟು ಎಂದರೆ 3,392 ಎಕರೆ ಸ್ವಾಧೀನ ಪಡಿಸಿಕೊಳ್ಳಲಾಗಿದೆ. ಇದರಲ್ಲಿ ವಿವಿಧ ಹಂತಗಳಲ್ಲಿ 2,600 ಎಕರೆಯಿದ್ದು, 471 ಎಕರೆ ಬಾಕಿ ಉಳಿದಿದೆ. ಫಾರ್ಮೇಶನ್ ಆಫ್ 24 ಆರ್ ಸಿ ವಿಲೇಜ್ ಅಡಿ 4,636 ಎಕರೆ, ವಿವಿಧ ಹಂತಗಳಲ್ಲಿ 2,500 ಮತ್ತು 1,886 ಎಕರೆ ಬಾಕಿಯಿದೆ. ಕಾಲುವೆ ಜಾಲ ನಿರ್ಮಾಣಕ್ಕೆ 1,33,867 ಎಕರೆ ಬೇಕಾಗಿದೆ. ಇದರಲ್ಲಿ ಈಗಾಗಲೇ 51 ಸಾವಿರ ಎಕರೆ ಸ್ವಾಧೀನಪಡಿಸಿಕೊಳ್ಳಲಾಗಿದೆ. ಸರ್ಕಾರದ ಬಳಿ ವಿವಿಧ ಹಂತಗಳಲ್ಲಿ 22,962 ಎಕರೆ ಭೂಮಿ ಇದೆ ಎಂದು ಅಂಕಿ-ಅಂಶಗಳನ್ನು ಸದನದ ಮುಂದಿಟ್ಟರು.

ಒಂದಷ್ಟು ಭೂಮಿಗೆ 10- 12 ಕೋಟಿ ಪರಿಹಾರ ನೀಡಬೇಕು ಎಂದು ನ್ಯಾಯಾಲಯ ಆದೇಶಿಸಿದೆ. ಇದರ ಬಗ್ಗೆಯೂ ಆಲೋಚನೆ ಮಾಡಬೇಕಿದೆ. ಭೂಸ್ವಾಧೀನಕ್ಕೆ ಅನುಮೋದನೆ ದೊರೆಯದೇ ಹೋದರು ಸ್ವಾಧೀನ ಪಡಿಸಿಕೊಳ್ಳಲು ಮುಂದಾಗಿ ಎನ್ನುವುದು ಅನೇಕರ ಒತ್ತಡ. ಇದನ್ನು ಸರ್ಕಾರವೂ ಒಪ್ಪುತ್ತದೆ. ಇದನ್ನು ಮುಖ್ಯಮಂತ್ರಿಗಳೇ ಒಪ್ಪಿಕೊಂಡಿದ್ದಾರೆ. ಆ ಭಾಗದ ಜನಪ್ರತಿನಿಧಿಗಳು ಸೇರಿದಂತೆ ನಾವೆಲ್ಲರೂ ಸೇರಿ ಈ ಬಗ್ಗೆ ಚರ್ಚೆ ನಡೆಸಿದ್ದೇವೆ. ಆದರೆ ಇದು ಸರ್ಕಾರದ ದಾಖಲೆಗೆ ಬರಬೇಕು. ಇದಾದ ನಂತರ ಹಣಕಾಸು ಇಲಾಖೆ, ಕಾನೂನು ಇಲಾಖೆಯ ಅಭಿಪ್ರಾಯ ಕೇಳಬೇಕು ಎಂದು ಹೇಳಿದರು.

## ತೊಗರಿಬೆಳೆ ಹಾನಿ, ಪರಿಹಾರ ಇತ್ಯರ್ಥ ಪ್ರಕ್ರಿಯೆ

### ಚುರುಕು: ಕೃಷಿ ಸಚಿವ ಎನ್. ಚಲುವರಾಯಸ್ವಾಮಿ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಮಾ.20: ಕಳೆದ ಸಾಲಿನಲ್ಲಿ ಮಳೆ ಕೊರತೆಯಿಂದ ಉಂಟಾಗಿರುವ ತೊಗರಿ ಬೆಳೆ ಹಾನಿ ಅಂದಾಜಿಸಲಾಗಿದ್ದು, ರಾಜ್ಯಾದ್ಯಂತ ತೊಗರಿ ಬೆಳೆದ 1.86ಲಕ್ಷ ರೈತರಿಗೆ 91.93 ಕೋಟಿ ಮೊತ್ತದ ವಿಮಾ ಪರಿಹಾರ ಲೆಕ್ಕಾಚಾರ ಮಾಡಿ ಇತ್ಯರ್ಥಪಡಿಸಲಾಗುತ್ತಿದೆ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಅವರು ತಿಳಿಸಿದರು. ವಿಧಾನಮಂಡಲದ ಬಜೆಟ್ ಅಧಿವೇಶನದಲ್ಲಿ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ಟಿ. ನಾರಾಯಣಸ್ವಾಮಿ, ವಿರೋಧ ಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ್ ಮತ್ತು ಸದಸ್ಯರಾದ ಶಶಿಲ್ ಜಿ. ನಮೋಶಿ, ಡಾ. ತಳವಾರ್ ಸಾಬಣ್ಣ, ವೈ.ಎಂ .ಸತೀಶ್, ಹೇಮಲತಾ ನಾಯಕ್ ಅವರ ಪ್ರಸ್ತಾಪಕ್ಕೆ ನಿಯಮ 330ರ ಪ್ರಕಾರ ಉತ್ತರ ನೀಡಿದ ಅವರು, ರಾಜ್ಯದ ಕಲಬುರಗಿ, ವಿಜಯಪುರ, ಬೆಳಗಾವಿ, ಬೀದರ್, ಯಾದಗಿರಿ ಜಿಲ್ಲೆಗಳಲ್ಲಿ ತೊಗರಿ ಮುಖ್ಯ ಬೆಳೆಯಾಗಿದ್ದು, ಸೆಪ್ಟೆಂಬರ್‌ನಿಂದ ನವೆಂಬರ್‌ವರೆಗೆ ವಾಡಿಕೆಗಿಂತ ಕಡಿಮೆ ಮಳೆಯಾಗಿ ತೇವಾಂಶ ಕುಸಿತದಿಂದ ಬೆಳೆಹಾನಿಯಾಗಿರುವ ಬಗ್ಗೆ ವರದಿಯಾಗಿದೆ. ಇದ

(2ನೇ ಪುಟ ನೋಡಿ)

## ವಿದ್ಯುತ್ ದರ ಹೆಚ್ಚಳ : ಬೆಲೆ ಏರಿಕೆಯ

### ಗ್ಯಾರಂಟಿ ನೀಡಿದ ಕಾಂಗ್ರೆಸ್: ವಿಜಯೇಂದ್ರ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮಾ.20:ರಾಜ್ಯದಲ್ಲಿ ದರಿದ್ರ, ಜನವಿರೋಧಿ, ಕೆಟ್ಟ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಈ ನಾಡಿನ ಜನತೆಗೆ ಕೊಟ್ಟ ಏಕೈಕ ಗ್ಯಾರಂಟಿ ಎಂದರೆ ಅದು ಬೆಲೆ ಏರಿಕೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಕ್ಷೇಪಿಸಿದರು.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬೆಲೆ ಏರಿಕೆಯ ಗ್ಯಾರಂಟಿಯನ್ನು ಈ ರಾಜ್ಯ ಸರ್ಕಾರ ಸರಿಯಾಗಿ ಅನುಷ್ಠಾನಕ್ಕೆ ತರುತ್ತಿದೆ. ಕಾಂಗ್ರೆಸ್ ಸರ್ಕಾರದ ಗ್ಯಾರಂಟಿಗಳು ವಿಫಲವಾಗಿದೆ. ಬೆಲೆ ಏರಿಕೆಯಿಂದ ನಾಡಿನ ಸಾಮಾನ್ಯ ಜನರು, ಬಡವರು, ರೈತರು ಸೇರಿ ಎಲ್ಲರೂ ತತ್ತರಿಸಿ ಹೋಗಿದ್ದಾರೆ ಎಂದು ಕಿಡಿಕಾರಿದರು.

ಇವರ ಹುಳುಕನ್ನು ಮುಚ್ಚಿ ಹಾಕಲು ಪದೇಪದೇ ಕೇಂದ್ರ ಸರ್ಕಾರ ಅನ್ಯಾಯ ಮಾಡುತ್ತಿದೆ ಎಂದು ಬಿಂಬಿಸುವ ಪ್ರಯತ್ನ ಮಾಡುತ್ತಿದ್ದಾರೆ. ಒಂದು ಕಡೆ ಪುಕ್ಕಟೆ ವಿದ್ಯುತ್ ಎನ್ನುತ್ತಾರೆ. ರಾಜ್ಯದಲ್ಲಿ ರೈತರು ಸಂಕಷ್ಟದಲ್ಲಿದ್ದಾರೆ. 3 ಫೇಸ್ ವಿದ್ಯುತ್‌ನ್ನು 7 ಗಂಟೆ ಕೊಡಲು ಸರ್ಕಾರ-ಕ್ಕೆ ಆಗುತ್ತಿಲ್ಲ. ಮತ್ತೊಂದು ಕಡೆ ಪಿಡಬ್ಲ್ಯೂಡಿ ಮತ್ತಿತರ ಇಲಾಖೆಗಳು 6,500 ಕೋಟಿ ರೂ. ವಿದ್ಯುತ್ ಬಿಲ್ ಬಾಕಿ ಉಳಿಸಿಕೊಂಡಿವೆ. ಜನರಿಗೆ ಬರೆ ಎಳೆಯುವ ಸರ್ಕಾರದ ಕ್ರಮ ಅಕ್ಷಮ್ಯ ಅಪರಾಧ. ಇದನ್ನು ಸದನದಲ್ಲಿ

(2ನೇ ಪುಟ ನೋಡಿ)

## 2025-26ನೇ ಸಾಲಿನ ಬಜೆಟ್ ಪೂರ್ವಭಾವಿ ಸಭೆ

### ಪುರಸಭೆಯ ಸಭಾಂಗಣದಲ್ಲಿ ನಡೆದ ಆಯವ್ಯಯ ಪಟ್ಟಿ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್: ಮಾ.20 ಪಟ್ಟಣದ ಪುರಸಭೆ ಸಭಾಂಗಣದಲ್ಲಿ ಗುರುವಾರ ಪುರಸಭೆ ಅಧ್ಯಕ್ಷೆ ಪಾರ್ವತಿ ಶೇರಿಕಾರ ಅವರ ಅಧ್ಯಕ್ಷತೆಯಲ್ಲಿ 2025-26ನೇ ಸಾಲಿನ ಬಜೆಟ್ ಪೂರ್ವಭಾವಿ ಸಭೆ ನಡೆಸಿ ಆಯವ್ಯಯ ಪಟ್ಟಿ ಬಿಡುಗಡೆ ಮಾಡಲಾಯಿತು. ಬಳಿಕ ಪುರಸಭೆ ಅಧ್ಯ-ಕ್ಷೆ ಪಾರ್ವತಿ ಶೇರಿಕಾರ ಮಾತನಾಡಿ, ಪಟ್ಟಣದ ಸಮಗ್ರ ಅಭಿವೃದ್ಧಿಗೆ ಪೂರಕವಾಗಿ ಹೊಸ ಯೋಜನೆಗಳು ಹಾಕಿಕೊಳ್ಳಲಾಗಿದೆ. ಬಹುಮುಖ್ಯವಾಗಿ ಘನ ತ್ಯಾಜ್ಯ ವಸ್ತು ನಿರ್ವಹಣೆ, ಸಾರ್ವಜನಿಕ ಆರೋಗ್ಯ, ಹೊಸ ರಸ್ತೆಗಳ ನಿರ್ಮಾಣ, ನೀರು ಸರಬರಾಜು, ಚರಂಡಿ ನಿರ್ಮಾಣ, ಬಡತನ ನಿರ್ಮೂಲನೆ ಸೇರಿ ಇನ್ನೂ ಅನೇಕ ಯೋಜನೆಗಳಿಗೆ ಒಟ್ಟು 33.80 ಕೋಟಿಗೂ ಹೆಚ್ಚಿನ ಅನುದಾನದ ಆಯವ್ಯಯ ಪಟ್ಟಿ ಸಿದ್ಧ ಮಾಡಲಾಗಿದೆ ಎಂದು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಪುರಸಭೆ ಉಪಾಧ್ಯಕ್ಷ ಮುಕ್ರಂಜಾ, ಸದಸ್ಯರಾದ ರಮೇಶ ಕಲ್ಲೂರ, ಅಫ್ಸರಮಿಯ, ವಿಜಯಕುಮಾರ, ಧನಲಕ್ಷ್ಮಿ, ಸವಿತಾ ಸೊಂಡೆ, ಅನಿಲ್ ಪಲ್ಲೇರಿ, ಸೈಯದ್ ಬಾಸೀದ್, ಗುಂಡಪ್ಪ ಹೊನ್ನಕೇರಿ ಸೇರಿ ಪುರಸಭೆ ಮುಖ್ಯಾಧಿಕಾರಿ ಹಾಗೂ ಸಿಬ್ಬಂದಿಗಳು ಇದ್ದರು.

## ವಿದ್ಯುತ್ ದರ ಯುನಿಟ್‌ಗೆ 36 ಪೈಸೆ ಹೆಚ್ಚಳ

ಬೆಂಗಳೂರು:ಮಾ.20: ಕರ್ನಾಟಕದಲ್ಲಿ ದರ ಏರಿಕೆ ಸರಣಿ ಮುಂದುವರೆದಿದ್ದು, ಮತ್ತೆ ವಿದ್ಯುತ್ ದರ ಏರಿಕೆ ಮಾಡಿ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ ಗ್ರಾಹಕರಿಗೆ ಶಾಕ್ ನೀಡಿದೆ.

ಬೆಲೆ ಏರಿಕೆಯ ಹೊಡೆತದಿಂದ ಕಂಗೆಟ್ಟಿರುವ ರಾಜ್ಯದ ಜನತೆಗೆ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ ಕೂಡ ಶಾಕ್ ನೀಡಿದೆ. ವಿದ್ಯುತ್ ದರ ಪ್ರತಿ ಯೂನಿಟ್‌ಗೆ 36 ಪೈಸೆ ಹೆಚ್ಚಳ ಮಾಡಲಾಗಿದೆ. ವಿದ್ಯುತ್ ಪ್ರಸರಣ ಮತ್ತು ಎಸ್ಕಾಮ ಸಿಬ್ಬಂದಿ ಪಿಂಚಣಿ, ಗ್ರಾಚ್ಯುಟಿಗಾಗಿ ಗ್ರಾಹಕರಿಂದ ವಸೂಲಿಗೆ ಕೆಇಆರ್‌ಸಿ ಮುಂದಾಗಿದ್ದು, ದರ ಹೆಚ್ಚಳದ ಆದೇಶ ಹೊರಡಿಸಿದೆ. ಎಪ್ರಿಲ್ 1 ರಿಂದಲೇ ಹೊಸ ಆದೇಶ ಜಾರಿಯಾಗಲಿದೆ.

ವಿದ್ಯುತ್ ಪ್ರಸರಣ ಮತ್ತು ಎಸ್ಕಾಮ ಸಿಬ್ಬಂದಿ ಪಿಂಚಣಿ, ಗ್ರಾಚ್ಯುಟಿಗಾಗಿ ಗ್ರಾಹಕರಿಂದ ವಸೂಲಿಗೆ ಕೆಇಆರ್‌ಸಿ ಮುಂದಾಗಿದ್ದು, ದರ ಹೆಚ್ಚಳದ ಆದೇಶ ಹೊರಡಿಸಿದೆ. ಎಪ್ರಿಲ್ 1 ರಿಂದಲೇ ಹೊಸ ಆದೇಶ ಜಾರಿಯಾಗಲಿದೆ.

ಇತ್ತೀಚೆಗಷ್ಟೇ ಬೆಂಗಳೂರು ನಮ್ಮ ಮೆಟ್ರೋ ದರ ಏರಿಕೆ ಮಾಡಲಾಗಿತ್ತು. ಅದಕ್ಕೂ ಮುನ್ನ ಕೆಎಸ್‌ಆರ್‌ಟಿಸಿ ಬಸ್ ಪ್ರಯಾಣ ದರವೂ ಹೆಚ್ಚಿಸಲಾಗಿತ್ತು. ಕೆಲವು ದಿನಗಳ ಹಿಂದಷ್ಟೇ ಆಟೋ ದರ ಏರಿಕೆಗೂ ಸರ್ಕಾರ ಸಮ್ಮತಿ ನೀಡಿತ್ತು. ಇದೀಗ ವಿದ್ಯುತ್ ದರ ಹೆಚ್ಚಳ ಆದೇಶ ಹೊರಡಿಸಲಾಗಿದ್ದು, ಜನ ಸಾಮಾನ್ಯರಿಗೆ ಬೆಲೆ ಏರಿ-ಕೆಯ ಬರೆ ಎಳೆದಂತಾಗಿದೆ.

#### ಸಾಮಾನ್ಯ ಜನರಿಗೆ ತೊಂದರೆ ಇಲ್ಲ: ಸಚಿವ ಶರಣಪ್ರಕಾಶ್ ಪಾಟೀಲ್

ಈ ಕುರಿತು ಮಾತನಾಡಿರುವ ಸಚಿವ ಶರಣಪ್ರಕಾಶ್ ಪಾಟೀಲ್, 'ವಿದ್ಯುತ್ ದರ ಏರಿಕೆಯಿಂದ ಸಾಮಾನ್ಯ ಜನರಿಗೆ ತೊಂದರೆ ಆಗುವುದಿಲ್ಲ. ಗೃಹಜ್ಯೋತಿ ಯೋಜನೆಯಿಂದಾಗಿ ನಷ್ಟ ಆಗಿಲ್ಲ. ಗೃಹಜ್ಯೋತಿ ನಷ್ಟದಿಂದ ವಿದ್ಯುತ್ ದರ ಏರಿಕೆ ಮಾಡಲಾಗಿಲ್ಲ ಎಂದು ಸ್ಪಷ್ಟನೆ ನೀಡಿದರು.

#### ಯಾರಿಗೆ ಅನ್ವಯ?

'ಗೃಹಜ್ಯೋತಿ ನಷ್ಟದಿಂದ ವಿದ್ಯುತ್ ದರ ಏರಿಕೆ ಮಾಡಲಾಗಿಲ್ಲ. ನಾವು 200 ಯೂನಿಟ್

(2ನೇ ಪುಟ ನೋಡಿ)

## ಕಲಬುರಗಿ ವಿಭಾಗದ 306 ಪ್ರೌಢ ಶಾಲೆಗಳಲ್ಲಿ

### ಹೊಸದಾಗಿ ಮಾಹಿತಿ ತಂತ್ರಜ್ಞಾನ ಕೋರ್ಸ್ ಪ್ರಾರಂಭ:ಅಪರ ಆಯುಕ್ತ ಡಾ. ಆಕಾಶ ಎಸ್.



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.20:ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ "ಅಕ್ಷರ ಆವಿಷ್ಕಾರ" ಯೋಜನೆಯಡಿ 2024-25ನೇ ಸಾಲಿನಿಂದ ಕಲ್ಯಾಣ ಕರ್ನಾಟಕ ಪ್ರದೇಶದ ಕಲಬುರಗಿ ವಿಭಾಗದ 306 ಪ್ರೌಢ ಶಾಲೆಗಳಲ್ಲಿ ಹೊಸದಾಗಿ ಮಾಹಿತಿ ತಂತ್ರಜ್ಞಾನ ಕೋರ್ಸ್‌ನ್ನು ಪ್ರಾರಂಭಿಸಲಾಗಿದೆ ಎಂದು ಕಲಬುರಗಿ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತರಾದ ಡಾ. ಆಕಾಶ್ ಎಸ್. ಅವರು ತಿಳಿಸಿದ್ದಾರೆ.

ನ್ಯಾಷನಲ್ ಸ್ಕಿಲ್ ಕ್ವಾಲಿಫಿಕೇಶನ್ ಫ್ರೇಮ್ ವರ್ಕ್ (National Skill Qualification Frame Work (NSQF) ಕಾರ್ಯಮದಡಿ ಸ್ಕಿಲ್ ಎಟ್ ಸ್ಕೂಲ್ (Skill at School) ಮಾದರಿಯಲ್ಲಿ ವಿದ್ಯಾರ್ಥಿಗಳ ಆಸಕ್ತಿ ಅನುಸಾರ ಹಾಗೂ ಪ್ರಚಲಿತವಾಗಿ ಬೇಡಿಕೆಯಿರುವ ಮಾಹಿತಿ ತಂತ್ರಜ್ಞಾನ (Information Technology) ವಿಷಯವನ್ನು ಪ್ರೌಢಶಾಲಾ ಹಂತದಲ್ಲಿ ಪ್ರಾರಂಭಿಸಲು ಸರ್ಕಾರವು ಆದೇಶಿಸಿದೆ.

ಕರ್ನಾಟಕದಲ್ಲಿ ಕಲಬುರಗಿ ವಿಭಾಗವು ಇತರೆ ವಿಭಾಗಗಳಿಗಿಂತ ಕಂಪ್ಯೂಟರ್ ವಿಜ್ಞಾನ ವಿಷಯದ ವಿದ್ಯಾರ್ಥಿಗಳ ನೋಂದಣಿಯಲ್ಲಿ ಹಿಂದೆ ಉಳಿದಿದೆ. ಈ ಅಂತರವನ್ನು ಸರಿದೂಗಿಸಲು ಒಂದು ಕ್ರಾಂತಿಕಾರಿ ಹೆಜ್ಜೆ ಇಡಲಾಗಿದೆ. ಅದಕ್ಕಾಗಿ 2024-25ನೇ ಶೈಕ್ಷಣಿಕ ವರ್ಷದಲ್ಲಿ, ಎನ್.ಎಸ್.ಕ್ಯೂ.ಎಫ್.-ಐ.ಟಿ. (NSQF-IT) ಅನ್ನು ಕಲಬುರಗಿ ವಿಭಾಗದ 306 ಹೈಸ್ಕೂಲ್‌ಗಳಲ್ಲಿ ಹೊಸದಾಗಿ ಪ್ರಾರಂಭಿಸಲಾಗುತ್ತಿದೆ. ಈ ಅತ್ಯಂತ ಮಹತ್ವದ ಕಾರ್ಯಕ್ರಮವು ಕೆ.ಕೆ. ಆರ್.ಡಿ.ಬಿ.ಯ "ಅಕ್ಷರ ಆವಿಷ್ಕಾರ"ಯೋಜನೆಯಿಂದ ಮುನ್ನಡೆಸಲ್ಪಟ್ಟಿದ್ದು, ವರ್ಷಕ್ಕೆ 10,000 ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಇದರ ಪ್ರಯೋಜನವನ್ನು ಪಡೆಯಲಿದ್ದು, ಇದು ಈ ಪ್ರದೇಶದಲ್ಲಿ ಐಟಿ ಶಿಕ್ಷಣವನ್ನು ದೊಡ್ಡ ಮಟ್ಟದಲ್ಲಿ ವಿಸ್ತರಿಸಲಿದೆ ಎಂದು ಅವರು ತಿಳಿಸಿದ್ದಾರೆ. ರಾಷ್ಟ್ರೀಯ ಮಟ್ಟದ (ಗಆಖಖಇ: 2021-22)-ಅಂಕಿ-ಅಂಶಗಳನ್ನು ವಿಶ್ಲೇಷಿಸಿದಾಗ ಎನ್.ಎಸ್. ಕ್ಯೂ.ಎಫ್. (NSQF) ಶಿಕ್ಷಣ ಲಭ್ಯವಿರುವ ಶಾಲೆಗಳ ಸಂಖ್ಯೆಯ ಅನ್ವಯ, ದೇಶದಲ್ಲಿ ಕರ್ನಾಟಕವು 22ನೇ ಸ್ಥಾನದಲ್ಲಿದೆ. ಈ ಹಿನ್ನಲೆಯಲ್ಲಿ ಕರ್ನಾಟಕದಲ್ಲಿ 2024-25ನೇ ಸಾಲಿಗೆ ಎನ್.ಎಸ್.ಕ್ಯೂ.ಎಫ್. (NSQF) ವಿಷಯವನ್ನು ನೀಡುವ ಶಾಲೆಗಳ ಸಂಖ್ಯೆಯನ್ನು 575 ಕ್ಕೆ ಹೆಚ್ಚಿಸಿದ್ದೇವೆ. ಈ ಶಾಲೆಗಳಲ್ಲಿ ಕಳೆದ ಶೈಕ್ಷಣಿಕ ವರ್ಷದವರೆಗೆ ಎಲ್ಲಾ ರಾಜ್ಯದಲ್ಲಿ ಒಟ್ಟು 32,567 ಎನ್.ಎಸ್.ಕ್ಯೂ.ಎಫ್ (NSQF) ವಿದ್ಯಾರ್ಥಿಗಳಿಗೆ

(2ನೇ ಪುಟ ನೋಡಿ)

## ನಗರಸಭೆ ಅಧ್ಯಕ್ಷನ ವಿರುದ್ಧ

### ಹರಿಹಾಯ್ದ ಸದಸ್ಯರು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 20 : ಬೋರ್‌ವೆಲ್ ಕಾಮಗಾರಿಗೆ ಸಂಬಂಧಿಸಿದಂತೆ ಸಮರ್ಪಕವಾಗಿ ಮಾಹಿತಿ ನೀಡದ ನಗರಸಭೆ ಅಧ್ಯಕ್ಷ ಮುಹಮ್ಮದ್ ಗೌಸ್ ವಿರುದ್ಧ ಸದಸ್ಯರು ಹರಿಹಾಯ್ದರು.

ನಗರದಲ್ಲಿ ಮಂಗಳವಾರ ನಡೆದ ನಗರಸಭೆ ಸಾಮಾನ್ಯ ಸಭೆಯಲ್ಲಿ ಬಿಜೆಪಿ, ಜೆಡಿಎಸ್, ಎಐಎಂಐಎಂ ಸದಸ್ಯರು ನಗರದಲ್ಲಿ ಕೈಗೆತ್ತಿಕೊಂಡ ಬೋರ್‌ವೆಲ್ ಕಾಮಗಾರಿಗಳ ಕುರಿತು ಸಮರ್ಪಕ ಮಾಹಿತಿ ನೀಡಬೇಕೆಂದು ಆಗ್ರಹಿಸಿದರು.

ಸದಸ್ಯರು ಈ ರೀತಿ ಜೋರಾಗಿ ಮಾತನಾಡುವುದು

(2ನೇ ಪುಟ ನೋಡಿ)

**CITATION**

**IN THE COURT OF THE PRL. CIVIL JUDGE AND JMFC., AT HUMNABAD**

**Crl. Misc. No. 43/2025**

Petitioners :

1). BABURAO S/O AMBANNA AGE; 73 R/O M.P. GALLI LINDRA NAGAR, HUMNABAD

2). KASTOORI BAI W/O BABUROA AGE; 63 R/O M.P. GALLI INDRA NAGAR HUMNABAD

3). VASUDEV S/O BABURAO AGE; 47 R/O M.P. GALLI INDRA NAGAR HUMNABAD.

4). PREM KUMAR S/O BABURAO AGE; 38 R/O M.P. GALLI INDRA NAGAR HUMNABAD

5). ARUNKUMAR S/O BABURAO AGE; 27 R/O HUMNABAD

6). SAGAR KUMAR S/O BABURAO AGE; 33 R/O INDRA NAGAR HUMNA-BAD

Respondent:-

THE CHIEF REGISTRAR OF BIRTH AND DEATH THOURGH THE TMC HUM-NABAD.

Sub: Petition U/Sec 13 (3) of Birth and Death Registration Act 1969.

Whereas the above named petitioners have filed the petition under section 13(3) of Birth and Death Registration Act 1969 praying the Honourable court to issue Death certificate of AMBANNA S/O GUNDAPPA, who died on 01-01-2004, The petitioners claiming the death certificate of petitioner no. 1 is the son and respondent no. 2 is the sister-in-law and petitioner no. 3 to 6 are grandsons of the deceased Ambanna. That, now the petitioners are need of death certificate of transfer of property and other official purpose and home record.

Therefore, it is hereby proclaimed that if any persons have got any objection in this regard, may approach to this court on 16.04.2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 14.03.2025

//By order of the court//
Chief Ministerial Officer
Prl. Civil Judge and JMFC
Court, Humnabad

**CITATION**

**IN THE COURT OF THE PRL. CIVIL JUDGE AND JMFC., AT HUMNABAD**

**Crl. Misc. No. 2500/2024**

Petitioners :

1). MANIKAPPA BURANAPUR S/O LATE MADIVALAPPA BURANPUR AGE; 61 OCCU: AGRICULTURE R/O KALLUR ORAD HUMNABAD DIST:BIDAR.

2). SIDDAPRABHU S/O MADIVALAPPA AGE; 63 OCCU: AGRICULTURE R/O KUFARTOD GALLI, HUMNABAD DIST:BIDAR.

3). BABU RAO S/O LATE SIDDAPPA BURANPUR AGE; 72 R/O KURTOD GALLI HUMNABAD DIST:BIDAR.

Respondent:-

THE CHIEF REGISTRAR OF BIRTH AND DEATH THOURGH THE TMC OFFICE HUMNABAD.

Sub: Petition U/Sec 13 (3) of Birth and Death Registration Act 1969.

Whereas the above named petitioner has filed the petition under section 13(3) of Birth and Death Registration Act 1969 praying the Honourable court to issue Death certificate of Ratnamma W/o Madivallappa Buranpur who died on 05.07.1971. The petitioner claiming the death certificate of her sons for transfer of property and other official purpose and home record.

Therefore, it is hereby proclaimed that if any persons have got any objectin in this regard, may approach to this court on 27.03.2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 1.03.2025

//By order of the court//
Chief Ministerial Officer
Prl. Civil Judge and JMFC
Court, Humnabad

# ಕಾಸರಗೋಡು ಪತ್ರಕರ್ತರ ಕ್ಷೇಮಾಭಿವೃದ್ಧಿ ನಿಧಿಗೆ 25 ಲಕ್ಷ ನೆರವು: ಸಿಎಂ ಸಿದ್ದರಾಮಯ್ಯಗೆ ಅಭಿನಂದನೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಕೆಯುಡಬ್ಲ್ಯೂಜೆ ಹೊರನಾಡಿನ ಘಟಕವಾಗಿರುವ ಕಾಸರಗೋಡು ಪತ್ರಕರ್ತರ ಸಂಘದ ಕ್ಷೇಮಾಭಿವೃದ್ಧಿ ನಿಧಿಗೆ 25 ಲಕ್ಷ ರೂ ಮಂಜೂರು ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಿಎಂ ಗೃಹ ಕಚೇರಿ ಕಾವೇರಿಯಲ್ಲಿ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮತ್ತು ಕಾಸರಗೋಡು ಘಟಕದ ಅಧ್ಯಕ್ಷ ಎ.ಆರ್.ಸುಬ್ಬಯ್ಯಕಟ್ಟೆ ಅವರ ನೇತೃತ್ವದಲ್ಲಿ ಅಭಿನಂದನೆ ಸಲ್ಲಿಸಲಾಯಿತು.



ಕೇರಳ ರಾಜ್ಯದ ಕಾಸರಗೋಡು ಭಾಗದಲ್ಲಿ ಕನ್ನಡ ಪತ್ರಿಕೆಗಳು ಈಗಲೂ ಹೆಚ್ಚಿನ ಪ್ರಸಾರ ಹೊಂದಿದ್ದು, ಕನ್ನಡ ಪತ್ರಕರ್ತರು ಹೆಚ್ಚಿನ ಸಂಖ್ಯೆಯಲ್ಲಿರುವುದರಿಂದ ಅವರ ಹಿತ ರಕ್ಷಣೆ ಮಾಡುವುದು ಸರ್ಕಾರದ ಕರ್ತವ್ಯವಾಗಿದೆ. ಈ ಹಿನ್ನೆಲೆಯಲ್ಲಿ ಅಲ್ಲಿನ ಪತ್ರಕರ್ತರ ಸಂಘಕ್ಕೆ ಆರ್ಥಿಕ ನೆರವು ನೀಡಬೇಕು ಎಂದು ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ ಮತ್ತು ಕಾಸರಗೋಡು ಘಕದ ಮಾಡಿದ ಮನವಿಯನ್ನು ಪರಿಗಣಿಸಿರುವ ಮುಖ್ಯಮಂತ್ರಿಗಳು 25 ಲಕ್ಷ ರೂ ಮಂಜೂರು ಮಾಡಿರುವುದನ್ನು ಈ ಸಂದರ್ಭದಲ್ಲಿ ಶ್ಲಾಘಿಸಲಾಯಿತು. ಇದೇ ಸಂದರ್ಭದಲ್ಲಿ ಸಿಎಂ ಸಿದ್ದರಾಮಯ್ಯ ಅವರು ನಿಮಗೆಲ್ಲ ಒಳ್ಳೆಯದಾಗಲಿ ಎಂದು ಶುಭ ಹಾರೈಸಿದರು.

ಪ್ರಭಾಕರ್‌ಗೂ ಸನ್ಮಾನ:

ಕ್ಷೇಮಾಭಿವೃದ್ಧಿ ನಿಧಿಗೆ 25 ಲಕ್ಷ ಮಂಜೂರು ಮಾಡುವುದಕ್ಕೆ ಸತತ ಪರಿಶ್ರಮ ವಹಿಸಿದ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರನ್ನು ಪ್ರತ್ಯೇಕವಾಗಿ ಅಭನಂದಿಸಲಾಯಿತು.

ಇದೇ ಸಂದರ್ಭದಲ್ಲಿ ಆರ್ಥಿಕ ನೆರವು ಕೊಡಿಸುವ ನಿಟ್ಟಿನಲ್ಲಿ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ನೀಡಿದ ಸಹಕಾರವನ್ನು ಕಾಸರಗೋಡು ಘಟಕದ ಅಧ್ಯಕ್ಷ ಎ.ಆರ್.ಸುಬ್ಬಯ್ಯಕಟ್ಟೆ ಅವರು ಸ್ಮರಿಸಿದರು.

ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ಕಾರ್ಯದರ್ಶಿ ಸೋಮಣ್ಣ ಕೆರಗೋಡು, ಕಾಸರಗೋಡು ಘಟಕದ ಪದಾಧಿಕಾರಿಗಳಾದ ಅಖಿಲೇಶ್,ಗಂಗಾಧರ, ಡಾ.ಮಲ್ಲಿಕಾರ್ಜುನನಾಸಿ, ಜೇಮ್ಸ್ ಮೆಂಡೋನ್ಸ್ ಮತ್ತಿತರರು ಇದ್ದರು.

# ಹದಗೆಟ್ಟ ರಸ್ತೆ ಅಭಿವೃದ್ಧಿ ಯಾವಾಗ?

(ವರದಿ.ಡಿ.ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಮಾ 20 ನಗರದ ಸಮಿಪ ಇರುವ ದತ್ತಾತ್ರೇಯ ದೇವಸ್ಥಾನ ಪಕದಿಂದ ಹಾದುಹೋಗುವ ರಸ್ತೆಯ ಬಹಳಷ್ಟು ಹದಗೆಟ್ಟು ಹೋಗಿದೆ ಈ ರಸ್ತೆಯು ಗೌರವ. ಖಂಡಾಳ ರಸ್ತೆ ಅಲ್ಲ ಅಲ್ಲಿ ಹದಗೆಟ್ಟು ಹೋಗಿದೆ ಎಂದು ಸಮಾಜ ಸೇವಕ ಧನರಾಜ ರಾಜೋಳೆ ಒತ್ತಾಯಿಸಿದ್ದಾರೆ. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇತ ಕಡೆ ಗಮನ ಹರಿಸುತ್ತಿಲ್ಲ ಎಂದು ದೂರಿದ್ದಾರೆ. ಇಲ್ಲಿಂದಲೆ ಬಹಳಷ್ಟು



ವಾಹನ ಸಂಚರಿಸುತ್ತವೆ ದ್ವಿಚಕ್ರವಾಹನ ಅಟು ಸೇರಿದಂತೆ ಅನೇಕ ವಾಹನಗಳು ಸಂಚರಿಸುತ್ತವೆ ಅಲ್ಲದೆ ಇಲ್ಲಿಂದಲೆ ಅನೇಕ ಗ್ರಾಮಗಳಿಗೆ ಸಂಚರಿಸುತ್ತವೆ ಎಂದರು. ಈ ಭಾಗದ ಜನರು ರಸ್ತೆಯ ಮೇಲೆ ಓಡಾಡುವ ಬೈಕ್ ಸವಾರರು ಬಿದ್ದು ಸಣ್ಣಪುಟ್ಟ ಗಾಯಗಳಾಗಿವೆ ಎಂದು ತಿಳಿಸಿದರು. ಇನ್ನುಮುಂದೆ ಯಾದರು ಸಂಬಂಧಿಸಿದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇತ ಕಡೆ ಗಮನ ಹರಿಸಿ ಆದಷ್ಟು ಬೇಗ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಧನರಾಜ ರಾಜೋಳೆ ಒತ್ತಾಯಿಸಿದ್ದಾರೆ.

# ತಾತ್ಕಾಲಿಕ ಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.20–ಕಲಬುರಗಿ ಮಹಾನಗರಪಾಲಿಕೆ ಶೇ. 5ರ ಯೋಜನೆಯಡಿ 2024–25ನೇ ಸಾಲಿಗಾಗಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಬುದ್ಧಿಮಾಂದ್ಯ ಮಕ್ಕಳಿಗೆ ಫೀಜಿಯೋಥೆರಫಿ ಒಳಪಡಿಸಲು ಅರ್ಜಿ ಆಹ್ವಾನಿಸಿ, ಅರ್ಹ ಹಾಗೂ ಅನರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಕಲಬುರಗಿ ಮಹಾನಗರಪಾಲಿಕೆಯ ನೋಟೀಸ್ ಬೋರ್ಡ್‌ನಲ್ಲಿ ಪ್ರಕಟಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಉಪ ಆಯುಕ್ತರು (ಆಡಳಿತ) ಅವರು ತಿಳಿಸಿದ್ದಾರೆ.

ಕಲಬುರಗಿ ಮಹಾನಗರ ಪಾಲಿಕೆಯ http://www.kalaburagicity.mrc.gov ವೆಬ್‌ಸೈಟ್‌ನಲ್ಲಿಯೂ ಸಹ ಈಗಾಗಲೇ ಪ್ರಚುರಪಡಿಸಲಾಗಿದ್ದು. ಸದರಿ ತಾತ್ಕಾಲಿಕ ಅರ್ಹ ಹಾಗೂ ಅನರ್ಹ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳು ಇದ್ದಲ್ಲಿ 2025ರ ಏಪ್ರಿಲ್ 5 ರೊಳಗಾಗಿ ಪೂರಕ ದಾಖಲೆಗಳೊಂದಿಗೆ ಆಕ್ಷೇಪಣೆಗಳೊಂದಿಗೆ ಮಹಾನಗರ ಪಾಲಿಕೆ ಕಚೇರಿಯಲ್ಲಿ ಆಕ್ಷೇಪಣೆ ಸಲ್ಲಿಸಬೇಕು. ಕೊನೆಯ ದಿನಾಂಕದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

# ಹತ್ತನೇ ತರಗತಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:– ಮಾ 20 ತಾಲೂಕಿನ ಭೋಸಗಾ ಗ್ರಾಮದ ಸರಕಾರಿ ಪ್ರೌಢಶಾಲೆಯಲ್ಲಿ ಹತ್ತನೇ ತರಗತಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ ಹಮ್ಮಿಕೊಳ್ಳಲಾಯಿತು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯ ಗುರುಗಳಾದ ವಿಜಯ ಲಕ್ಷ್ಮಿ ಹುಡಗೆ. ಮತ್ತು ಸರ್ಕಾರಿ ಪ್ರೌಢಶಾಲೆ ಕೂಹಿನೂರ ಪವಾಡ ಮುಖ್ಯಗುರುಗಳಾದ ಜಗದೀಶ್ ಶುಕ್ಲಾ, ಸರ್ಕಾರಿ ಪ್ರೌಢಶಾಲೆ ಎಕಂಬಾ ಮುಖ್ಯಗುರುಗಳಾದ ಚಂದ್ರಕಾಂತ ಬಿರಾದಾರ,ಎ ಡಬ್ಲ್ಯೂ ಜೆಸ್ಕಾಂ ಅಧಿಕಾರಿ ಸಂಜು ಕುಮಾರ್ ರ ಭೂಸ್ಗೆ ಕರ, ಆಲಗೂಡ ಶಾಲೆಯ ಸಹ ಶಿಕ್ಷಕರಾದ ನಾಗಪ್ಪ ನಿಣ್ಣೆ,ಎಸ್ ಡಿಎಂಸಿ ಸದಸ್ಯರಾದ ತ್ರಿಮುಖ ಜಾದವ.ಶಿಕ್ಷಕರಾದ ವಸಂತರೆಡ್ಡಿ .ಪರಶುರಾಮ ಗಾಯಕವಾಡ. ರಮೇಶ ಪೂಜಾರಿ. ವಿಜಯಲಕ್ಷ್ಮಿ ಪಟ್ಟಣಶೆಟ್ಟಿ. ಸುವರ್ಣ. ನಿಖಿತಾ ರಾಥೋಡ , ಶಿವಕುಮಾರ . ಮಾಯ ಜಾಧವ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಕಲಬುರಗಿಯಲ್ಲಿ ರೈಲ್ವೆ ವಿಭಾಗಿಯ ಕೇಂದ್ರ ಆರಂಭಿಸಿ: ಉಮೇಶ ಮುದ್ನಾಳ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ,ಮಾ.20–ಕಲಬುರಗಿಯು ಕಲ್ಯಾಣ ಕರ್ನಾಟಕ ಭಾಗದ ವಿಭಾಗೀಯ ಕೇಂದ್ರವಾಗಿದ್ದು, ರೈಲ್ವೆ ಇಲಾಖೆಯು ಕಲಬುರಗಿಯಲ್ಲಿ ರೈಲ್ವೆ ವಿಭಾಗೀಯ ನಿಯಂತ್ರಣ ಕೇಂದ್ರ ಆರಂಭ ಮಾಡುವಂತೆ ಅಖಿಲ ಭಾರತೀಯ ಕೋಲಿ ಸಮಾಜದ ರಾಜ್ಯ ಸಂಘಟನಾ ಕಾರ್ಯದರ್ಶಿ ಹಾಗೂ ಸಾಮಾಜಿಕ ಹೋರಾಟಗಾರ ಉಮೇಶ್ ಮುದ್ನಾಳ ಅವರು ಒತ್ತಾಯ ಮಾಡಿದ್ದಾರೆ. ಯಾದಗಿರಿ ರೈಲ್ವೆ ನಿಲ್ದಾಣಕ್ಕೆ ಆಗಮಿಸಿದ ಸಿಕಿಂದ್ರಾಬಾದ್ ರೈಲ್ವೆ ಪ್ರಧಾನ ವ್ಯವಸ್ಥಾಪಕರಾದ ಅರುಣಕುಮಾರ್ ಜೈನ್ ಅವರಿಗೆ ಮನವಿ ಪತ್ರ ಸಲ್ಲಿಸಿ ಮಾತನಾಡಿದ ಅವರು, ರೈಲ್ವೆ ಇಲಾಖೆಗೆ ಕಲ್ಯಾಣ ಕರ್ನಾಟಕ ಭಾಗದ ಕಲಬುರಗಿ ಹಾಗೂ ಯಾದಗಿರಿ, ರಾಯಚೂರು, ಬೀದರ್, ಕೊಪ್ಪಳ ಜಿಲ್ಲೆಯಿಂದ ಹೆಚ್ಚು ಆದಾಯ ಬರುತ್ತದೆ. ಈ ಭಾಗದಿಂದ ಅತಿಹೆಚ್ಚು ಪ್ರಯಾಣಿಕರು ಸಂಚಾರ ಮಾಡುತ್ತಾರೆ. ಹೀಗಾಗಿ ಕಲಬುರಗಿ ಜಿಲ್ಲೆಯಲ್ಲಿ ರೈಲ್ವೆ ವಿಭಾಗೀಯ ಕೇಂದ್ರ ಆರಂಭ ಮಾಡಿದರೆ ಅನುಕೂಲವಾಗಲಿದೆ. ಗುಂತಕಲ್ ಸಿಕಿಂದ್ರಾಬಾದ್, ಸೊಲ್ಲಾಪುರ ವಿಭಾಗದಿಂದ ತೆಲುಗು ಹಾಗೂ ಮರಾಠಿ ಮಾತನಾಡಲು ಸಾರ್ವಜನಿಕರಿಗೆ ಮಾತೃಭಾಷೆ ಸಮಸ್ಯೆಯಾಗಲಿದೆ. ಕಲಬುರಗಿ ವಿಭಾಗೀಯ ಕೇಂದ್ರದ ನಿಯಂತ್ರಣ ಕೇಂದ್ರ ಆರಂಭ ಮಾಡುವುದರಿಂದ ಈ ಭಾಗದ ರೈಲ್ವೆ ನಿಲ್ದಾಣಗಳ ಮೇಲೆ ತ್ವರಿತಗತಿಯಾಗಿ ನಿಗಾವಹಿಸಬಹುದಾಗಿದೆ. ಕಚೇರಿ ಕೆಲಸಕ್ಕೆ ತೆರಳುವ ಸಾರ್ವಜನಿಕರಿಗೆ ಹಾಗೂ ರೈಲ್ವೆ ಸಿಬ್ಬಂದಿ ವರ್ಗದವರಿಗೆ ಅನುಕೂಲವಾಗಲಿದೆ. ಅಲ್ಲದೆ ಈ ಭಾಗದ ರೈಲ್ವೆ ನಿಲ್ದಾಣಗಳು ಅಭಿವೃದ್ಧಿ ಹೊಂದಲು ಸಾಧ್ಯವಾಗಲಿದೆ. ಆದ್ದರಿಂದ ಕೂಡಲೇ ಕೇಂದ್ರ ರೈಲ್ವೆ ಇಲಾಖೆಯು ಕಲಬುರಗಿಯಲ್ಲಿ ವಿಭಾಗೀಯ ಕೇಂದ್ರ ಆರಂಭ ಮಾಡುವಂತೆ ಒತ್ತಾಯ ಅವರು ಮನವಿ ಪತ್ರದಲ್ಲಿ ಒತ್ತಾಯಿಸಿದ್ದಾರೆ.

ಯಾದಗಿರಿ ರೈಲ್ವೆ ನಿಲ್ದಾಣದಲ್ಲಿ 12 ಎಕ್ಸ್‌ಪ್ರೆಸ್ ರೈಲ್ವೆ ಗಾಡಿಗಳು ನಿಲುಗಡೆ ಆಗಬೇಕು. ಕೊವೀಡ್ ಸಂದರ್ಭದಲ್ಲಿ ರದ್ದಾಗಿರುವ ಇಂಟರ್ ಸೀಟಿ ರೈಲ್ವೆ ಗಾಡಿ ಮರು ಆರಂಭ ಮಾಡಬೇಕು. ಯಾದಗಿರಿ ರೈಲ್ವೆ ನಿಲ್ದಾಣ–ಕ್ಕೆ ಅಗತ್ಯ ಮೂಲಭೂತ ಸೌಕರ್ಯಗಳೊಂದಿಗೆ ಹೈಟೆಕ್ ಸೌಲಭ್ಯ ಕಲ್ಪಿಸಿ ಮಾದರಿ ರೈಲ್ವೆ ನಿಲ್ದಾಣ ಮಾಡುವಂತೆ ಈ ವೇಳೆ ಮತ್ತೊಂದು ಮನವಿ ಪತ್ರದ ಮೂಲಕ ಉಮೇಶ್ ಮುದ್ನಾಳ ಒತ್ತಾಯ ಮಾಡಿದರು.

ಈ ವೇಳೆ ಪ್ರಭು ಕೋಡಾಲ್,ರಾಜು ಜಾಧವ್,ಲೊಕೇಶ್ ಭೀಮನಹಳ್ಳಿ, ಆನಂದಭೀಮನಹಳ್ಳಿ,ವಿಜಯಕುಮಾರ್ ಚವ್ಹಾಣ, ಪಿಡ್ಡಪ್ಪ ನಾಯಕ ಗೊಂದೇನೂರು, ಶರಣು ಅಂಗಡಿ,ಶೇಖಪ್ಪಗೊಂದೇನೂರ, ತಿಪ್ಪಣ್ಣ ಕಲದಾಳ,ನಿಂಗಪ್ಪ ಮೋಸಿ ಸೇರಿದಂತೆ ಅನೇಕ ಉಪಸ್ಥಿತರಿದ್ದರು.



ಹುಣಸಗಿ : ಹುಣಸಗಿ ತಾಲೂಕಿನಲ್ಲಿ ಜಯ ಕರ್ನಾಟಕ ಜನಪರ ವೇದಿಕೆಯ ಸಂಸ್ಥಾಪಕರಾದ ಗುಣರಂಜನ್ ಶೆಟ್ಟಿ ಅಣ್ಣನವರ ಹುಟ್ಟು ಹಬ್ಬದ ಪ್ರಯುಕ್ತ ಇಂದು ಜಿಲ್ಲಾ ಯಾದಗಿರಿ ತಾಲೂಕ್ ಹುಣಸಗಿ ಜಯ ಕರ್ನಾಟಕ ಜನಪರ ವೇದಿಕೆಯ ಅಧ್ಯಕ್ಷರಾದ ಪ್ರಭುಗೌಡ ಪೋತರೆಡ್ಡಿ ಅವರು ಇಂದು ಹುಣಸಗಿ ತಾಲೂಕಿನ ಸರಕಾರಿ ಹಾಸ್ಪಿಟಲ್ ನಲ್ಲಿ ಇದ್ದಂತಹ ಎಲ್ಲಾ ಮಹಿಳೆ ಮತ್ತು ವೃದ್ಧರಿಗೆ ಹಣ್ಣು ಹಂಪಲ ಜೊತೆಗೆ ತಂಪು ಪಾನೀಯ ಹಂಚಲಾಯಿತು ಮತ್ತು ವೃದ್ಧಾಶ್ರಮದಲ್ಲಿ ಕೂಡ ಹಣ್ಣು ಹಂಪಲವನ್ನು ತಂಪು ಪಾನೀಯಗಳನ್ನು ಹಂಚಲಾಯಿತು ಜಯ ಕರ್ನಾಟಕ ಜನಪರ ಸಂಘಟನೆಯ ಹುಣಸಗಿ ತಾಲೂಕಿನ ಅಧ್ಯಕ್ಷ ಪ್ರಭು ಗೌಡ ಪೋತರೆಡ್ಡಿ ಹಾಗೂ ದವಲ್ ಶಾಬ ಚಂದಪ್ಪ ಪುಂಡಲೀಕ ಲಾಲಸಿಂಗ್ ಮೈಬೂಬ್ ಕಲಕೇರಿ ರವಿ ಸುರೇಶ್ ಚವ್ಹಾಣ ಅಂಬರೀಶ್ ಎ ಲ್ಲಾ ಪದಾಧಿಕಾರಿಗಳು ಇದ್ದರು. (ಮಲ್ಲಮ್ಮ ನುಡಿ ಚಿತ್ರ)

## ಅರ್ಹ ಫಲಾನುಭವಿಗಳಿಗೆ ಕಾಲಮಿತಿಯಲ್ಲಿಯೇ ಸೌಲಭ್ಯ ಒದಗಿಸಿ

ಮಲ್ಲಮ್ಮ ನುಡಿ ವಾರ್ತೆ

ಗದಗ,ಮಾ.20: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉಪಹಂಚಿಕೆ ಯೋಜನೆಯಡಿ ಅರ್ಹ ಫಲಾನುಭವಿಗಳ ಆಯ್ಕೆ ಕೈಗೊಂಡು ಕಾಲಮಿತಿಯಲ್ಲಿಯೇ ಅವರಿಗೆ ಸೌಲಭ್ಯ ದೊರಕಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಜಿಲ್ಲಾಡಳಿತ ಭವನದ ಕಚೇರಿ ಸಭಾಂಗಣದಲ್ಲಿ ಎಸ್.ಸಿ.ಎಸ್.ಪಿ. ಹಾಗೂ ಟಿ.ಎಸ್.ಪಿ. ಯೋಜನೆಯಡಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆಯಾ ಆರ್ಥಿಕ ಸಾಲಿನಲ್ಲಿ ಅನುಷ್ಠಾನಿತ ಕಾಮಗಾರಿಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸುವ ತ್ತ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕು. ಯಾವುದೇ ಕಾರಣಕ್ಕೂ ಬಿಡುಗಡೆಯಾದ ಅನುದಾನ ಲ್ಯಾಪ್ಸ್ ಆಗದಂತೆ ಹಾಗೂ ದುರ್ಬಳಕೆಯಾಗದಂತೆ ನೋಡಿಕೊಳ್ಳಬೇಕು. ಎಸ್‌ಸಿಎಸ್‌ಟಿ ಕಾಲೋನಿಯಲ್ಲಿ ಕೈಗೊಳ್ಳಬೇಕಾದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವಾಗ ಗುಣಮಟ್ಟದ ಕಡೆಗೂ ನಿಗಾವಹಿಸಬೇಕು ಎಂದರು.

# ತಾಯಿ ಮೇಲೆ ಮಗನ ಹಲ್ಲೆ

ಕಲಬುರಗಿ,ಮಾ.20–ಕುಡಿಯಲು (ಮದ್ಯಪಾನ ಮಾಡಲು) ಹಣ ನೀಡದೇ ಇರುವುದಕ್ಕೆ ಮಗನೊಬ್ಬ ತಾಯಿ ಮೇಲೆ ಹಲ್ಲೆ ಮಾಡಿರುವ ಘಟನೆ ಫರಹತಾಬಾದ ಪೊಲೀಸ್ ಠಾಣೆ ವ್ಯಾಪ್ತಿಯ ತಿಳಗೋಳ ಗ್ರಾಮದಲ್ಲಿ ನಡೆದಿದೆ.

ರಾಹುಲ್ ತಂದೆ ಮಲ್ಕಪ್ಪಗೌಡ ಪೊಲೀಸ್ ಪಾಟೀಲ (26) ಎಂಬಾತನೆ ಅವರ ತಾಯಿ ಸುಮಂಗಲಾ ಅವರ ಮೇಲೆ ಹಲ್ಲೆ ನಡೆಸಿದ್ದು, ಅವರು ಈ ಸಂಬಂಧ ಫರಹತಾಬಾದ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ. ರಾಹುಲ್ ಕುಡಿತದ ಚಟಕ್ಕೆ ಅಂಟಿಕೊಂಡಿದ್ದು, ಕುಡಿದು ಬಂದು ಮನೆಯಲ್ಲಿ ಜಗಳ ಮಾಡುತ್ತಿದ್ದ. ಜೊತೆಗೆ ಕುಡಿಯಲು ಹಣ ನೀಡುವಂತೆ ತಾಯಿಯನ್ನು ಪೀಡಿಸುತ್ತಿದ್ದ. ಹಣ ಕೊಡದೇ ಹೋದಾಗ ಜಗಳ ತೆಗೆದು ಹೊಡೆಬಡೆ ಮಾಡುತ್ತಿದ್ದ. ಮಾ.19 ರಂದು ಸಹ 20 ಸಾವಿರ ರೂಪಾಯಿ ಕೊಡುವಂತೆ ಪೀಡಿಸಿದ್ದು, ಹಣ ಇಲ್ಲ ಎಂದಿದಕ್ಕೆ ಬಡಿಗೆಯಿಂದ ಹಲ್ಲೆ ಮಾಡಿದ್ದಾನೆ ಎಂದು ಅವರು ದೂರಿನಲ್ಲಿ ತಿಳಿಸಿದ್ದಾರೆ. ತನಿಖೆ ನಡೆದಿದೆ.

# ಕಾಂತರಾಜ ವರದಿ ಜಾರಿಯಾಗಲಿ, ಹೊಸ ಜಾತಿ ಜನಗಣತಿ ಮಾಡಿ: ವೈಜನಾಥ ಸೂರ್ಯವಂಶಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 20 : ರಾಜ್ಯ ಸರ್ಕಾರಕ್ಕೆ ದಮ್ ಇದ್ದರೆ ಕೂಡಲೇ ಕಾಂತರಾಜ ವರದಿ ಜಾರಿ ಮಾಡಿ, ಹೊಸ ಜಾತಿ ಜನಗಣತಿ ಮಾಡಿಸಿ ಒಳ ಮೀಸಲಾತಿ ಜಾರಿ ಮಾಡದೇ ಮೀಸಲಾತಿ ಮುಂದುವರೆಯಲಿ ಎಂದು ಒಳ ಮೀಸಲಾತಿ ವಿರೂದ್ಧ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ವೈಜಿನಾಥ ಸೂರ್ಯವಂಶಿ ಒತ್ತಾಯಿಸಿದ್ದಾರೆ.

ಗುರುವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, 1932ರಲ್ಲಿ ಬ್ರಿಟಿಷ್ ಸರ್ಕಾರದಲ್ಲಿ ಸಹ ಮೀಸಲಾತಿ ವ್ಯವಸ್ಥೆ ಜಾರಿಯಲ್ಲಿತ್ತು. ನಂತರ ದೇಶ ಸ್ವತಂತ್ರವಾದ ಬಳಿಕ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರಿಗೆ ಸಂವಿಧಾನ ರಚನೆ ಜವಾಬ್ದಾರಿ ನೀಡಲಾಯಿತು. ಸಂವಿಧಾನದ ಆರ್ಟಿಕಲ್ ನಂ 340ರ ಪ್ರಕಾರ ಹಿಂದುಳಿದ ವರ್ಗಗಳಿಗೆ, 341ರ ಪ್ರಕಾರ ಪರಿಶಿಷ್ಟರಿಗೆ, 342ರ ಅನ್ವಯ ಬುಡಕಟ್ಟು ಪಂಗಡಗಳಿಗೆ ಮೀಸಲಾತಿ ನೀಡಬೇಕೆಂದು ಅಂಬೇಡ್ಕರ್ ಅವರು ತನ್ನ ಮಡದಿ ಹಾಗೂ ಮಕ್ಕಳ ಸಾವು ಸಹ ಲೆಕ್ಕಿಸದೇ ದೇಶದ ಹಿತಕ್ಕಾಗಿ ಸಂವಿಧಾನ ಬರೆದರು. ಸಾವಿರಾರು ವರ್ಷಗಳು ತುಳಿತಕ್ಕೊಳಗಾದ ನಮ್ಮವರಿಗೆ ಮಾತ್ರ ಸಂವಿಧಾನ ರಚಿಸಿಲ್ಲ, ಬದಲಿಗೆ ಈ ದೇಶದಲ್ಲಿ ರಾಜಕೀಯ, ಆರ್ಥಿಕ, ಶೈಕ್ಷಣಿಕ, ಸಾಮಾಜಿಕ ಹಾಗೂ ಔದ್ಯೋಗಿಕವಾಗಿ ಹಿಂದುಳಿದವರಿಗೆ ಮೀಸಲಾತಿ ಕಲ್ಪಿಸಿ ಸಮಾಜದ ಮುಖ್ಯ ವಾಹಿನಿಗೆ ತರಲು ಯತ್ನಿಸಿದರು. ಆದರೆ ಆಳುವ ಸರ್ಕಾರಗಳು ಪರಿಶಿಷ್ಟ ಯಾದಿಯಲ್ಲಿ 6 ಜಾತಿಗಳಿದ್ದುದು 101ಕ್ಕೆ ತಂದು ನಿಲ್ಲಿಸಿದವು. ಅದರಲ್ಲಿ 95 ಜಾತಿಗಳು ಯಾವುದೇ ಅರ್ಜಿ ಹಾಕದೇ ಮೀಸಲಾತಿ ಪಡೆದಿರುವುದು, ಅದನ್ನು ಜಾರಿಗೆ ತಂದ ಸರ್ಕಾರಗಳು ಸಂವಿಧಾನ ವಿರೋಧಿ ಕ್ರಮ ಅನುಸರಿಸಿವೆ ಎಂದು ಹರಿಹೈದರು.

ಈ ಹಿಂದೆ ಇಂದಿರಾ ಸಾಹಾನಿ ತೀರ್ಪಿನ ಪ್ರಕಾರ 50 ಪ್ರತಿಶತ ಮೀಸಲಾತಿ ದಾಟಬಾರದೆಂದು ಸರ್ವೋಚ್ಚ ನ್ಯಾಯಾಲಯ ಹೇಳಿತ್ತು. ಆದರೆ ಇಂದು ಅದೇ ಸರ್ವೋಚ್ಚ ನ್ಯಾಯಾಲಯ ಒಳ ಮೀಸಲಾತಿ ಜಾರಿ ಅಧಿಕಾರ ರಾಜ್ಯಗಳಿಗೆ ನೀಡಿ ಗೊಂದಲಕ್ಕೆ ಎಡೆ ಮಾಡಿ ಕೊಟ್ಟಿದೆ. ಇತ್ತಿಚೀನ ತೀರ್ಪುಗಳು ಸಂವಿಧಾನದ ಆಶೆಯದ ವಿರೂದ್ಧವಾಗಿ ಬರುತ್ತಿರುವುದು ಹಾಗೂ ಆಳುವ ಸರ್ಕಾರಗಳು ಕೆಲವರ ಕೈಗೊಂಬೆಯಾಗಿ ವರ್ತಿಸುತ್ತಿರುವುದು ಪ್ರಜಾಪ್ರಭುತ್ವಕ್ಕೆ ಧಕ್ಕೆ ತರುವಂತಾಗಿದೆ ಎಂದು ಗುಡುಗಿದರು.

ಅಂಬೇಡ್ಕರ್ ಅವರು ನೀಡಿರುವ ಮೀಸಲಾತಿ ರುಚಿ ಉಂಡ ಕೆಲವರು ವಿನಾಕಾರಣ ಜಗಳಕ್ಕಿಳಿದು ಸಮಾಜದಲ್ಲಿ ಗೊಂದಲ ಹುಟ್ಟು ಹಾಕುವ ಕಾರ್ಯ ಮಾಡುತ್ತಿರುವರು. ಸದಾಶಿವ ಆಯೋಗ ಜಾರಿ ಮಾಡದೇ ಸರ್ಕಾರ ಈಗ ನೇಮಕ ಮಾಡಿರುವ ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿ ನಾಗಮೋಹನದಾಸ ಅವರಿಗೆ ಇನ್ನು ಆರು ತಿಂಗಳು ಕಾಲಾವಕಾಶ ನೀಡಿ ಪ್ರತಿಯೊಂದು ಜಿಲ್ಲೆ, ತಾಲೂಕು, ಹೊಬಳಿ, ಗ್ರಾಮ, ಓಣಿಗಳಿಗೆ ತೆರಳಿ ದತ್ತಾಂಶ ಸಂಗ್ರಹಣೆ ಮಾಡಿ ವರದಿ ಜಾರಿ ಮಾಡಲಿ ಅದರ ಜೊತೆಗೆ ಯಾರ ಒತ್ತಡಕ್ಕೆ ಮಣಿಯದೇ ರಾಜ್ಯ ಸರ್ಕಾರ ಕೂಡಲೇ ಕಾಂತರಾಜ ವರದಿ ಜಾರಿಗೊಳಿಸಲಿ ಎಂದು ಒತ್ತಾಯಿಸಿದರು.

ಸಮಿತಿಯ ಜಿಲ್ಲಾಧ್ಯಕ್ಷ ವಿಷ್ಣುವರ್ಧನ ವಾಲದೊಡ್ಡಿ ಮಾತನಾಡಿ, ಸಂವಿಧಾನದಲ್ಲಿ ಡಾ.ಅಂಬೇಡ್ಕರ್ ಅವರು ಮೀಸಲಾತಿ ಬಗ್ಗೆ ಉಲ್ಲೆಖಿಸಿರುವರೆ ಹೊರತು ಒಳ ಮೀಸಲಾತಿ ಬಗ್ಗೆ ಎಲ್ಲಿಯೂ ಪ್ರಸ್ತಾಪ ಮಾಡಿಲ್ಲ. ಪರಿಶಿಷ್ಟರು, ಬುಡಕಟ್ಟು ಹಾಗೂ ಹಿಂದುಳಿದ ವರ್ಗಗಳು ರಾಜಕೀಯ, ಸಾಮಾಜಿಕ, ಶೈಕ್ಷಣಿಕ, ಔದ್ಯೋಗಿಕವಾಗಿ ಸಬಲರಾಗುವವರೆಗೆ ಮೀಸಲಾತಿ ನೀಡಬೇಕು, ಸಮಾಜದ ಮುಖ್ಯ ವಾಹಿನಿಗೆ ತಲುಪಿದ ನಂತರ ಮೀಸಲಾತಿ ನೀಲ್ಲಿಸಿದರೆ ನಮ್ಮದೇನು ತಕರಾರಿಲ್ಲ ಎಂದರು.

ಸಮಿತಿಯ ಪದಾಧಿಕಾರಿಗಳಾದ ಚಂದ್ರಕಾಂತ ನಿರಾಟೆ, ರಾಜಕುಮಾರ ಮೂಲಭಾರತಿ, ಅಂಬ್ರೀಶ ಕುದುರೆ, ಸಂಜುಕುಮಾರ ಜಂಜೀರೆ, ಸಂಜುಕುಮಾರ ಮೇತ್ರೆ, ರಾಘವೇಂದ್ರ ಮೀನಕೇರಾ, ರಾಮು ದೊಡಬಾವಿ, ದಯಾನಂದ ನೌಲೆ, ರಾಜಕುಮಾರ ಗುನ್ನಳ್ಳಿ, ಜಗನ್ನಾಥ ಹೊನ್ನಾ, ರವಿ ಭೂಸಂಡೆ, ರಾಜಕುಮಾರ ಡೋಂಗ್ರೆ, ಗೌತಮ ಚೌಹಾಣ, ರವಿ ಮೋರೆ, ಹರ್ಷಿತ ದಾಂಡೇಕರ್ ಪತ್ರಿಕಾಗೋಷ್ಠಿಯಲ್ಲಿದ್ದರು.

# ಗೋಡಂಬಿ ಭಾರತಕ್ಕೆ ಪರಿಚಯಿಸಿದ ಪ್ರಮುಖ ವಾಣಿಜ್ಯ ಬೆಳೆಗಳಲ್ಲಿ ಒಂದಾಗಿದೆ:ಡೀನ್ ಡಾ.ಎಸ್.ವಿ.ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಬೀದರ:ಮಾ.20:ಗೋಡಂಬಿ (ಅನಾಕಾರ್ಡಿಯಂ ಆಕ್ಸಿಡೆಂಟೇಲ್ ಎಲ್.) 16ನೇ ಶತಮಾನದಲ್ಲಿ ಪೋರ್ಚುಗೀಸರು ಭಾರತಕ್ಕೆ ಪರಿಚಯಿಸಿದ ಪ್ರಮುಖ ವಾಣಿಜ್ಯ ಬೆಳೆಗಳಲ್ಲಿ ಒಂದಾಗಿದೆ, ಭಾರತದಲ್ಲಿ ಗೋಡಂಬಿಯನ್ನು ಆರಂಭದಲ್ಲಿ ಗೋವಾದಲ್ಲಿ ಪರಿಚಯಿಸಲಾಯಿತು ಮತ್ತು ನಂತರ ಇತರ ರಾಜ್ಯಗಳಿಗೆ ವಿಸ್ತರಿಸಲಾಯಿತು ಎಂದು ಬೀದರ ತೋಟಗಾರಿಕೆ ಮಹಾವಿದ್ಯಾಲಯದ ಡೀನ್ ಹಾಗೂ ಪ್ರಧಾನ ಸಂಶೋಧಕರಾದ ಡಾ.ಎಸ್.ವಿ.ಪಾಟೀಲ್ ತಿಳಿಸಿದರು.

ಅವರು ಇತ್ತೀಚಿಗೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟ, ತೋಟಗಾರಿಕೆ ಮಹಾವಿದ್ಯಾಲಯ ಬೀದರ ಮತ್ತು ಗೋಡಂಬಿ ಮತ್ತು ಕೋಕೋ ಅಭಿವೃದ್ಧಿ ನಿರ್ದೇಶನಾಲಯ ಕೊಚ್ಚಿ ಇವರುಗಳ ಸಂಯುಕ್ತಾಶ್ರಯದಲ್ಲಿ ಬೀದರನ ತೋಟಗಾರಿಕೆ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ "ಗೋಡಂಬಿ ಬೆಳೆಯ ಸುಧಾರಿತ ಉತ್ಪಾದನಾ ತಾಂತ್ರಿಕತೆ, ಸಂಸ್ಕರಣೆ ಮತ್ತು ಮೌಲ್ಯವರ್ಧನೆ" ಕುರಿತು ಜಿಲ್ಲಾಮಟ್ಟದ ವಿಚಾರಣ ಸಂಕಿರಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕಳಪೆ ಮಣ್ಣಿನ ಪರಿಸ್ಥಿತಿಗಳಿಗೆ ಹೊಂದಿಕೊಳ್ಳುವ ಸ್ಥಿತಿಸ್ಥಾಪಕ ಮತ್ತು ಬರನಿರೋಧಕ ಮರವಾಗಿ, ಅರಣ್ಯನಾಶ ಮತ್ತು ಮಣ್ಣಿನ ಸವೆತವನ್ನು ಎದುರಿಸುವ ಹೋರಾಟದಲ್ಲಿ ಇದು ಪರಿಸರ ಪ್ರಯೋಜನಗಳನ್ನು ನೀಡುತ್ತದೆ ಆದ್ದರಿಂದ ಇದನ್ನು ತ್ಯಾಜ್ಯ ಭೂಮಿಯ ಚಿನ್ನದ ಗಣಿ ಎಂದು ಕರೆಯಲಾಗುತ್ತದೆ. ಭಾರತದ ಗೋಡಂಬಿ ಉತ್ಪಾದನೆಯು 2021-22 ರಲ್ಲಿ 779 ಸಾವಿರ ಟನ್‌ಗಳಿಂದ 2022-23 ರಲ್ಲಿ 810 ಸಾವಿರ ಟನ್‌ಗಳಿಗೆ ಏರಿಕೆಯಾಗಿದ್ದು, ಶೇ. 4 ರಷ್ಟು ಬೆಳವಣಿಗೆಯ ದರವನ್ನು ದಾಖಲಿಸಿದೆ. ಬೀದರ್ ಗೋಡಂಬಿ ಬೆಳೆಯಲು ಸೂಕ್ತವಾಗಿದೆ ಹಾಗೂ ನೈಸರ್ಗಿಕ ಸಂಪನ್ಮೂಗಳಾದ ನೀರು ಮತ್ತು ಮಣ್ಣುಗಳ ಸರಿಯಾದ ಸದ್ಬಳಕೆ ಹಾಗೂ ಸಂರಕ್ಷಣೆಯಲ್ಲಿ ಗೋಡಂಬಿ ಬೆಳೆಯ ಪಾತ್ರ ತಿಳಿಸುತ್ತಾ, ಬರಡು ಭೂಮಿಗೆ ಬಂಗಾರ ಬೆಳೆಯಾದ ಗೋಡಂಬಿಯನ್ನು ಬೆಳೆದು ಅಧಿಕ ಲಾಭ ಪಡೆಯಲು ಡಾ.ಎಸ್.ವಿ.ಪಾಟೀಲ್ ಕರೆ ನೀಡಿದರು.

ಕಲಬುರಗಿ ಕೃಷಿ ಮಹಾವಿದ್ಯಾಲಯದ ನಿವೃತ್ತ ಡೀನ್ ಡಾ.ಸುರೇಶ ಪಾಟೀಲ ಮಾತನಾಡಿ, ಗೋಡಂಬಿಯನ್ನು ಸಾಮಾನ್ಯವಾಗಿ 'ಬಡವರ ಬೆಳೆ ಮತ್ತು ಶ್ರೀಮಂತರ ಆಹಾರ' ಎಂದು ಪರಿಗಣಿಸಲಾಗುತ್ತದೆ ಮತ್ತು ಇದು ಜಾಗತಿಕ ಮಾರುಕಟ್ಟೆಯಲ್ಲಿ ಒಂದು ಪ್ರಮುಖ ನಗದು ಬೆಳೆ ಮತ್ತು ಹೆಚ್ಚು ಮೌಲ್ಯಯುತವಾದ ಬೀಜವಾಗಿದೆ. ಗೋಡಂಬಿಯಂತಹ ಬೀಜಗಳನ್ನು ತಿನ್ನುವುದು ಹೃದಯರಕ್ತನಾಳದ ಕಾಯಿಲೆಯ ಅಪಾಯವನ್ನು ಕಡಿಮೆ ಮಾಡುತ್ತದೆ ಎಂದು ಹೇಳಿದರು.

ಬೀದರ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರಾದ ಜಗನ್ನಾಥಮೂರ್ತಿ ಮಾತನಾಡಿ, ಗೋಡಂಬಿ ಮೂಲತಃ ಉಷ್ಣವಲಯದ ಬೆಳೆಯಾಗಿದ್ದು, ಬೆಚ್ಚಗಿನ, ತೇವಾಂಶವುಳ್ಳ ಮತ್ತು ಸಾಮಾನ್ಯವಾಗಿ ಉಷ್ಣವಲಯದ ಹವಾಮಾನದಲ್ಲಿ ಉತ್ತಮವಾಗಿ ಬೆಳೆಯುತ್ತದೆಂದರು.

ಕಾರ್ಯಕ್ರಮದಲ್ಲಿ ಅಮೋಲ ವಿಜಾಪೂರೆ, ನಿರ್ದೇಶಕರು, ವೀರಭದ್ರೇಶ್ವರ ಅಗ್ರೋ ಇಂಡಸ್ಟ್ರೀಸ್ ಪ್ರತಾಪನಗರ, ಬೀದರ ಅವರು ತಮ್ಮ ಸಂಸ್ಥೆಯು ಯಾವು ರೀತಿಯಲ್ಲಿ ಗೋಡಂಬಿಯನ್ನು ಸಂಸ್ಕರಣೆ ಮಾಡಿ ಮಾರಾಟ ಮಾಡುವ ಬಗ್ಗೆ ವಿವರವಾಗಿ ಮಾಹಿತಿಯನ್ನು ನೀಡಿದರು. ಇದೇ ಸಂಧರ್ಭದಲ್ಲಿ ಇವರು ತಮ್ಮ ಘಟಕದಲ್ಲಿ ಸಂಸ್ಕರಿಸಿದಂತಹ ಕೆಲವು ಗೋಡಂಬಿಗಳನ್ನು ವಸ್ತು ಪ್ರದರ್ಶನಕ್ಕಾಗಿ ಇಟ್ಟಿರುವುದರಿಂದ ರೈತರು ಸದರಿ ಗೋಡಂಬಿ ಪ್ರದರ್ಶನವನ್ನು ನೋಡಿ ಸದರಿಯವರ ಸಂಸ್ಕರಣಾ ಘಟಕದ ಕಾರ್ಯವೈಖರಿಯ ಬಗ್ಗೆ ರೈತರು ಮಾಹಿತಿಯನ್ನು ಪಡೆದರು. ಈ ತರಬೇತಿ ಕಾರ್ಯಕ್ರಮದಲ್ಲಿ ಬೀದರ ಜಿಲ್ಲೆಯ 150 ರೈತರು ಭಾಗಿಯಾಗಿ ಸದುಪಯೋಗ ಪಡೆದರು.

ಡಾ. ಎಸ್. ವಿ. ಪಾಟೀಲ, ಡಾ. ಪ್ರವೀಣ ಜೋಳಗೀಕರ, ಡಾ. ವಿ.ಪಿ. ಸಿಂಗ್, ಡಾ. ಅಶೋಕ ಸೂರ್ಯವಂಶಿ, ಡಾ. ಪ್ರಶಾಂತ, ಡಾ. ಹರೀಶ ಟಿ. ಹಾಗೂ ಡಾ. ಕಡ್ಲಿ ವೀರೇಶ ಇವರುಗಳು ವಿಷಯವಾರು ಸಮಗ್ರವಾದಂತಹ ತಾಂತ್ರಿಕ ಮಾಹಿತಿಯನ್ನು ರೈತರಿಗೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಡಾ. ವಿ.ಪಿ. ಸಿಂಗ್ ಅವರು ಪ್ರಸ್ತಾವಿಕ ನುಡಿ ಹೇಳಿದರು. ಡಾ. ಕಡ್ಲಿ ವೀರೇಶ ಇವರು ಎಲ್ಲಾ ಗಣ್ಯರಿಗೆ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಹಾಗೂ ಡಾ. ಪ್ರಶಾಂತ, ಸಹಾಯಕ ಪ್ರಾಧ್ಯಾಪಕರು ಇವರು ವಂದಿಸಿದರು.

# ಬೃಹತ್ ಸಮಾವೇಶಕ್ಕೆ ಎಲ್ಲರೂ ಸಾಕ್ಷಿಯಾಗಿ : ಭರತ ಕಾಂಬಳೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.20: ಇದೇ ಮಾರ್ಚ 26 ರಂದು ಡಾ. ಬಿ.ಆರ್.ಅಂಬೇಡ್ಕರ್ ವೃತ್ತದ ಹತ್ತಿರ, ಸಾಮಾಜಿಕ ಸಬಲೀಕರಣ ನಿಮಿತ್ಯ ನಡೆಯಲಿರುವ ಬ್ರಹತ್ ಬಹಿರಂಗ ಸಮಾವೇಶದಲ್ಲಿ ಎಲ್ಲರೂ ಭಾಗವಹಿಸಿ ಎಂದು ಆಲ್ ಇಂಡಿಂಯಾ ಪ್ಯಾಂಥರ್ ಸೇನಾ ಬೀದರನ ಅಧ್ಯಕ್ಷ ಭರತ ಕಾಂಬಳೆ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಗುರುವಾರ ಕರೆದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು. ಅಂದು ಡಾ. ಬಾಬಾಸಾಹೇಬ ಅಂಬೇಡ್ಕರರವರು ಅಸ್ಪ್ರಶ್ಯತೆ ನಿಮಿತ್ಯ ಹೋರಾಟ ಮಾಡಿದ ದಿನವನ್ನೇ ನಾವು ಸಾಮಾಜಿಕ ಸಬಲೀಕರಣ ದಿನವನ್ನಾಗಿ ಆಚರಿಸುತ್ತಿದ್ದೇವೆ ಸುಮಾರು 98 ವರ್ಷಗಳು ಕಳೆದರೂ ಇನ್ನೂ ನಮ್ಮಲ್ಲಿ ಜಾತಿ ಪದ್ಧತಿ ಹೋಗಿಲ್ಲ. ಅಸ್ಪ್ರಶ್ಯತೆ ನಿವಾರಣೆಯಾಗಿಲ್ಲ ಇದು ವಿಶಾದದ ಸಂಗತಿಯಾಗಿದೆ. ಹೀಗಾಗಿ ಎಲ್ಲಾ ಜಾತಿ, ಮತ, ಪಂಗಡದ ಜನರೆಲ್ಲ ಸೇರಿ ಇದೇ ಮಾರ್ಚ 26 ರಂದು ಬೀದರನ ಅಂಬೇಡ್ಕರ್ ವೃತ್ತದಲ್ಲಿ ಬ್ರಹತ್ ಬಹಿರಂತ ಸಮಾವೇಶ ಏರ್ಪಡಿಸಲಾಗಿದೆ. ಡಾ. ಬಿ.ಆರ್.ಅಂಬೇಡ್ಕರ್ ರವರ ಪುತ್ರ ರಾಜರತನ್ ಅಂಬೇಡ್ಕರ್ ರವರು ಸಮಾವೇಶಕ್ಕೆ ಆಗಮಿಸುತ್ತಿದ್ದಾರೆ. ಬಹಿರಂಗ ಸಮಾವೇಶದಲ್ಲಿ ಸುಮಾರು 5 ರಿಂದ 6 ಸಾವಿರ ಜನರು ಸೇರುವ ನಿರೀಕ್ಷೆ ಇದೆ. ಪಕ್ಷಭೇದ ಮರೆತು ಜಿಲ್ಲೆಯ ಎಲ್ಲಾ ಶಾಸಕರು, ಸಂಸದರು, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಪೌರಾಡಳಿತ ಸಚಿವ ರಹೀಂ ಖಾನ್ ಸಮಾವೇಶದಲ್ಲಿ ಭಾಗವಹಿಸುತ್ತಿದ್ದಾರೆ. ಇನ್ನೂ ಹೆಚ್ಚಿನ ಸಂಖೆಯಲ್ಲಿ ಸಾರ್ವಜನಿಕರು ಭಾಗವಹಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರದೀಪ ಜಂಜೀರೆ, ದೇವೇಂದ್ರ ಸೋನಿ, ದೇವರಾಜ ಆರ್ಯ, ಭಾಲ್ಕಿ ಬಿಎಸ್ಐ ಅಧ್ಯಕ್ಷ ವಿಶ್ವನಾಥ ಮೋರೆ, ಪ್ರಕಾಶ ಭಾವಿಕಟ್ಟಿ ಉಪಸ್ಥಿತರಿದ್ದರು.

# ರಂಜಾನ್ ಪ್ರಯುಕ್ತ 17 ನೆಯ ದಿನದ ಇಫ್ತಾರ್ ಕೂಟ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 20 : ಪ್ರಗತಿ ಆರೋಗ ಮತ್ತು ಶಿಕ್ಷಣ ಸಂಸ್ಥೆ ಹಾಗೂ ಅಖಿಲ ಭಾರತ ವಿಶ್ವವಿದ್ಯಾಲಯಗಳ ನೌಕರರ ಒಕ್ಕೂಟದ ಸಹಯೋಗ ದಲ್ಲಿ ಇಂದು ಪವಿತ್ರ ಹಬ್ಬ ರಂಜಾನ ಪ್ರಯುಕ್ತ 17ನೇ ದಿವಸದ ಇಫ್ತಾರ ಕೂಟ (ಸ್ನೇಹ ಮಿಲನ) ವನ್ನು ಏರ್ಪಡಿಸುಲಾಗಿತ್ತು. ಈ ಕೂಟದಲ್ಲಿ ಪಟೇಲ್ ಹೋಟೆಲ್ ಮಾಲೀಕರಾದ ಮೊ. ಶಫಿಯುದ್ದೀನ್ ಪಟೇಲ್ರವರು ಮಾತನಾಡಿ, ರಂಜಾನ ಪವಿತ್ರ ಹಬ್ಬವಾಗಿದ್ದು, ಸೃಷ್ಟಿಕರ್ತನಾದ ಅಲ್ಲಾಹನು ಈ ಭೂಮಿಯ ಮೇಲಿರುವ ಎಲ್ಲಾ ಜೀವಿಗಳಿಗೂ ಸುಖ-ಸಮೃದ್ಧಿ ನೀಡುವ ಕೆಲಸ ಮಾಡುತ್ತಾನೆ ಎಂದು ಅಭಿಪ್ರಾಯಪಟ್ಟರು. ಮಾನವರೆಲ್ಲರೂ ಸೂತ್ರದ ಗೊಂಬೆಗಳು. ದೇವರು ಸೂತ್ರದಾರನಾಗಿದ್ದು, ಎಲ್ಲರನ್ನೂ ಸಮಾನರನ್ನಾಗಿ ನೋಡಿಕೊಳ್ಳುತ್ತಾನೆ ಎಂದು ನುಡಿದರು.

ಅತಿಥಿಯಾಗಿ ಆಗಮಿಸಿದ ಪಶುವೈದ್ಯಕೀಯ ವಿಶ್ವವಿದ್ಯಾಲಯದ ನಿವೃತ್ತ ಅಧಿಕಾರಿಯಾದ ವೀರಭದ್ರಪ್ಪ ಉಪ್ಪಿನ ರವರು ಮಾತನಾಡುತ್ತ, ನಮ್ಮ ದೇಶವು ಸರ್ವ ಜನಾಂಗಗಳ ಶಾಂತಿಯ ತೋಟವಾಗಿದೆ.

ಯಾವುದೇ ಧರ್ಮವು ಕೆಟ್ಟದ್ದನ್ನು ಕಲಿಸುವುದಿಲ್ಲ. ಮನುಷ್ಯನು ತನ್ನ ಸ್ವಾರ್ಥ ಸಾಧನೆಗೆ ಜಾತಿ-ಮತ-ಪಂಥಗಳ ಮಧ್ಯದಲ್ಲಿ ಭೇದವನ್ನು ಹುಟ್ಟಿಸಿ ಅಶಾಂತಿಯನ್ನು ಸೃಷ್ಟಿಸುತ್ತಿದ್ದಾನೆ ಎಂದು ನುಡಿದರು. ಪ್ರಗತಿ ಆರೋಗ್ಯ ಮತ್ತು ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಅರವಿಂದ ಕುಲಕರ್ಣಿಯವರು ಮಾತನಾಡಿ, ತಮ್ಮ ತಮ್ಮ ಆರಾಧ್ಯ ದೇವರುಗಳನ್ನು ಪೂಜಿಸುವ ಹಕ್ಕು ಎಲ್ಲರಿಗಿದೆ. ಆದರೆ ಎಲ್ಲಕ್ಕೂ ಮಿಗಿಲಾಗಿ ದೈವಿಕ ಶಕ್ತಿಯು ಎಲ್ಲರನ್ನೂ ಕಾಪಾಡುತ್ತದೆ ಎನ್ನುವುದನ್ನು ಮರೆಯಬಾರದು ಎಂದು ನುಡಿದರು.

ಮೋ. ವಲೀಯುದ್ದೀನ್ ಪಟೇಲ್, ನೂರ್, ಇಫ್ತೇಕಾರ್ ಪಟೇಲ್, ಮೋ. ಆದಿಲ್ ಪಟೇಲ್, ಜೂನೆದ್, ಲತೀಫ್, ತಾಜುದ್ದೀನ್, ರಾಜಕುಮಾರ್, ಬಸ್ಸು, ಸಂತೋಷ್, ಝಾಕೀರ್ ಹುಸೈನ್, ಮುಜೀಬ್, ಶಾನ್, ಶಾಬಾಜ್ ಮುಂತಾದವರು ಹಾಜರಿದ್ದರು.

## ಬೇಸಿಗೆಯಲ್ಲಿ ಗುಬ್ಬಚ್ಚಿಗಳು, ಪಕ್ಷಿಗಳಿಗೆ ನೀರುಣಿಸಿ ಜೀವ ಉಳಿಸಿ : ಉಪ್ಪಿನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 20 : ಬೇಸಿಗೆಯ ಆರಂಭದ ದಿನಗಳಲ್ಲಿಯೇ ಹೆಚ್ಚುತ್ತಿರುವ ತಾಪಮಾನದಿಂದಾಗಿ, ಪಕ್ಷಿ ಸಂಕುಲವು ಕುಡಿಯಲು ನೀರು ಸಿಗದೇ ಸಾವನ್ನಪ್ಪುತ್ತಿರುವುದರಿಂದ ಗುಬ್ಬಚ್ಚಿಗಳು, ಪಕ್ಷಿಗಳು, ಪಾರಿವಾಳಗಳು ಹಾಗೂ ಇತರ ಸಾಮಾನ್ಯ ಪಕ್ಷಿಗಳಿಗೆ ಕುಡಿಯಲು ನೀರಿನ ವ್ಯವಸ್ಥೆ ಮಾಡಿ ಅವುಗಳ ಸಂತತಿಯನ್ನು ಉಳಿಸಿಕೊಳ್ಳಬೇಕೆಂದು ಪಶು ವೈದ್ಯಕೀಯ ವಿಶ್ವವಿದ್ಯಾಲಯದ ನಿವೃತ್ತ ಅಧಿಕಾರಿ ವೀರಭದ್ರಪ್ಪ ಉಪ್ಪಿನರವರು ಜನತೆಗೆ ಕರೆ ನೀಡಿದರು.

ಅವರು ಇಂದು "ವಿಶ್ವಗುಬ್ಬಚ್ಚಿ ದಿನಾಚರಣೆಯ ಅಂಗವಾಗಿ ಬರೀದಶಾಹಿ ಉದ್ಯಾನದಲ್ಲಿ ಹಕ್ಕೀ-ಪಕ್ಷಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆಗೆ ಚಾಲನೆ ನೀಡಿ ಮಾತನಾಡುತ್ತಿದ್ದರು. ಪಕ್ಷಿಗಳು ಪರಿಸರವನ್ನು ಸಮತೋಲನಗೊಳಿಸುತ್ತವೆ. ಮನೆ, ಕಚೇರಿ, ಸಾರ್ವಜನಿಕ ಸ್ಥಳಗಳು, ರಸ್ತೆಗಳ ಬದಿ, ಉದ್ಯಾನಗಳು ಮುಂತಾದ ಸ್ಥಳಗಳಲ್ಲಿ ಸಾಧ್ಯ ವಾದಷ್ಟು ಪಕ್ಷಿಗಳಿಗೆ ಕುಡಿಯುವ ನೀರು ಸಿಗುವಂತಹ ವ್ಯವಸ್ಥೆ ಮಾಡಿ ಮೂಕ ಪಕ್ಷಿಗಳ ಸಂತತಿ ನಾಶವಾಗದಂತೆ ನೋಡಿಕೊಳ್ಳಬೇಕೆಂದು ಆಗ್ರಹಿಸಿದರು. ಕಳೆದ ಏಳು ವರ್ಷಗಳಿಂದ, ಸರ್ಕಾರ ದಿಂದ/ಸಂಘ ಸಂಸ್ಥೆಗಳಿಂದ ಯಾವುದೇ ಸಹಾಯವಿಲ್ಲದೆ, ನಿರಂತರವಾಗಿ ಬೇಸಿಗೆಯಲ್ಲಿ ಬೀದರ ನಗರದ ವಿವಿಧ ಭಾಗಗಳಲ್ಲಿ, ಪಶು ಪಕ್ಷಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ಯಶಸ್ವಿಯಾಗಿ ನಡೆಸಿಕೊಂಡು ಬರಲಾಗುತ್ತಿದೆ ಎಂದು ನುಡಿದರು.

2011 ರಲ್ಲಿ ಭಾರತೀಯ ಸಂರಕ್ಷಣಾವಾದಿ ಮೊಹಮ್ಮದ್ ದಿಲಾವರ್ ರವರು ನೇಚರ್ ಫಾರೇವರ್ ಸೊಸೈಟಿಯನ್ನು ಆರಂಭಿಸಿ, ಪಕ್ಷಿಗಳ ಕಾಳಜಿಯನ್ನು ಮಾಡುತ್ತಿದ್ದಾರೆ. ಹಿರಿಯ ಯೋಗ ಮೇಲ್ವಿಚಾರಕ ಗಂಗಪ್ಪ ಸಾವಳೇಯವರು ಮಾತನಾಡಿ, ನಿರಂತರವಾಗಿ ಪಕ್ಷಿಗಳ ಕಾಳಜಿಯನ್ನು ವಹಿಸುತ್ತಿರುವುದಕ್ಕೆ ಸಂತಸ ವ್ಯಕ್ತಪಡಿಸಿದರು. ನಿವೃತ್ತ ಮುಖ್ಯೋಪಾಧ್ಯಾಯ ನಿಜಲಿಂಗಪ್ಪ ತಗಾರೆಯವರು ಮಾತನಾಡಿದರು. ವೀರಶೆಟ್ಟಿ, ಅಶೋಕ, ಸಂಜೀವಕುಮಾರ ಶೀಲವಂತ, ಈಶ್ವರ್ ಕನೇರಿ, ಕಿರಣ, ರಾಚಯ್ಯ ಸ್ವಾಮಿ ಮುಂತಾದವರು ಹಾಜರಿದ್ದರು.

## ಪಾಲಿಟೆಕ್ನಿಕ್ ಅತಿಥಿ ಉಪನ್ಯಾಸಕರ ಸೇವೆ ಕಾಯಂಗೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 20 :ರಾಜ್ಯದ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸೇವೆ ಕಾಯಂಗೊಳಿಸಬೇಕು ಎಂದು ಕರ್ನಾಟಕ ರಾಜ್ಯ ಸರ್ಕಾರಿ ಪಾಲಿಟೆಕ್ನಿಕ್ ಅರೆಕಾಲಿಕ ಉಪನ್ಯಾಸಕರ ಸಂಘದ ಜಿಲ್ಲಾ ಘಟಕ ಆಗ್ರಹಿಸಿದೆ.

ಸಂಘದ ಜಿಲ್ಲಾ ಘಟಕದ ಪದಾಧಿಕಾರಿಗಳು ನಗರದಲ್ಲಿ ಬುಧವಾರ ಉನ್ನತ ಶಿಕ್ಷಣ ಸಚಿವ ಎಂ.ಸಿ. ಸುಧಾಕರ ಅವರಿಗೆ ಬರೆದ ಮನವಿ ಪತ್ರವನ್ನು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರಿಗೆ ಸಲ್ಲಿಸಿದರು.

ರಾಜ್ಯ ಸರ್ಕಾರ ಪಾಲಿಟೆಕ್ನಿಕ್‌ಗಳಿಗೆ 2 ಸಾವಿರ ಪೂರ್ಣಾವಧಿ ಉಪನ್ಯಾಸಕರ ನೇಮಕಕ್ಕೆ ನಿರ್ಧರಿಸಿರುವುದು ಸ್ವಾಗತಾರ್ಹ. ಆದರೆ, ಈ ಪೈಕಿ 1,600 ಹುದ್ದೆಗಳಿಗೆ ಮಾನವೀಯತೆ ಆಧಾರದಲ್ಲಿ ಈಗಾಗಲೇ ರಾಜ್ಯದ 102 ಪಾಲಿಟೆಕ್ನಿಕ್‌ಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರನ್ನು ನೇಮಕಗೊಳಿಸಬೇಕು. ಉಳಿದ 400 ಹುದ್ದೆಗಳಿಗೆ ನಿಯಮಾನುಸಾರ ನೇಮಕಾತಿ ಪ್ರಕ್ರಿಯೆ ನಡೆಸಬೇಕು ಎಂದು ಬೇಡಿಕೆ ಮಂಡಿಸಿದರು.

ಅತಿಥಿ ಉಪನ್ಯಾಸಕರ ಪೈಕಿ ಹಲವರ ವಯೋಮಿತಿ ಮೀರಿದೆ. ಇನ್ನೂ ಕೆಲವರ ವಯೋಮಿತಿ ಮೀರುವ ಹಂತದಲ್ಲಿದೆ. ಹೀಗಾಗಿ ಸರ್ಕಾರಿ ಹುದ್ದೆಗೆ ಅರ್ಜಿ ಸಲ್ಲಿಸಿ ಹುದ್ದೆ ಪಡೆಯಲು ಸಾಧ್ಯವಾಗುತ್ತಿಲ್ಲ ಎಂದು ಅಳಲು ತೋಡಿಕೊಂಡರು.

ಅತಿಥಿ ಉಪನ್ಯಾಸಕರು 2 ವರ್ಷದಿಂದ 20 ವರ್ಷಗಳ ಅವಧಿಯಿಂದ ಸೇವೆ ಸಲ್ಲಿಸುತ್ತಿದ್ದಾರೆ. ವರ್ಗಾವಣೆಗೊಂಡ ಇಲ್ಲವೇ ಹೊಸದಾಗಿ ನೇಮಕಗೊಂಡ ಪೂರ್ಣಾವಧಿ ಉಪನ್ಯಾಸಕರು ಬಂದರೆ ಹುದ್ದೆಯಿಂದ ಬಿಡುಗಡೆಗೊಳಿಸಲಾಗುತ್ತಿದೆ ಎಂದು ತಿಳಿಸಿದರು.

ನೆರೆಯ ತೆಲಂಗಾಣ, ಮಹಾರಾಷ್ಟ್ರ, ಹರಿಯಾಣ ಸೇರಿದಂತೆ ಅನೇಕ ರಾಜ್ಯಗಳಲ್ಲಿ ಅತಿಥಿ ಉಪನ್ಯಾಸಕರಿಗೆ ಬೇಸಿಕ್ ಸ್ಟೇಟ್ ಸ್ಕೇಲ್ ಹಾಗೂ ಸೇವಾ ಭದ್ರತೆ ಕೊಡಲಾಗಿದೆ. ಆದರೆ, ರಾಜ್ಯದಲ್ಲಿ ಮಾತ್ರ ಒದಗಿಸಲಾಗಿಲ್ಲ ಎಂದು ಹೇಳಿದರು.

ಸಂಘದ ರಾಜ್ಯ ಅಧ್ಯಕ್ಷ ಪ್ರವೀಣಕುಮಾರ ಮೀರಾಗಂಜಕರ್, ಜಿಲ್ಲಾ ಘಟಕದ ಸಂಘಟನಾ ಕಾರ್ಯದರ್ಶಿ ಶರಣಬಸಪ್ಪ ವಾಲಿ, ಜಂಟಿ ಕಾರ್ಯದರ್ಶಿ ಸಂತೋಷ್ ಲದ್ದೆ, ಪ್ರಮುಖರಾದ ಎಂ.ಡಿ. ಯುನೂಸ್, ಸಂದೀಪ್ ಕುಲಕರ್ಣಿ, ಸಚಿನ್ ಚಿಟ್ಮೆ, ಹುಸ್ನಾ ಜಬೀನ್, ನಜ್ಮಾ ಆಫ್ರೀನ್, ಕೀರ್ತಿ, ಗೋದಾವರಿ ಮತ್ತಿತರರು ಇದ್ದರು.

## ಮಹಿಳಾ ಸ್ವ ಸಹಾಯ ಸಂಘದ ಸದಸ್ಯರು ಗಳಿಗೆ ಉದ್ಯಾನವನ ನಿರ್ವಹಣೆ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಇಂದು ನಗರ ಸಭೆ ಶಹಾಪುರ ವತಿಯಿಂದ ಕೇಂದ್ರ ಸರಕಾರದ "ಅಮೃತ ಮಿತ್ರ 2.0" ಕಾರ್ಯಕ್ರಮ ದಡಿಯಲ್ಲಿಮಹಿಳಾಸ್ವಸಹಾಯ ಸಂಘದ ಸದಸ್ಯರು ಗಳಿಗೆ ಉದ್ಯಾನವನ ನಿರ್ವಹಣೆ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ ಜರುಗಿತು. ಈ ಕಾರ್ಯಕ್ರಮವುಪೌರಾಯುಕ್ತರಾದ ಶ್ರೀ ರಮೇಶ್ ಬಡಿಗೇರ್ ಉದ್ಘಾಟಿಸಿ ಮಾತನಾಡಿ ಸ್ವ ಸಹಾಯ ಸಂಘದ ಸದಸ್ಯರು ಸ್ವಾ ಅವಲಂಬನೆ ಬದುಕು ನಡೆಸುವಂತಾಗಬೇಕು ಎಂದು ಹೇಳಿದರು, ಉಪನ್ಯಾಸಕರಾಗಿ ಕೃಷಿ ವಿಶ್ವ ವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಡಾ. ಶಿವಪ್ಪ ಕರಡಿ ರವರು ಉದ್ಯಾನವನ ನಿರ್ವಹಣೆ ಕುರಿತು ಉಪನ್ಯಾಸ ನೀಡಿದರು. ಸಹಾಯಕ ಕಾರ್ಯಪಾಲಕ ಅಭಿಯನಂತರಾದ ಶ್ರೀ ನಾನಾಸಾಹೇಬ್ ಉಪನ್ಯಾಸನೀಡಿ ಮಹಿಳೆಯರನಿರ್ವಹಣೆಯಿಂದ ಆಗುವ ಪ್ರಯೋಜನ ಗಳ ಬಗ್ಗೆ ಮಾತನಾಡಿದರು. ಭಾರತಾಂಬೆ ಸಂಸ್ಥೆಯ ಕಾರ್ಯದರ್ಶಿ ಶ್ರೀ ಭೀಮಾಶಂಕರ್ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಉದ್ಯಾನಗಳ ಇತಿಹಾಸ ಮತ್ತು ವೈಜ್ಞಾನಿಕ ಮನೋಭಾವನೆ ಕುರಿತು ಉಪನ್ಯಾಸ ನೀಡಿದರು. ಸಮುದಾಯಸಂಘಟಧಿಕಾರಿಗಳಾದ ಶ್ರೀ ವೆಂಕಟೇಶ್ ತೆಲಂಗ ಕಾರ್ಯಕ್ರಮದ ಉಸ್ತುವಾರಿ ವಹಿಸಿಕೊಂಡಿದ್ದರು. ಅಭಿಯಾನ ವ್ಯವಸ್ಥಾಪಕರಾದ ಗುರುಪಾದ ತಳವಾರ ಸ್ವಾಗತಿಸಿ, ಸಿ ಆರ್ ಪಿ ಗಳಾದ ಸುಧಾ ಬಿರಾದಾರ್, ಕವಿತಾ ಹಾಗೂ ಸ್ವಸಹಾಯ ಸಂಘದ ಸದಸ್ಯರು ಭಾಗವಹಿಸಿ ತರಬೇತಿ ಪಡೆದರು. ಕವಿತಾ ರವರು ವಂದಿಸಿದರು.

## 134 ನೇ ಅಂಬೇಡ್ಕರ್ ಜಯಂತೋತ್ಸವ ಅಧ್ಯಕ್ಷರಾಗಿ ಶಿವುಕುಮಾರ್ ಗಿರಿಪ್ಪನೋರ್ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಕೋಟೆಗಾರವಾಡ ನಗರದಲ್ಲಿ ಭೋದಿ ಸತ್ವ, ಸಂವಿಧಾನ ಶಿಲ್ಪಿ,ಡಾ. ಬಿ.ಆರ್ ಅಂಬೇಡ್ಕರ್ 134 ನೇ ಜಯಂತೋತ್ಸವದ ಅಂಗವಾಗಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದ್ದು ಸಭೆಯ ಅಧ್ಯಕ್ಷತೆಯನ್ನು ಮಾಜಿ ಅಧ್ಯಕ್ಷರಾದ ಶ್ರೀ ತಾಯಪ್ಪ ಭಂಡಾರಿ ಅವರು ವಹಿಸಿದರು ಅದೇ ರೀತಿ ನಗರದ ಹಿರಿಯ ಮುಖಂಡರಾದ ಚಂದಪ್ಪ ಮುನಿಯಪ್ಪನವರ್,ಚಂದ್ರಕಾಂತ್ ಮುನಿಯಪ್ಪನೂರ್, ಸೈದಪ್ಪ ಕೂಲೂರ್,ನಗರದ ಹಿರಿಯ ಕಿರಿಯರು ಸರ್ವನುಮತದಿಂದ 134 ನೇ ಅಂಬೇಡ್ಕರ್ ಜಯಂತೋತ್ಸವದ ಅಧ್ಯಕ್ಷರನ್ನಾಗಿ ಶ್ರೀ ಶಿವಕುಮಾರ್ ಗಿರೆಪ್ನೋರ ಹಾಗೂ ಗೌರವ ಅಧ್ಯಕ್ಷರನ್ನಾಗಿ ಸೈದಪ್ಪಕೂಲೂರಕರ್,ರವರನ್ನು ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಸುರೇಶ ನಾಯಕ್,ಬಸಪ್ಪ ಗಿರಿಪ್ಪನೋರ್,ಆಂಜನೇಯ ಕೌಳೂರ್,ಮಲ್ಲಪ್ಪ ಹಳ್ಳಿ, ಬಸಪ್ಪ ಕಾಂಚಗಾರಳ್ಳಿ,ತಿಪ್ಪಣ್ಣ ಹಳಿಗೇರಿ, ಬಸಪ್ಪ ಅರಿಕೇರಿ, ಮಂಜುನಾಥ ಹಳ್ಳಿ,ರಾಹುಲ್ ಕೊಲ್ಲೂರಕರ್,ರಮೇಶ್ ಕ್ಯಾತ್ನಾಳ್, ಅನೇಕರು ಹಾಜರಿದ್ದರು.

### ನೂತನವಾಗಿ ಆಯ್ಕೆಯಾದ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ

## ಹಾಗೂ ಪ್ರಗತಿಪರ ರೈತರು, ಹಾಗು ಮಾಜಿ ಯೋಧರಿಗೆ ಸನ್ಮಾನ ಸಮಾರಂಭ




ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು. ಮಾ. 20.–ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘಕ್ಕೆ ನೂತನವಾಗಿ ಆಯ್ಕೆಯಾದ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ ಹಾಗೂ ಪ್ರಗತಿಪರ ರೈತರು,ಹಾಗು ಮಾಜಿ ಯೋಧರಿಗೆ ಸನ್ಮಾನ ಸಮಾರಂಭ ಕಾರ್ಯಕ್ರಮವನ್ನು ಇದೆ ತಿಂಗಳು ಮಾರ್ಚ್ 24 ಕ್ಕೆ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರ ಸಂಘದ ತಾಲೂಕ ಅಧ್ಯಕ್ಷ ಹಾಜಿಬಾಬು ಕಲ್ಯಾಣಿ ಹೇಳಿದರು. ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಪಟ್ಟಣದ ರಾಯಚೂರು ರಸ್ತೆಯಲ್ಲಿರುವ ಶಂಕರರೆಡ್ಡಿ ಕಲ್ಯಾಣ ಮಂಟಪದಲ್ಲಿ ಮಾ, 24 ರಂದು ಸಂಜೆ 4 ಗಂಟೆಗೆ ಕಾರ್ಯಕ್ರಮ ಜರುಗಲಿದೆ. ಜೊತೆಗೆ ಅಂದೆ ನಿವೃತ್ತ ಸಹಕಾರ ಸಂಘಗಳ ನಿಬಂಧಕರಾದ ಲಿಯಾಖತ ಆಲಿ ಅವರು ಸರಕಾರಿ ಸೇವಾ ನಿಯಮಗಳು ಕುರಿತು ಕಾರ್ಯಾಗಾರವನ್ನು ನಡೆಸಿ ಕೊಡಲಿದ್ದಾರೆ.

ಸಮಾರಂಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರ ಸಂಘದ ಅಧ್ಯಕ್ಷರಾಗಿ ಎರಡನೇ ಬಾರಿಗೆ ಆಯ್ಕೆಯಾದ ರಾಜ್ಯಾಧ್ಯಕ್ಷ ಸಿ.ಎಸ್. ಷಡಕ್ಷರಿ ಅವರಿಗೆ ಅಭಿನಂದನಾ ಕಾರ್ಯಕ್ರಮ ಜರುಗಲಿದೆ. ಮತ್ತು ಸಮಾರಂಭದಲ್ಲಿ ಐದು ಜನ ಪ್ರಗತಿಪರ ರೈತರಿಗೆ ಹಾಗೂ ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ 60 ಕ್ಕೂ ಹೆಚ್ಚು ಜನ ಯೋಧರಿಗೆ ಸನ್ಮಾನಿಸಲಾಗುವುದು. ಮತ್ತು 2024 ರಿಂದ 2029ರ ಅವಧಿಯವರೆಗೆ ನೂತನವಾಗಿ ಆಯ್ಕೆಯಾದ ನಿರ್ದೇಶಕರುಗಳ ಹಾಗೂ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ ಶಾಸಕರು, ಸಂಸದರು ವಿಧಾನಪರಿಷತ್ ಸದಸ್ಯರು, ಸಾಹಿತಿಗಳು ನಿವೃತ್ತ ನೌಕರರು, ಚಿಂತಕರು ಬುದ್ದಿ ಜೀವಿಗಳು ಸೇರಿದಂತೆ ಹಲವಾರು ಗಣ್ಯರು ಭಾಗವಹಿಸಲಿದ್ದು ತಾಲ್ಲೂಕಿನ ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸಮಾರಂಬ ಯಶಸ್ವಿಗೊಳಿಸಲು ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಂಘದ ಗೌರವ ಅಧ್ಯಕ್ಷ ಅಮರಪ್ಪ ಸಾಲಿ, ನೌಕರರ ಸಂಘದ ಮಾಜಿ ಜಿಲ್ಲಾ ಅಧ್ಯಕ್ಷ ಬೀಮಣ್ಣ ನಾಯಕ, ಅಮರೇಶಪ್ಪ ಹೂನೂರು, ರಾಜ್ಯ ಪರಿಷತ್ ಸದಸ್ಯ ರಾಮಕೃಷ್ಣ, ನಾಯಕ್, ಹಿರಿಯ ಉಪಾಧ್ಯಕ್ಷ ಶೆಟ್ಟೆಪ್ಪ ನಾಯಕ್, ಪ್ರಧಾನ ಕಾರ್ಯದರ್ಶಿ ವೀರೇಶ್, ಮಾನಪ್ಪ ಬಡೀಗೆರ, ಹನುಮಂತ್ ರಾಯ, ಮಂಜುನಾಥ, ಸಂಗನಗೌಡ ಸೇರಿದಂತೆ ಇತರರು ಇದ್ದರು.

## ಐಕೂರ ಎಸ್,ಎಸ್,ಎಲ್,ಸಿ, ವಿಧ್ಯಾರ್ಥಿಗಳಿಗೆ ಬಿಳ್ಕೋಡುಗೆ!



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ವಡಗೇರ ತಾಲುಕಿನ ಐಕೂರ ಸರ್ಕಾರಿ ಹಿರಿಯ ಪ್ರಾಥಮಿಕ ಮತ್ತು ಪ್ರೌಡ ಶಾಲೆ ಆಶ್ರೆಯದಲ್ಲಿ,ಎಸ್,ಎಸ್,ಎಲ್,ಸಿ, ವಿಧ್ಯಾರ್ಥಿಗಳಿಗೆ ಬೀಳ್ಕೋಡುಗೆ ಕಾರ್ಯಕ್ರಮ ಅದ್ದೂರಿಯಾಗಿ, ಸಡಗರ ಸಂಭ್ರಮಗಳಿಂದ ಜರುಗಿತು, ಈ ಸಂಧರ್ಭದಲ್ಲಿ ಶಾಲಾ ಮುಖ್ಯಗುರುಗಳಾದ ಗುರುರಾಜರವರು ಮಾತನಾಡಿ, ಕಾಲೇಜು ಶಿಕ್ಷಣ ಮುಂದಿನ ಬದುಕಿನ ದಿಕ್ಸೂಚಿಯಾಗಿದ್ದು, ಪ್ರತಿಯೊಬ್ಬ ವಿಧ್ಯಾರ್ಥಿಗಳು ಉತ್ತಮ ಅಂಕಗಳನ್ನು ಪಡೆದುಕೊಂಡು ಶಾಲಾ ಮತ್ತು ತಂದೆ ತಾಯಿಗಳ ಕಿರ್ತಿಗೆ ಪಾತ್ರರಾಗಬೇಕು, ಎಂದು ಕರೆ ನೀಡಿದರು, ಓದು ಬರಹಗಳೊಂದಿಗೆ ಸಾಮಾಜಿಕ ಪರಿಜ್ಞಾನ ಬೆಳಸಿಕೊಂಡು ಸಮಾಜದಲ್ಲಿ ಉತ್ತಮ ಪ್ರಜೆಗಳಾಗಬೇಕು ಎಂದರು,

ಮಕ್ಕಳಿಗೆ ಶಿಕ್ಷಕರು ಹೂಗುಚ್ಚ ನೀಡಿ ಶುಭ ಹಾರೈಸಿದರು, ಶಿಕ್ಷಕರು ಅಥಿತಿ ಶಿಕ್ಷಕರು ಮಾತನಾಡಿ, ಪರೀಕ್ಷೆಯಲ್ಲಿ ದೃತಿಗೆಡದೆ ಆತ್ಮಸ್ಥೈರ್ಯದಿಂದ ಪರೀಕ್ಷಾರ್ಥಿಗಳಾಗಿ ರ್‍ಯಾಂಕ್ ಪಡೆದುಕೊಂಡಲ್ಲಿ, ನಮ್ಮ ಮತ್ತು ನಿಮ್ಮ ಪಾಲಕರ ಕರ್ತವ್ಯ ಸಾರ್ಥಕವಾಗುತ್ತದೆ ಎಂದು ಅವರು ಎಸ್,ಎಸ್,ಎಲ್,ಸಿ, ವಿಧ್ಯಾರ್ಥಿಗಳಿಗೆ ಮನವರಿಕೆ ಮಾಡಿದರು, ಈ ಸಮಾರಂಭದಲ್ಲಿ ಸರ್ವ ಶಿಕ್ಷಕರು ಅಥಿತಿ ಶಿಕ್ಷಕರು, ವಿಧ್ಯಾರ್ಥಿಗಳು ಪಾಲಕರು ಗ್ರಾಮದ ಶಿಕ್ಷಣ ಪ್ರೇಮಿಗಳು ಪಾಲ್ಗೊಂಡಿದ್ದರು,

### ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಪೂರ್ವ ತಯಾರಿ

## ಸಂಪೂರ್ಣ 97 ಪರೀಕ್ಷಾ ಕೇಂದ್ರಗಳಲ್ಲಿ ಕಠಿಣ ಭದ್ರತೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.20–ಸ್‌ಎಸ್‌ಎಲ್‌ಸಿ 2024–25 ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ–1ಮುಗಿದುಬಂದಿದ್ದು, ಈ ಕುರಿತ ಪೂರ್ವ ತಯಾರಿ ಚುಕ್ಕಚುಕ್ಕಿ ಸಿದ್ಧವಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಛೇರಿ, ರಾಯಚೂರು ಪ್ರಕಟಣೆ ತಿಳಿಸಿದೆ.

ಮಾನ್ಯ ಜಿಲ್ಲಾಧಿಕಾರಿ ರಾಯಚೂರುಅವರಅಧ್ಯಕ್ಷತೆಯಲ್ಲಿ ಮಾರ್ಚ್ 19ರಂದು ನಡೆದ ವಿಡಿಯೋ ಸಂವಾದದಲ್ಲಿ ನೀಡಲಾದ ಸೂಚನೆಗಳನ್ವಯ, ಜಿಲ್ಲೆಯಲ್ಲಿ ದೇವದುರ್ಗ (15), ಲಿಂಗಸೂಗೂರು (18), ಮಾನವಿ (18), ರಾಯಚೂರು (27), ಸಿಂಧನೂರು (19) ಸೇರಿ ಒಟ್ಟು 97 ಪರೀಕ್ಷಾ ಕೇಂದ್ರಗಳಲ್ಲಿ ಮಾರ್ಚ್ 21 ರಿಂದ ಏಪ್ರಿಲ್ 4 ರವರೆಗೆ ಪರೀಕ್ಷೆ ನಡೆಯಲಿದೆ. ಭದ್ರತಾ ವ್ಯವಸ್ಥೆ:97ಪರೀಕ್ಷಾ ಕೇಂದ್ರಗಳಿಗೆ ಪೊಲೀಸ್ ಬಂದೋಬಸ್ತ್ ಒದಗಿಸಲು, ಹಾಗೂ ಪರೀಕ್ಷಾ ಸಾಮಗ್ರಿಗಳ ರಕ್ಷಿತ ಸಾಗಣೆಗೆ ಎಸ್ಕಾರ್ಟ್ ವ್ಯವಸ್ಥೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ಮನವಿ ಮಾಡಲಾಗಿದೆ. ಜೊತೆಗೆ ಎಲ್ಲ ಕೇಂದ್ರಗಳ ಸುತ್ತಮುತ್ತ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ.

ಸಹಾಯಕರ ನೇಮಕ: ಪ್ರತಿಯೊಂದು ಕೇಂದ್ರಕ್ಕೆ ಮುಖ್ಯ ಅಧೀಕ್ಷಕ, ಉಪ ಅಧೀಕ್ಷಕ, ಜಾಗೃತ ದಳದ ಅಧಿಕಾರಿಗಳು, ಕೊಠಡಿ ಮೇಲ್ವಿಚಾರಕರು, ಮೊಬೈಲ್ ಸ್ವಾಧೀನಾಧಿಕಾರಿಗಳು ಹಾಗೂ ಅಭೀರಕ್ಷಕರನ್ನು ನೇಮಕ ಮಾಡಲಾಗಿದೆ. ಸಿ.ಸಿ.ಟಿ.ವಿ ನಿಗಾವ್ಯವಸ್ಥೆ: ಎಲ್ಲಾ ಕೇಂದ್ರಗಳಲ್ಲಿ ಯತಾ ಪ್ರಕಾರ ಸಿ.ಸಿ.ಟಿ.ವಿ ವೆಬ್ ಕಾಸ್ಟಿಂಗ್ ವ್ಯವಸ್ಥೆ ಕೈಗೊಳ್ಳಲಾಗಿದೆ. ನಿರಂತರ ವಿದ್ಯುತ್ ಪೂ–ರೈಕೆಗಾಗಿ ಜಿಲ್ಲಾಧಿಕಾರಿಗೆ ಮನವಿ ಮಾಡಲಾಗಿದೆ. ಉಚಿತ ಬಸ್ ಪ್ರಯಾಣ: ವಿದ್ಯಾರ್ಥಿಗಳಿಗೆ ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಉಚಿತ ಪ್ರಯಾಣ ಸೌಲಭ್ಯ ಒದಗಿಸಲು ಸೂಚನೆ ನೀಡಲಾಗಿದ್ದು, ಡಿಪೋ ವ್ಯವಸ್ಥಾಪಕರಿಗೆ ನಿರ್ದೇಶನ ನೀಡಲು ಸಾರಿಗೆ ಇಲಾಖೆಗೆ ಪತ್ರ ಬರೆಯಲಾಗಿದೆ. ವೀಕ್ಷಣೆ: ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳನ್ನು ವೀಕ್ಷಕರಾಗಿ ನೇಮಿಸಲಾಗಿದೆ. ಪ್ರಸಕ್ತ ಮಾಹಿತಿ ಪತ್ರಿಕೆಗೆ ನೀಡಿ, ಸಾರ್ವಜನಿಕರ ಜಾಗೃತಿ ಹಾಗೂ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಪ್ರಕಟಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯೋಗ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.20.–ಯೋಗ ಕ್ರೀಡೆಗೆ ಅತ್ಯುನ್ನತವಾದ ಕೊಡುಗೆಯನ್ನು ನೀಡಿದ ಕ್ರೀಡಾಪಟುಗಳಿಗೆ ಅಥವಾ ಯೋಗಾ ಸಂಸ್ಥೆಗಳಿಗೆ ಪ್ರಧಾನ ಮಂತ್ರಿಗಳು ರಾಷ್ಟ್ರೀಯ ಮಟ್ಟ ಅಥವಾ ಅಂತರಾಷ್ಟ್ರೀಯ ಮಟ್ಟದ ಅತ್ಯುನ್ನತ ಯೋಗ ಪ್ರಶಸ್ತಿಗಳನ್ನು ನೀಡಲಾಗುತ್ತಿದ್ದು, ಇದಕ್ಕಾಗಿ ಆಸಕ್ತಿಯುಳ್ಳ ಕ್ರೀಡಾಪಟುಗಳು ನೋಂದಣಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಆಸಕ್ತಿಯುಳ್ಳ ಕ್ರೀಡಾಪಟುಗಳು https://Innovatein-dia.mygov.in/pm-yoga-awards–2025 ವೆಬ್‌ಸೈಟ್‌ದಲ್ಲಿ ಆನ್‌ಲೈನ್ ಮೂಲಕ 2025ರ ಮಾರ್ಚ್ 31 ರೊಳಗಾಗಿ ಅರ್ಜಿ ಸಲ್ಲಿಸಿ ನೋಂದಣಿ ಮಾಡಿಕೊಳ್ಳಬೇಕು. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

## ಇಂದು ಮಹಿಳಾ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.20.–ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ನ್ಯಾಯಾಂಗ ನೌಕರರ ಸಂಘ ಜಿಲ್ಲಾ ಶಾಖೆ ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ಮಾರ್ಚ್ 21 ರಂದು ಶುಕ್ರವಾರ ಸಂಜೆ 5.15 ಗಂಟೆಗೆ ಕಲಬುರಗಿ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿರುವ ಹೊಸ ವಕೀಲರ ಸಂಘದ ಸಭಾಂಗಣದಲ್ಲಿ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಅವರು ತಿಳಿಸಿದ್ದಾರೆ.

ಸರ್ವೋಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿಗಳು ಹಾಗೂ ಕರ್ನಾಟಕ ಗಡಿ ಮತ್ತು ನದಿಗಳ ರಕ್ಷಣೆ ಆಯೋಗದ ಅಧ್ಯಕ್ಷರಾದ ಡಾ. ಶಿವರಾಜ್ ವ್ಹಿ. ಪಾಟೀಲ ಅವರು ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸುವರು. ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ಕಲಬುರಗಿ ಜಿಲ್ಲೆಯ ಆಡಳಿತಾತ್ಮಕ ನ್ಯಾಯಮೂರ್ತಿಗಳಾದ ಕೆ. ನಟರಾಜನ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಕರ್ನಾಟಕ ಉಚ್ಚ ನ್ಯಾಯಾಲಯ ನ್ಯಾಯಮೂರ್ತಿಗಳಾದ ಡಾ. ಚೆಲ್ಲಕೂರ್ ಸುಮಲತಾ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಕಲಬುರಗಿ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಜಿ.ಎಲ್. ಲಕ್ಷ್ಮೀನಾರಾಯಣ, ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಜ್ಯೋತಿಶ್ರೀ ಪಾಟೀಲ, ವಕೀಲರ ಸಂಘದ ಅಧ್ಯಕ್ಷ ಗುಪ್ತಲಿಂಗ ಪಾಟೀಲ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

## ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ




ಮಲ್ಲಮ್ಮ ನುಡಿ ವಾರ್ತೆ

ಶಹಪೂರ: ವಿದ್ಯಾರ್ಥಿಗಳು ಪರೀಕ್ಷೆ ಎಂಬ ಆತಂಕ ಮತ್ತು ಅಳುಕನ್ನು ಬಿಟ್ಟು ಸ್ವಾಭಾವಿಕವಾಗಿ, ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಿದರೆ ಯಶಸ್ಸು ಸಾಧ್ಯ ಎಂದು ದೋರನಹಳ್ಳಿಯ ನಾಗದೇವತೆ ಅಮ್ಮನವರು ಹೇಳಿದರು.

ನಗರದ ಶ್ರೀ ಜಿಹ್ವೇಶ್ವರ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯಲ್ಲಿ 7ನೇ ಹಾಗೂ 10ನೇ ವಿದ್ಯಾರ್ಥಿಗಳ ಬೀಳ್ಕೊಡುಗೆ ಹಾಗೂ ಪೂಜಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಮಕ್ಕಳಿಗೆ ಶಿಕ್ಷಕರು ಎಷ್ಟು ಅವಶ್ಯವೋ ಅಷ್ಟೆ ತಂದೆ ತಾಯಿಯರ ಜವಾಬ್ದಾರಿ ಮುಖ್ಯವಾಗಿದೆ ಮಕ್ಕಳು ಮೊಬೈಲ್ ಹಾಗೂ ರಾಜಕೀಯ ವ್ಯಾಮೊಹಕ್ಕೆ ಒಳಗಾಗದ ಶಿಕ್ಷಕರು ಹಾಕಿಕೊಟ್ಟ ಮಾರ್ಗದಲ್ಲಿ ಸಾಗಿ ಉನ್ನತ ವ್ಯಾಸಂಗ ಮಾಡಿ ಹೆಚ್ಚಿನ ಅಂಕ ಪಡೆದು ತಾವು ಕಲಿತ ಸಂಸ್ಥೆಗೆ ಹಾಗೂ ಪಾಲಕರ ಕೀರ್ತಿಯನ್ನು ಹೆಚ್ಚಿಸಬೇಕೆಂದು ಆಶೀರ್ವಚನ ನೀಡಿದರು ಶ್ರೀ ಜಿಹ್ವೇಶ್ವರ ವಿದ್ಯಾವರ್ಧಕ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಮಲ್ಲಯ್ಯ ಸಾಹು ಫಿರಂಗಿ ರವರು ಮಾತನಾಡಿ ಮನಸ್ಸಿನ ದೌರ್ಬಲ್ಯಗಳನ್ನು ದೂರವಿಟ್ಟು ಪರೀಕ್ಷೆ ಎದುರಿಸಲು ಸರಿಯಾದ ಸಮಾಲೋಚನೆ ನಡೆಸಿದರೆ ಪರೀಕ್ಷೆ ಬರೆಯಲು ಅನೂಕೂಲವಾಗುತ್ತದೆ ಎಮದರು.

ಶ್ರೀ ಜಿಹ್ವೇಶ್ವರ ವಿದ್ಯಾವರ್ಧಕ ಸಂಸ್ಥೆಯ ಕಾರ್ಯದಶೀಗಳಾದ ಶ್ರೀ ವಿಶ್ವನಾಥ ಚಿಲ್ಲಾಳ ಅವರು ಮಾತನಾಡಿ ವಿದ್ಯಾರ್ಥಿಗಳಿಗೆ ಅವರ ಉಜ್ವಲ ಭವಿಷ್ಯಕ್ಕೆ ಶುಭ ಹಾರ್ಯಸುತ್ತಾ ಜ್ಞಾನ ಸಂಪಾದನೆಗೆ ಶ್ರಮಿಸಿದಷ್ಟೂ ವ್ಯಕ್ತಿತ್ವ ವಿಕಸನಗೊಳ್ಳುತ್ತದೆ. ಉಜ್ವಲ ಭವಿಷ್ಯ ಹೊಂದಲು ನಾಂದಿಯಾಗುತ್ತದೆ. ಇದರಿಂದ ಇತರರ ಬದುಕು ಬವಣೆಗೆ ಸ್ಪಂದಿಸಲು ಮನೋಭಾವ ಬೆಳೆಸಿಕೊಳ್ಳಿ ಎಂದು ಹೇಳಿದರು.

ಪ್ರಾಥಮಿಕ ಶಾಲೆಯ ಮುಖ್ಯ ಗುರುಗಳಾದ ಶ್ರೀ ಪಂಚಾಕ್ಷರಿ ಹಿರೇಮಠ ಮಾತನಾಡಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಶಿಸ್ತು, ಸಮಯ ಪ್ರಜ್ಞೆ ಮತ್ತು ಜೀವನದಲ್ಲಿ ಯಶಸ್ಸುಗಳಿಸಲು ಆತ್ಮವಿಶ್ವಾಸ ಬಹಳ ಪ್ರಾಮುಖ್ಯವೆಂದು ವಿದ್ಯಾರ್ಥಿಗಳಿಗೆ ಕೆಲವು ನಿದರ್ಶನಗಳ ಮೂಲಕ ತಮ್ಮದೇ ಜೀವನದ ಕೆಲವೊಂದು ಅನುಭವದ ಘಟನೆಗಳನ್ನು ವಿವರಿಸಿ ಶುಭನುಡಿಗಳನ್ನಾಡಿದರು.

ಪ್ರೌಢ ಶಾಲೆ ಮುಖ್ಯ ಗುರುಗಳಾದ ಶ್ರೀ ಪ್ರವೀಣ ಫರಂಗಿ ರವರು ಮಾತನಾಡಿ ವಿದ್ಯಾರ್ಥಿಗಳು ತಮಗೆ ಸಿಗುವ ಅವಕಾಶಗಳನ್ನು ಶ್ರದ್ದೆಯಿಮದ ಬಳಸಿಕೊಂಡು ಜೀವನದಲ್ಲಿ ಉನ್ನತ ಮಟ್ಟಕ್ಕೇರಲಿ ಮತ್ತು ಸಮಾಜ ಮತ್ತು ರಾಷ್ಟ್ರಕ್ಕೆ ಉತ್ತಮ ಕೊಡುಗೆಯಾಗಿ ಹೊರಹೊಮ್ಮಲ್ಲಿ ಎಂದು ಹಾರೈಸಿಸಿದರು.

ಶಾಲೆಯ ಶಿಕ್ಷಕರು ತಮ್ಮ ಹಿತನುಡಿಗಳಮೂಲಕ ವಿದ್ಯಾರ್ಥಿಗಳಿಗೆ ಶುಭಹಾರೈಸಿಸಿದರು.

ಕಳೆದ ಸಾಲಿನಲ್ಲಿ ಏಳನೇ ತರಗತಿ ಹಾಗೂ ಹತ್ತನೇ ತರಗತಿಯಲ್ಲಿ ಪ್ರಥಮ, ದ್ವಿತಿಯ ಹಾಗೂ ತೃತೀಯ ಸ್ಥಾನಗಳ ಪಡೆದ ವಿದ್ಯಾರ್ಥಿಗಳಿಗೆ ಬಹುಮಾನ ನೀಡಿ ಸನ್ಮಾನಿಸಲಾಯಿತು. ಹಾಗೂ ವಿಜ್ಞಾನ ಹಾಗೂ ಸಮಾಜ ವಿಷಯದ ರಚನಾತ್ಮಕವಾಗಿ ರೂಪಿಸುವ ಶಿಕ್ಷಕರು ಮಕ್ಕಳಲ್ಲಿನ ಸೃಜನಶೀಲತೆಯನ್ನೂ ಓರೆಗೆ ಹಚ್ಚುವ ನಿಟ್ಟಿನಲ್ಲಿ ಪ್ರಯತ್ನಿಸಿದ್ದಾರೆ. ಬಣ್ಣಬಣ್ಣದ ರಂಗೋಲಿಯಲ್ಲಿ ವಿಜ್ಞಾನ ಹಾಗೂ ಸಮಾಜದ ಪಾಠದಲ್ಲಿ ಬರುವ ಚಿತ್ರಗಳನ್ನು ಚಿತ್ರಿಸುವ ವಿನೂತನ ಸ್ಪರ್ದೆ ಏರ್ಪಡಿಸುವ ಮೂಲಕ ಅದರೊಳಗೆ ಪ್ರಥಮ, ದ್ವಿತಿಯ, ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಬಹುಮಾನವನ್ನು ವಿತರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಏಳನೇ, ಎಂಟನೇ, ಒಂಬತ್ತನೇ ಹಾಗೂ ಹತ್ತನೇ ತರಗತಿಯ ವಿದ್ಯಾರ್ಥಿಗಳು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಶಿಕ್ಷಕರಾದ ಶ್ರೀ ಸುರೇಶ ಕಡ್ರಿ, ಶ್ರೀ ದೇವು, ಶ್ರೀ ನಾಗರಾಜ, ಶ್ರೀಮತಿ ಸು–ರೇಖಾ, ಶ್ರೀಮತಿ ಸೌಮ್ಯ, ಶ್ರೀಮತಿ ಅಕ್ಕಮಹಾದೇವಿ, ಶ್ರೀಮತಿ ಸುನಿತಾ, ಕುಮಾರಿ ತ್ರಿವೇಣಿ ಹಾಜರಿದ್ದರು.

ಸಮಾರಂಭದಲ್ಲಿ ಶ್ರೀಮತಿ ವಿಜಯಲಕ್ಷ್ಮಿ ಹಿಗಳಿಮಠ ಸ್ವಾಗತಿಸಿ, ಶ್ರೀ ವಿನೋದ್ ವಂದಿಸಿದರು, ಶ್ರೀ ಮೌನೇಶ್ ಹೈಯಾಳಕರ್ ಕಾರ್ಯಕ್ರಮವನ್ನು ನಿರೂಪಿಸಿದರು.

## ಬೇಸಿಗೆಯಲ್ಲಿ ಸಾರ್ವಜನಿಕರು ಆರೋಗ್ಯದ ಬಗ್ಗೆ ಕಾಳಜಿ ವಹಿಸಿ: ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.20– ಬೇಸಿಗೆಯಲ್ಲಿ ಬಿಸಲಿನ ತಾಪವು ಹೆಚ್ಚಾಗಿರುವುದರಿಂದ ಆರೋಗ್ಯದ ಮೇಲೆ ಬೀರುವ ದುಷ್ಪರಿಣಾಮ ಹಾಗೂ ಅವುಗಳ ಮುಂಜಾಗ್ರತಾ ಕ್ರಮಗಳ ಬಗ್ಗೆ ಸಾರ್ವಜನಿಕರು ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಕೋರಿದ್ದಾರೆ.

ಸಾರ್ವಜನಿಕರು ಬಿಸಿಲಿನ ತಾಪಮಾನದಿಂದ ಹೇಗೆ ರಕ್ಷಿಸಿಕೊಳ್ಳಬೇಕು ಮತ್ತು ಬಿಸಿಲಿನ ಬೇಗೆಯಿಂದ ಮನುಷ್ಯ ಶಾಖಾಘಾತಕ್ಕೊಳಗಾದಾಗ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಈ ಕೆಳಕಂಡಂತೆ ತಿಳಿಸಿದ್ದಾರೆ.

ಏನು ಮಾಡಬೇಕು:

ಸಡಿಲವಾದ, ತೆಳು ಬಣ್ಣದ ಹತ್ತಿಯ ಬಟ್ಟೆ ಧರಿಸಬೇಕು. ಕೈಗೆಟುಕುವಂತೆ ಕುಡಿಯುವ ನೀರನ್ನು ಇಟ್ಟುಕೊಳ್ಳಿ. ಆಗಾಗ್ಗೆ ನಿಧಾನವಾಗಿ ಧಾರಳವಾಗಿ ಉಪ್ಪು, ಸಕ್ಕರೆ ಮಿಶ್ರಿತ ನೀರನ್ನು ಕುಡಿಯಿರಿ. ಹಣ್ಣಿನ ರಸ, ಪಾನಕಗಳನ್ನು ಕುಡಿಯಿರಿ. ಹತ್ತಿಯ ನುಣುಪಾದ ಬಟ್ಟೆ, ಟಿಶ್ಯೂ ಕರವಸ್ತ್ರದಿಂದ ಬೆವರನ್ನು ಒರೆಸಿರಿ. ನೀರು, ಮಜ್ಜಿಗೆ, ಎಳೆನೀರು ಕುಡಿಯಬಹುದು.

ಬೆಚ್ಚಗಿನ, ಮಸಾಲೆರಹಿತ, ಶುದ್ಧ ಸಾತ್ವಿಕ ಆಹಾರ ಸೇವಿಸಬೇಕು. ಗಾಳಿಯಾಡುವಂತಹ ಪಾದರಕ್ಷೆ ಧರಿಸಿರಿ. ಮನೆಯಿಂದ ಹೊರಗಡೆ ಹೋಗುವಾಗ ಜೊತೆಯಲ್ಲಿ ತಪ್ಪದೇ ಶುದ್ಧ ಕುಡಿಯುವ ನೀರನ್ನು ತೆಗೆದುಕೊಂಡು ಹೋಗಬೇಕು ಎಂದು ಹೇಳಿದ್ದಾರೆ.

ವ್ಯಕ್ತಿ ತೊದಲು ಮಾತು ಅಥವಾ ಅರ್ಥರಹಿತವಾಗಿ ಬಡಬಡಿಸಿದ್ದಲ್ಲಿ, ಕೂಡಲೇ ನೆರಳಿನ ಪ್ರದೇಶಕ್ಕೆ ಸ್ಥಳಾಂತರಿಸಿರಿ. ಕೆಳಗೆ ಮಲಗಿಸಿ, ಕಾಲುಗಳನ್ನು ಮೇಲಕೆತ್ತಿ ಆರೈಕೆ ಮಾಡಿ. ಆತ/ಆಕೆಯ ಹಣೆ, ಕತ್ತು, ಪಾದ ತೊಡೆಯ ಸಂದುಗಳನ್ನು ಒದ್ದೆ ಬಟ್ಟೆಯಿಂದ ಒರೆಸಿರಿ (ತಂಪಾದ ಅಥವಾ ಐಸ್ ನೀರಿನಿಂದ ಒರೆಸಬೇಡಿ) ಚರ್ಮ ಕೆಂಪಾದರೆ, ಬೆವರು ಕಡಿಮೆಯಾದರೆ, ದೇಹದ ಉಷ್ಣತೆ ಜಾಸ್ತಿಯಾದರೆ, ದೀರ್ಘವಾದ ತೀರ್ವ ಉಸಿರಾಟವಿದ್ದಲ್ಲಿ ತುರ್ತಾಗಿ ವೈದ್ಯರನ್ನು ಸಂಪರ್ಕಿಸಬೇಕು. ಇಲ್ಲವೇ 104ಕ್ಕೆ ಕರೆ ಮಾಡಬೇಕು.

ಬೇಸಿಗೆಯಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಂಭಾವ್ಯ ವಾಂತಿ–ಬೇಧಿ ಪ್ರಕರಣಗಳು ಉಂಟಾಗುವ ಹಿನ್ನಲೆಯಲ್ಲಿ ಶುದ್ಧೀಕರಿಸಿದ ನೀರು ಅಥವಾ ನೀರು ಶುದ್ಧೀಕರಣ ಘಟಕದ ನೀರನ್ನು ಕುಡಿಯಲು ಬಳಸಿ ಎಂದು ಅವರು ತಿಳಿಸಿದ್ದಾರೆ.

ಕೈಗಳನ್ನು ಸಾಬೂನು ಮತ್ತು ನೀರಿನಿಂದ 45 ಸೆಕೆಂಡ್‌ಗಳ ಕಾಲ ತೊಳೆದ ನಂತರ ಆಹಾರ ಸೇವಿಸಬೇಕು. ನೀರಿನ ಸಂಗ್ರಹಣಗಳ ಮೇಲೆ ತಪ್ಪದೇ ಮುಚ್ಚಳ ಮುಚ್ಚಬೇಕು. ಮಲ, ಮೂತ್ರ ವಿಸರ್ಜನೆಗಾಗಿ ಶೌಚಾಲಯ ಬಳಸಬೇಕು. ಸುರಕ್ಷಿತ ಆಹಾರ ಮಾತ್ರ ಸೇವಿಸಿ, ಆದಷ್ಟು ಮನೆಯಲ್ಲಿ ತಯಾರಿಸಿದ ಆಹಾರಕ್ಕೆ ಆದ್ಯತೆ ನೀಡಿರಿ ಎಂದು ಅವರು ಮನವಿ ಮಾಡಿದ್ದಾರೆ.

*ಏನು ಮಾಡಬಾರದು:*

ಬಿಗಿಯಾದ, ಗಾಢ ಬಣ್ಣದ, ಸಿಂಥೆಟಿಕ್ ಬಟ್ಟೆ ಧರಿಸಬಾರದು. ಕುಷನ್‌ಯುಕ್ತ ಕುರ್ಚಿಯಲ್ಲಿ ಕೂಡಬಾರದು. ಸೋಡಾ ಇತ್ಯಾದಿ ಕಾರ್ಬೋನೇಟೆಡ್ ತಂಪು ಪಾನಿಯಗಳನ್ನು ಕುಡಿಯಬೇಡಿ (ಬಾಯಾರಿಕೆ–ಯಾದಾಗ ಕಡ್ಡಾಯವಾಗಿ ನೀರು ಕುಡಿಯಬೇಕು). ಬೆವರನ್ನು ಒರೆಸಲು ಒರಟಾದ ಬಟ್ಟೆಯನ್ನು ಉಪಯೋಗಿಸಬೇಡಿ. ಕಾಫಿ, ಟೀ, ಅತಿ ಸಕ್ಕರೆ ಅಂಶವುಳ್ಳ ಪಾನೀಯ ಅತಿಯಾಗಿ ಸೇವಿಸಬಾರದು. ಬಿಸಿಯಾದ ಮಸಾಲೆಯುಕ್ತ ಆಹಾರ ತಿನ್ನಬಾರದು. ಮಾಂಸಹಾರ ಸೇವನೆ ಮತ್ತು ಮಧ್ಯಪಾನ ವರ್ಜಿಸಬೇಕು.

ಬಿಗಿಯಾದ ಗಾಳಿಯಾಡದ ಪಾದರಕ್ಷೆ ಅಥವಾ ಶೂ ಧರಿಸಬೇಡಿ. ಉಷ್ಣತೆಯಿಂದ ಸುಸ್ತಾದಾಗ ತುಂಬಾ ತಣ್ಣಗಿನ ಅಥವಾ ಶೀತಲೀಕರಿಸಿದ ನೀರಿನಿಂದ ಒರೆಸಿಕೊಳ್ಳಬೇಡಿ (ಇದರಿಂದ ದೇಹದ ಹೊರಪದರದಲ್ಲಿನ ರಕ್ತನಾಳಗಳು ಸಂಕುಚಿತಗೊಂಡು ದೇಹದ ಒಳಗಿನ ಉಷ್ಣತೆ ದೇಹದೊಳಗೆ ಬಂಧಿತವಾಗಿ ಅಂಗಾಂಗಗಳು ನಿಷ್ಕ್ರಿಯಗೊಂಡು ಹೆಚ್ಚಿನ ಹಾನಿಯಾಗುವ ಸಂಭವವಿರುತ್ತದೆ).

ಬೇಸಿಗೆಯಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಂಭಾವ್ಯ ವಾಂತಿ–ಬೇಧಿ ಪ್ರಕರಣಗಳು ಉಂಟಾಗುವ ಹಿನ್ನಲೆಯಲ್ಲಿ ಶುದ್ಧೀಕರಿಸದೇ ಇರುವ ನೀರನ್ನು ಮತ್ತು ಕೆರೆ, ಕುಂಟೆಗಳ ನೀರನ್ನು ನೇರವಾಗಿ ಕುಡಿಯಬಾರದು. ಕೈಗಳನ್ನು ತೊಳೆದುಕೊಳ್ಳದೇ ಆಹಾರವನ್ನು ಸೇವಿಸಬೇಡಿ, ನೀರಿನ ಸಂಗ್ರಹಣಗಳ ಮೇಲೆ ತಪ್ಪದೇ ಮುಚ್ಚಳ ಮುಚ್ಚಬೇಕು. ಬಯಲು ಪ್ರದೇಶಗಳಲ್ಲಿ ಮಲ, ಮೂತ್ರ ವಿಸರ್ಜನೆ ಮಾಡಬಾರದು. ರಸ್ತೆ ಬದಿ ತೆರೆದಿಟ್ಟ ಆಹಾರ ಪದಾರ್ಥ ಮತ್ತು ಕತ್ತಿರಿಸಿಟ್ಟ ಹಣ್ಣುಗಳನ್ನು ತಿನ್ನಬಾರದು. ತಯಾರಿಸಿದ ಆಹಾರವನ್ನು ಮುಚ್ಚಳದಿಂದ ಮುಚ್ಚಬೇಕು ಎಂದು ಹೇಳಿದ್ದಾರೆ.

*ಶಾಖಾಘಾತದ ಲಕ್ಷಣಗಳು:*

ಅತಿಹೆಚ್ಚು ಬಿಸಿಲಿನ ತಾಪಮಾನದಿಂದ ಮನುಷ್ಯನು ಶಾಖಾಘಾತಕ್ಕೆ ಒಳಗಾಗುವ ಸಂಭವವಿರುತ್ತದೆ. ಅದರಲ್ಲಿ ಮುಖ್ಯವಾಗಿ ಸಂಭ್ರಾಂತಿ, ಅಸಂಗತ ಮಾತು, ವ್ಯತ್ಯಸ್ಥ ಪ್ರಜ್ಞೆ ಶಾಖಾಘಾತದ ಲಕ್ಷಣಗಳಾಗಿವೆ.

*ಶಾಖಾಘಾತಕ್ಕೆ ಚಿಕಿತ್ಸೆ:*

ಮನುಷ್ಯನು ಬಿಸಿಲಿನ ಬೇಗೆಯಿಂದ ಶಾಖಾಘಾತಕ್ಕೊಳಗದಾಗ ನೆರಳಿರುವೆಡೆಗೆ ಸ್ಥಳಾಂತರಿಸಬೇಕು. ವ್ಯಕ್ತಿಯ ವಸ್ತ್ರಗಳನ್ನು ಸಡಿಲಗೊಳಿಸಿ, ಅಂಗಾತ ಮಲಗಿಸಿ, ಕಾಲುಗಳನ್ನು ಎತ್ತರಿಸಿ, ಸಾಮಾನ್ಯ ನೀರಿನಿಂದ ದೇಹವನ್ನು ಒರೆಸಬೇಕು. ಇಲ್ಲವೇ ಹತ್ತಿರದ ವೈದ್ಯರನ್ನು ಕರೆಸಬೇಕು.

ಜಿಲ್ಲೆಯಲ್ಲಿ ಪ್ರಖರ ಬಿಸಿಲು ಕಂಡುಬರುತ್ತಿರುವ ಹಿನ್ನಲೆಯಲ್ಲಿ ಎಲ್ಲಾ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ತಲಾ 01 ಬೆಡ್, ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ 02 ಬೆಡ್ ಕಾಯ್ದಿರಿಸಲಾಗಿದೆ ಎಂದು ತಿಳಿಸಿದ್ದಾರೆ.

ಜಿಲ್ಲೆಯ ಗ್ರಾಮ ಮಟ್ಟದಲ್ಲಿರುವ ಆಯುಷ್ಮಾನ್ ಆರೋಗ್ಯ ಮಂದಿರ ಸೇರಿದಂತೆ ಎಲ್ಲ ಆರೋಗ್ಯ ಕೇಂದ್ರಗಳ್ಲಿ ಓಆರ್‌ಎಸ್ ದ್ರಾವಣ ಸಿದ್ಧಪಡಿಸಿ ಆಸ್ಪತ್ರೆಗೆ ಬರುವವರಿಗೆ ಸದಾ ಒದಗಿಸುವ ಓಆರ್‌ಎಸ್ ಕಾರ್ನರ್ ವ್ಯವಸ್ಥೆ ಮಾಡಲಾಗಿದೆ. ಬಿಸಿಲಿನ ಶಾಖಾಘಾತದ ಚಿಕಿತ್ಸೆಗೆ ಸಂಬಂಧಿಸಿದಂತೆ ಅಗತ್ಯ ತುರ್ತು ಔಷಧಿಗಳನ್ನು ಕೊರತೆಯಾಗದಂತೆ ದಾಸ್ತಾನು ಇಡಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರವಾಸೋದ್ಯಮ ತರಬೇತಿಗೆ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.20–ಜಿಲ್ಲೆಯ ಪ್ರವಾಸೋದ್ಯಮ ಇಲಾಖೆಯ, ವತಿಯಿಂದ 2024–2025 ನೇ ಸಾಲಿನ ಎಸ್.ಎಸ್.ಪಿ/ಟಿ.ಎಸ್.ಪಿ ಯೋಜನೆ ಅಡಿಯಲ್ಲಿ ರಾಯಚೂರು ಜಿಲ್ಲೆಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ /ಅತಿಥ್ಯ ಕ್ಷೇತ್ರದಲ್ಲಿ, ಕೌಶಲ್ಯಾಭಿವೃದ್ಧಿ ಕುರಿತು ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು 8ನೇ ತರಗತಿ ವ್ಯಾಸಂಗ ಮಾಡಿರಬೇಕು. 20ರಿಂದ 45ವರ್ಷದೊಳಗಿನ ವಯಸ್ಸು ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳಿಗೆ 05 ತಿಂಗಳ ಕಾಲ ಮಲ್ಟಿ ಕಸಿನ್ ಕೂಕ್ ಹಾಗೂ 04 ತಿಂಗಳ ಕಾಲ ಫುಡ್ & ಬೆವೆರೇಜ್ ಸರ್‌ವೀಸ್ ಸ್ಟೆವಾರ್ಡ್ ತರಬೇತಿ ನೀಡಲಾಗುವುದು.

ತರಬೇತಿಯ ಅವಧಿಯಲ್ಲಿ ಅಭ್ಯರ್ಥಿಗಳಿಗೆ ಉಚಿತ ಊಟ ಹಾಗೂ ಉಚಿತ ವಸತಿ ಸೌಕರ್ಯದ ವ್ಯವಸ್ಥೆ ನೀಡಲಾಗುವುದು. ಆಸಕ್ತರು ಏ.04 ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ರಾಜೇಂದ್ರ ಜಲ್ದಾರ್, ಸಹಾಯಕ ನರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಗಣೇಶ ಗುಡಿ ಹತ್ತಿರ ನಿಜಲಿಂಗಪ್ಪ ಕಾಲೋನಿ, ರಸ್ತೆ, ರಾಯಚೂರು ಅಥವಾ ದೂರವಾಣಿ ಸಂಖ್ಯೆ: 08532–200677 ಸಂಪರ್ಕ ಮಾಡಬಹುದಾಗಿದೆ ಎಂದು, ಸಹಾಯಕ ನರ್ದೇಶಕರು, ಪ್ರವಾಸೋದ್ಯಮ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಸ್‌ಎಸ್‌ಎಲ್‌ಸಿ ಪರೀಕ್ಷೆ: ವೀಕ್ಷಣಾ ಜಾಗೃತಾ ದಳ ನೇಮಕ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.20–ಮಾ.21 ರಿಂದ ಏ.04 ರ ವರೆಗೆ ಜಿಲ್ಲೆಯ 64 ಪರೀಕ್ಷಾ ಕೇಂದ್ರಗಳಲ್ಲಿ ಎಸ್‌ಎಸ್‌ಎಲ್‌ಸಿ ಮುಖ್ಯ ಪರೀ–ಕ್ಷೆ–1 ನಡೆಯಲಿದ್ದು, ಆಯಾ ಕೇಂದ್ರಗಳಿಗೆ ವಿವಿಧ ಇಲಾಖಾ ಅಧಿಕಾರಿಗಳನ್ನೊಳಗೊಂಡ ವೀಕ್ಷಣಾ ಜಾಗೃತಾ ದಳ ರಚಿಸಿ ವೀಕ್ಷಕರನ್ನಾಗಿ ನೇಮಿಸಲಾಗಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ. ಜಿಲ್ಲೆಯ ಆಯಾ ತಾಲ್ಲೂಕುಗಳಲ್ಲಿನ ಪರೀಕ್ಷಾ ಕೇಂದ್ರಗಳಿಗೆ ನೇಮಿಸಿರುವ ಅಧಿಕಾರಿಗಳು ಮಾ.21 ರಿಂದ ಏ.04 ರ ವರೆಗೆ ನಡೆಯುವ ಎಸ್‌ಎಸ್‌ಎಲ್‌ಸಿ ಪರೀಕ್ಷೆ–1ರ ದಿನಗಳಂದು ಪರೀಕ್ಷೆ ಪ್ರಾರಂಭವಾಗುವ ಸಮಯದಿಂದ ಮುಕ್ತಾಯದ ವರೆಗೆ ಕಡ್ಡಾಯವಾಗಿ 4–5 ಪರೀಕ್ಷಾ ಕೇಂದ್ರಗಳಿಗೆ ಪಾಳಿ ಪದ್ಧತಿಯಲ್ಲಿ ಭೇಟಿ ನೀಡಿ ಪರೀಕ್ಷೆಯು ಪಾರದರ್ಶಕವಾಗಿ ನಡೆಯುತ್ತಿರುವ ಕುರಿತು ಪರಿಶೀಲಿಸುವರು.

ವೇಳಾ ಪಟ್ಟಿಯ ಅನುಸಾರ ಪರಿಶೀಲಿಸಿದ ಕಾರ್ಯದ ಕುರಿತು ವರದಿಯನ್ನು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಸಲ್ಲಿಸುವಂತೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

## ನರೇಗಾ ಯೋಜನೆ ಮೂಲಕ ರೈತರು ಜಮೀನುಗಳಿಗೆ ಅಭಿವೃದ್ಧಿ: ಶರಣಪ್ಪ ಕೆಳಗಿನಮನಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕುಕನೂರ ತಾಲೂಕಿನ ಇಟಗಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಮನ್ನಾಪೂರ ಗ್ರಾಮದ ವ್ಯಾಪ್ತಿಯಲ್ಲಿ ಸಾಮೂಹಿಕ ಬದು ನಿರ್ಮಾಣ ಕಾಮಗಾರಿ ಪ್ರಾರಂಭಿಸಲಾಯಿತು.

ಕಾಮಗಾರಿ ಸ್ಥಳದಲ್ಲಿ ರೋಜಗಾರ ದಿನಾಚರಣೆ ಮಾಡಿ ಕೂಲಿ ಕಾರರಿಗೆ ಮಾಹಿತಿ ನೀಡಲಾಯಿತು.

ಮಾನ್ಯ ಸಹಾಯಕ ನಿರ್ದೇಶಕರು ಮಾತನಾಡಿ ಕೂಲಿಕಾರರು ನಿರಂತರವಾಗಿ ಕಾಯಕ ಪ್ರವೃತ್ತರಾಗಬೇಕು, ಮಣ್ಣನ್ನು ಸಂರಕ್ಷಿಸಬೇಕು, ಮಣ್ಣಿನಿಂದಲೇ ಜೀವನ ಅದಕ್ಕಾಗಿ ಮಣ್ಣು ಸಂರಕ್ಷಿಸಬಹುದಾದ ಕಾಮಗಾರಿಗಳನ್ನು ನರೇಗಾ ಯೋಜನೆಯಡಿ ಅನುಷ್ಠಾನ ಮಾಡುತ್ತಿರುವುದು ಬಹಳಷ್ಟು ಹೆಮ್ಮೆಯ ವಿಷಯ ಕೂಲಿಕಾರರು PMSBY, PMJJBY ಅಂತಹ ಯೋಜನೆಗಳನ್ನು ನೊಂದಣಿ ಮಾಡಿಕೊಳ್ಳಬೇಕು ಎಂದರು.

ಸ್ಥಳದಲ್ಲಿ ಗ್ರಾಮ ಪಂಚಾಯತಿ ಉಪಾಧ್ಯಕ್ಷರು, ಸದಸ್ಯರು, ತಾಂತ್ರಿಕ ಸಂಯೋಜಕ ಸುರೇಶ್, ಐ.ಇ.ಸಿ ಸಂಯೋಜಕ ಲಕ್ಷ್ಮಣ ಕೆರಳ್ಳಿ, ತಾಂತ್ರಿಕ ಸಹಾಯಕ ರವಿರಾಜ ಹೂಲಿ, ಹುಸೇನ್ ಪಾಷಾ ಗ್ರಾಮ ಕಾಯಕ ಮಿತ್ರರು ಕೂಲಿಕಾರರು ಹಾಜರಿದ್ದರು.

## ಪ್ರವಾಸಿ ಮಾರ್ಗದರ್ಶಿ ತರಬೇತಿಗೆ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.20–ಜಿಲ್ಲೆಯ ಪ್ರವಾಸೋದ್ಯಮ ಇಲಾಖೆಯ, ವತಿಯಿಂದ 2024–2025 ನೇ ಸಾಲಿನ ಎಸ್.ಎಸ್.ಪಿ/ಟಿ.ಎಸ್.ಪಿ ಯೋಜನೆ ಅಡಿಯಲ್ಲಿ ಕಿತ್ತೂರು ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕ ಭಾಗದ 08 ಜಿಲ್ಲೆಗಳಲ್ಲಿ ಪ್ರವಾಸಿ ತಾಣಗಳನ್ನು ಉತ್ತೇಜಿಸಿ ಪ್ರಚಾರ ಪಡಿಸಲು ರಾಯಚೂರು ಜಿಲ್ಲೆಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸಿ ಮಾರ್ಗದರ್ಶಿ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಯು 30 ದಿನಗಳ ಕಾಲ ಇದ್ದು, ತರಬೇತಿ ಪಡೆದ ಅಭ್ಯರ್ಥಿಗಳಿಗೆ ಉಚಿತ ಜಾಕೆಟ್ ಹಾಗೂ ಒಂದು ಜೊತೆ ಸ್ಪೋರ್ಟ್ಸ್ ಶೂ ನೀಡಲಾಗುವುದು. ಆಸಕ್ತರು ಏ.05 ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ಎಂದು , ಸಹಾಯಕ ನರ್ದೇಶಕರು ಪ್ರವಾಸೋದ್ಯಮ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕರ್ನಾಟಕ ಸಾಹಿತ್ಯ ಅಕಾಡೆಮಿಯ ಗಿರಿಜನ ಉಪಯೋಜನೆಯಡಿ:ಅರ್ಜಿ ಆಹ್ವಾನ

ರಾಯಚೂರು ಮಾ.20(ಕರ್ನಾಟಕ ವಾರ್ತೆ): ಕರ್ನಾಟಕ ಸಾಹಿತ್ಯ ಅಕಾಡೆಮಿಯು ಕರ್ನಾಡಕ ಜಾನಪದ ವಿಶ್ವವಿದ್ಯಾಲಯ ಗೊಟಗೋಡಿ, ಹಾವೇರಿ ಜಿಲ್ಲೆ ಇವರ ಸಹಯೋಗದಲ್ಲಿ , ಗಿರಿಜನ ಉಪಯೋಜನೆಯಡಿ ಕನ್ನಡ ಸಾಹಿತ್ಯ ಮತ್ತು ಸಾಂವಿಧಾನಿಕ ಮೌಲ್ಯಗಳು ಎಂಬ ಹೆಸರಿನಲ್ಲಿ 3 ದಿನಗಳ ಕಮ್ಮಟವನ್ನು ಏ.21,22 ಮತ್ತು 23 ರಂದು ನಡೆಸಲು ಉದ್ದೇಶಿಸಿದ್ದು, ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಯಿರುವ 20ರಿಂದ 45ವರ್ಷದೊಳಗಿನ ವಯಸ್ಸು ಹೊಂದಿರುವ ಪರಿಶಿಷ್ಟ ಪಂಗಡಕ್ಕೆ ಸೇರಿದ ಎಲ್ಲಾ ಭಾಗದ ಅಭ್ಯರ್ಥಿಗಳು ಏ.05 ರೊಳಗೆ ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್ಸೈಟ್ http://karnatakasahithyaacademy.org ಇಂದ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 70ನೆಯ ಗ್ರಂಥಾಲಯ ಸಂಘದ ಅಂತರಾಷ್ಟ್ರೀಯ ಸಮ್ಮೇಳನದ ಉದ್ಘಾಟನಾ ಸಮಾರಂಭ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯವು ನವದೆಹಲಿಯ ಭಾರತೀಯ ಗ್ರಂಥಾಲಯ ಸಂಘ ಮತ್ತು ಕಲಬುರಗಿಯ ಕರ್ನಾಟಕ ಕೇಂದ್ರಿಯ ವಿಶ್ವವಿದ್ಯಾಲಯಗಳ ಸಹಯೋಗದೊಂದಿಗೆ 2025ರ ಮಾರ್ಚ್ 20 ರಿಂದ 22 ರವರೆಗೆ ನಡೆಯಲಿರುವ 70ನೆಯ ಗ್ರಂಥಾಲಯ ಸಂಘದ ಅಂತರಾಷ್ಟ್ರೀಯ ಸಮ್ಮೇಳನದ ಉದ್ಘಾಟನೆಯು ಕೃ.ವಿ.ವಿ., ರಾಯಚೂರು ಆವರಣದಲ್ಲಿ ಇಂದು ಜರುಗಿತು. "ಗ್ರಂಥಾಲಯ ಬಳಕೆದಾರರ ಸುಸ್ಥಿರ ಜ್ಞಾನಾರ್ಜನೆಯಲ್ಲಿ ಗ್ರಂಥಾಲಯ ಮತ್ತು ಕೃತಕ ಬುದ್ಧಿಮತ್ತೆಯ ಮಹತ್ವ"ದ ಕುರಿತಾದ ಉದ್ದೇಶವನ್ನು ಹೊಂದಿದ ಈ ಸಮ್ಮೇಳನದ ಉದ್ಘಾಟನೆಯನ್ನು ಕಲಬುರಗಿಯ ಕರ್ನಾಟಕ ಕೇಂದ್ರಿಯ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಬಟ್ಟು ಸತ್ಯನಾರಾಯಣ ರವರು ನೆರವೇರಿಸಿದರು. ನಂತರ ಮಾತನಾಡಿದ ಅವರು ಗ್ರಂಥಾಲಯಗಳು ಜ್ಞಾನದ ಭಂಡಾರವಿದ್ದಂತೆ. ಅವುಗಳನ್ನು ಸರಿಯಾಗಿ ಬಳಕೆಮಾಡಿಕೊಂಡು ಜ್ಞಾನಾರ್ಜಿತರಾಗಬೇಕೆಂದು ನೆರೆದಿದ್ದ ಸಮ್ಮೇಳನದ ಪ್ರತಿನಿಧಿಗಳಿಗೆ ಕರೆ ನೀಡಿದರು. ಗ್ರಂಥಾಲಯ ಇಲ್ಲದೇ ಯಾವುದೇ ಶಿಕ್ಷಣ ಸಂಸ್ಥೆಯು ಶಿಕ್ಷಣ ನೀಡಲು ಅನರ್ಹ ಎಂದು ಅಭಿಪ್ರಾಯಪಟ್ಟರು. ಭಾರತದ ಇತಿಹಾಸವನ್ನು ತೆ–ರೆದು ನೋಡಿದರೆ ತಕ್ಷಶಿಲಾ ಮತ್ತು ನಳಂದಾಗಳಂತಹ ವಿಶ್ವವಿದ್ಯಾಲಯಗಳು ಉತ್ಕೃಷ್ಟವಾದ ಗ್ರಂಥಾಲಯಗಳನ್ನು ಹೊಂದಿ ಇಡೀ ಜಗತ್ತಿಗೇ ಜ್ಞಾನವನ್ನೆರದಿವೆ. ಆದ್ದರಿಂದ ಪ್ರಸ್ತುತವಿರುವ ಗ್ರಂಥಾಲಯಗಳು ಇಂದಿನ ತಂತ್ರಜ್ಞಾನಗಳನ್ನು ಮೈಗೂಡಿಸಿಕೊಂಡು ಮುದ್ರಿತ ಪ್ರತಿ ಹಾಗೂ ಮೃದು ಪ್ರತಿಗಳನ್ನು ಉಪಯೋಗಿಸಿಕೊಂಡು ಸಾಗಬೇಕಾಗಿದೆ. ಭಾರತ ಸರ್ಕಾರವು ಎಲ್ಲಾ ಗ್ರಂಥಾಲಗಳಲ್ಲಿ ಆನ್ಲೈನ್ ನಿಯತಕಾಲಿಕೆಗಳನ್ನು ಕೂಡ ಒದಗಿಸುತ್ತಿದ್ದು, ಪ್ರತಿಯೊಬ್ಬರಿಗೂ ಅನುಕೂಲವಾಗಲಿದೆ ಎಂದರು. ಮುಂದಿನ 2047ರಲ್ಲಿ ಅಭಿವೃದ್ಧಿ ಹೊಂದಿದ ವಿಕಸಿತ ಭಾರತವನ್ನು ಕಾಣಬಹುದಾಗಿದ್ದು, ರಾಷ್ಟ್ರದ ಅಭಿವೃದ್ಧಿಗೆ ಗ್ರಂಥಪಾಲಕರ ಪಾತ್ರವೂ ಅತ್ಯಂತ ಮುಖ್ಯವಾಗಿರುತ್ತದೆ ಎಂದರು. ಇದಲ್ಲದೇ ಪ್ರತಿಯೊಬ್ಬರಿಗೂ ಕೌಶಲ್ಯಾಭಿವೃದ್ಧಿ ಅತ್ಯಂತ ಮುಖ್ಯವಾಗಿದ್ದು, ಅದನ್ನೂ ಕೂಡ ಗ್ರಂಥಾಲಯಗಳಲ್ಲಿ ಅಳವಡಿಸಲು ಯೋಜಿಸಲಾಗುತ್ತಿದೆ. ಗ್ರಂಥಾಲಯಗಳ ನಿವರ್ಹಣೆಯೂ ಕೂಡ ಪ್ರಮುಖವಾಗಿದೆ ಮತ್ತು ಗ್ರಂಥಾಲಯಗಳನ್ನು ಸಮಯಾನುಸಾರ ತೆರೆಯದೆ ನಿರಂತರವಾಗಿ ತೆರೆದಿಡುವ ವ್ಯವಸ್ಥೆ ಆಗಬೇಕಿದೆ ಎಂದು ತಿಳಿಸಿದರು. ಕೃತಕಬುದ್ಧಿಮತ್ತೆಯ ತಂತ್ರಜ್ಞಾನವನ್ನು ಸೂಕ್ತವಾಗಿ ಉಪಯೋಗಿಸಿದಲ್ಲಿ ಗ್ರಂಥಾಲಯಗಳು ಬಳಕೆದಾರರಿಗೆ ಇನ್ನೂ ಹತ್ತಿರವಾಗಲಿವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಎಂ. ಹನುಮಂತಪ್ಪ ರವರು ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ಇಂದಿನ ಡಿಜಿಟಲ್ ಯುಗದಲ್ಲಿ ಗ್ರಂಥಾಲಯಗಳು ಮುದ್ರಿತ ಪ್ರತಿಗಳಿಂದ ಡಿಜಟಲೀಕರಣಗೊಂಡು ಬಳಕೆದಾರರಿಗೆ ಅವಶ್ಯಕ ಮಾಹಿತಿಯನ್ನು ಕ್ಷಣಾರ್ಧದಲ್ಲಿ ಒದಗಿಸುತ್ತಿರುವುದು ಹೆಮ್ಮೆಯ ಸಂಗತಿ ಹಾಗೂ ಗ್ರಂಥಾಲಯದಲ್ಲಾದ ಮೈಲುಗಲ್ಲಾಗಿದೆ. "ದೇಶ ಸುತ್ತು ಇಲ್ಲವೇ ಕೋಶ ಓದು" ಎಂಬ ನಾಣ್ಣುಡಿಯಂತೆ ಇಂದಿನ ಗ್ರಂಥಾಲಯಗಳು ಜ್ಞಾನಗಳ ಆಗರವಾಗಿವೆ. ಇವುಗಳನ್ನು ಸದುಪಯೋಗಪಡಿಸಿಕೊಂಡರೆ ಮಾತ್ರ ಬಳಕೆದಾರರು ಯಶಸ್ವಿಯಾಗುವುದು ಖಂಡಿತ ಎಂದು ಕಿವಿಮಾತು ಹೇಳಿದರು. ರಾಯಚೂರು ಕೃ.ವಿ.ವಿ ಯ ಗ್ರಂಥಾಲಯವು ಡಿಜಿಟಲೀಕರಣಗೊಂಡಿದ್ದು ಬಳಕೆದಾರರು ನಿರ್ದಿಷ್ಟ "ಬಾರ್ ಕೋಡ್" ಬಳಸಿ ಯಾವುದೇ ಪುಸ್ತಕ ಹಾಗೂ ನಿಯತಕಾಲಿಕೆಗೆ ಹೋಗಬಹುದು. ಅಲ್ಲದೇ, ಕೋಹಾ, ಗ್ರಾಮರ್ಲಿ ಇತ್ಯಾದಿಗಳ ವ್ಯವಸ್ಥೆಯನ್ನು ಹೊಂದಿದ್ದು ಇಲ್ಲಿನ ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳುತ್ತಿರುವರು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರಾಯಚೂರು ವಿಶ್ವವಿದ್ಯಾಲಯದ ಹಂಗಾಮಿ ಕುಲಪತಿ ಡಾ.ಸುಯಮೀಂದ್ರ ಕುಲಕರ್ಣಿ, ಭಾರತೀಯ ಗ್ರಂಥಾಲಯ ಸಂಘದ ಅಧ್ಯಕ್ಷ ಡಾ.ಮೋಹನ ಖೇರ್ಡೆ, ಪ್ರಧಾನ ಕಾರ್ಯದರ್ಶಿ ಡಾ.ಓ.ಎನ್. ಚೌಬೆ, ರಾಜೀವ್ ಗಾಂಧಿ ವೈದ್ಯಕೀಯ ವಿಜ್ಞಾನಗಳ ವಿಶ್ವವಿದ್ಯಾಲಯದ ಗ್ರಂಥಪಾಲಕ ಡಾ.ಎಚ್.ಎಸ್.ಸಿದ್ದಮಲ್ಲಯ್ಯ, ಗುಲಬರ್ಗಾ ವಿಸ್ವವಿದ್ಯಾಲಯದ ಗ್ರಂಥಪಾಲಕ ಡಾ.ಸುರೇಶ ಜಂಗೆ, ರಾಯಚೂರು ಕೃ.ವಿ.ವಿ ಯ ವ್ಯವಸ್ಥಾಪನಾ ಮಂಡಳಿಯ ಗೌರವಾನ್ವಿತ ಸದಸ್ಯರಾದ ಶ್ರೀ ಬಸನಗೌಡ ಬ್ಯಾಗವಾಟ್, ಶ್ರೀ ಮಲ್ಲಿಕಾರ್ಜುನ.ಡಿ, ಶ್ರೀ ಮಲ್ಲೇಶ ಕೊಲಿಮಿ, ಡಾ.ಗುರುರಾಜ ಸುಂಕದ, ಸಂಘಟನ ಕಾರ್ಯದರ್ಶಿ ಡಾ.ಮಚೇಂದ್ರನಾಥ.ಎಸ್, ಸಹ ಸಂಘಟನ ಕಾರ್ಯದರ್ಶಿ ಡಾ.ಪಿಎಸ್.ಕಟ್ಟಿಮನಿ ಸೇರಿದಂತೆ ದೇಶದ ವಿವಿಧ ರಾಜ್ಯಗಳಿಂದ ಆಗಮಿಸಿದ್ದ 150ಕ್ಕೂ ಹೆಚ್ಚು ಪ್ರತಿನಿಧಿಗಳಿದ್ದರು.

## ಮೊದಲ ಪತ್ರಿಕಾ ಛಾಯಾಗ್ರಹಣ ಸ್ಪರ್ಧೆಯ ಬಹುಮಾನ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.20–ಕರ್ನಾಟಕ ಮಾಧ್ಯಮ ಅಕಾಡೆಮಿಯು ಮಾರ್ಚ್ 23 ರಂದು ಹುಬ್ಬಳ್ಳಿಯ ಇಂದಿರಾ ಗಾಜಿನ ಮನೆಯಲ್ಲಿ ಪತ್ರಿಕಾ ಛಾಯಾಗ್ರಹಣ ಕುರಿತು "ಫೋಕಸ್ ಆನ್ ನ್ಯೂಸ್" ಕಾರ್ಯಾಗಾರವನ್ನು ಆಯೋಜಿಸಿದೆ. ಇದರೊಂದಿಗೆ ಅಕಾಡೆಮಿಯು ಆಯೋಜಿಸಿದ್ದ ಮೊದಲ ಪತ್ರಿಕಾ ಛಾಯಾಗ್ರಹಣ ಸ್ಪರ್ಧೆಯ ಬಹುಮಾನ ವಿತರಣೆ ಹಾಗೂ ಸ್ಪರ್ಧೆಯಲ್ಲಿ ಭಾಗವಹಿಸಿದ್ದ ಛಾಯಾಚಿತ್ರಗಳ ಪ್ರದರ್ಶನ ನಡೆಯಲಿದೆ. ಛಾಯಾಚಿತ್ರ ಪ್ರದರ್ಶನವು ಮಾರ್ಚ್ 23 ಹಾಗೂ 24 ರಂದು ನಡೆಯಲಿದೆ.

ಈ ಕಾರ್ಯಾಗಾರವನ್ನು ಕಾರ್ಮಿಕ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಅವರು ಉದ್ಘಾಟಿಸಲಿದ್ದಾರೆ.

ಮುಖ್ಯಮಂತ್ರಿಯವರ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಅಕಾಡೆಮಿಯ ಪತ್ರಿಕಾ ಛಾಯಾಗ್ರಹಣ ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಿಸಲಿದ್ದಾರೆ. ರಾಷ್ಟ್ರಪ್ರಶಸ್ತಿ ಪುರಸ್ಕೃತ ಪತ್ರಿಕಾ ಛಾಯಾಗ್ರಾಹಕಿ ಶಿಪ್ರಾ ದಾಸ್ ಪ್ರಧಾನ ಭಾಷಣ ಮಾಡುವರು.

ಈ ಸಂದರ್ಭದಲ್ಲಿ "ಪತ್ರಿಕಾ ಛಾಯಾಗ್ರಹಣದ ಪ್ರಸಕ್ತ ಸ್ವರೂಪ ಮತ್ತು ಸವಾಲುಗಳ" ಕುರಿತು ಗೋಷ್ಠಿ ನಡೆಯಲಿದ್ದು, ಪತ್ರಿಕಾ ಛಾಯಾಗ್ರಾಹಕರಾದ ಶಿಪ್ರಾ ದಾಸ್, ಭಾನು ಪ್ರಕಾಶ್ ಚಂದ್ರ, ವಿಶ್ವನಾಥ ಸುವರ್ಣ ಹಾಗೂ ಹಿರಿಯ ಪತ್ರಕರ್ತರಾದ ಮಲ್ಲಿಕಾರ್ಜುನ ಸಿದ್ದಣ್ಣವರ, ಬಂಡು ಕುಲಕರ್ಣಿ ಭಾಗವಹಿಸಲಿದ್ದಾರೆ.

ಸಮಾರೋಪ ಸಮಾರಂಭದಲ್ಲಿ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಎಸ್. ಹೊರಟ್ಟಿ ಅವರು ಭಾಗವಹಿಸಲಿದ್ದಾರೆ ಎಂದು ಅಕಾಡೆಮಿ ಅಧ್ಯಕ್ಷರಾದ ಆಯೇಶಾ ಖಾನಂ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕರ್ನಾಟಕ ಮಾಧ್ಯಮ ಅಕಾಡೆಮಿಯು ಮೊಟ್ಟಮೊದಲ ಬಾರಿಗೆ ಪತ್ರಿಕಾ ಛಾಯಾಗ್ರಾಹಕರಿಗಾಗಿ ಸುದ್ದಿ ಛಾಯಾಗ್ರಹಣ ಸ್ಪರ್ಧೆ ಏರ್ಪಡಿಸಿತ್ತು. ಇದರಲ್ಲಿ ರಾಜ್ಯಾದ್ಯಂತ 60 ಕ್ಕೂ ಹೆಚ್ಚು ಛಾಯಾಗ್ರಾಹಕರು ಭಾಗವಹಿಸಿದ್ದರು. ಅವರ ಛಾಯಾಚಿತ್ರಗಳನ್ನು ಕಾರ್ಯಕ್ರಮದ ದಿನ ಪ್ರದರ್ಶಿಸಲಾಗುತ್ತಿದೆ.

# ಮಾ.24 ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.20-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಇತರೆ ಇಲಾಖೆಗಳ ಸಹಯೋಗದಲ್ಲಿ ಮಾರ್ಚ 24 ರಂದು ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆ 10 ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ಹಮ್ಮಿಕೊಂಡ ಸಮಾರೋಪ ಹಾಗೂ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 10.30ಕ್ಕೆ ನವನಗರದ ಕಲಾಭವನದಲ್ಲಿ ಜರುಗಲಿರುವ ಕಾರ್ಯಕ್ರಮವನ್ನು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಉದ್ಘಾಟಿಸುವರು. ಅಧ್ಯಕ್ಷತೆಯನ್ನು ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್.ವಾಯ್.ಮೇಟಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ, ಶಾಸಕರಾದ ಜೆ.ಟಿ.ಪಾಟೀಲ, ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ ಜಿಲ್ಲೆಯ ಎಲ್ಲ ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಗಣ್ಯಮಾನ್ಯರು ಆಗಮಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಸಾಧಕ ಮಹಿಳೆಯರನ್ನು ಸನ್ಮಾನಿಸಲಾಗುತ್ತದೆ. ಮಹಿಳೆಯರಿಗಾಗಿ ಸೈಬರ್ ಸುರಕ್ಷತೆ ಕುರಿತು ನವನಗರ ಪೊಲೀಸ್ ಠಾಣೆಯ ಡಿ.ಎಸ್.ಪಿ ಮಂಜುನಾಥ ಗಂಗಲ್, ಮಹಿಳೆಯರಲ್ಲಿ ಮಾನಸಿಕ ಒತ್ತಡ ನಿರ್ವಹಣೆ ಕುರಿತು ಮನೋರೋಗ ತಜ್ಞೆ ಡಾ.ಸೌಮ್ಯ ಪಾಟೀಲ ಉಪನ್ಯಾಸ ನೀಡಲಿದ್ದಾರೆ. ಇದೇ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಹೊರತಂದ ಪಂಚ ಗ್ಯಾರಂಟಿ ಯೋಜನೆಗಳ ಜಿಲ್ಲಾ ಪ್ರಗತಿ ನೋಟದ ಪುಸ್ತಕವನ್ನು ಬಿಡುಗಡೆ ಮಾಡಲಾಗುತ್ತಿದೆ.

# ಅಪಘಾತ ವಿಮೆ ಹಣ ನೀಡಲು ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.20-ರಸ್ತೆ ಅಪಘಾತದಲ್ಲಿ ಮೃತಪಟ್ಟ ವ್ಯಕ್ತಿಗೆ ಅಪಘಾತ ವಿಮೆ ನೀಡಲು ನಿರಾಕರಿಸಿದ್ದ ಎಸಿಕೆಒ ಜನರಲ್ ಇನ್ಸೂರನ್ಸ್ ವಿಮಾ ಕಂಪನಿಗೆ ಮೃತ ವ್ಯಕ್ತಿಯ ಕುಟುಂಬಕ್ಕೆ ಬಡ್ಡಿ ಸಮೇತ ವಿಮೆ ಹಣ ನೀಡುವಂತೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಆದೇಶಿಸಿದೆ.

ಜಿಲ್ಲೆಯ ಜಮಖಂಡಿ ನಿವಾಸಿ ಶೈಲಾ ಹಾಲಿಹಾಳ ಅವರ ಪತಿ ರಸ್ತೆ ಅಪಘಾತದಲ್ಲಿ ಮೃತಪಟ್ಟಿದ್ದರು. ಮೃತ ವ್ಯಕ್ತಿ ಎಸಿಕೆಒ ವಿಮಾ ಕಂಪನಿಯಲ್ಲಿ 15 ಲಕ್ಷ ವರೆಗೆ ವೈಯಕ್ತಿಕ ಅಪಘಾತ ವಿಮೆ ಪಾಲಸಿ ಮಾಡಿಸಿದ್ದರು. ರಸ್ತೆ ಅಪಘಾತದಲ್ಲಿ ಮೃತಪಟ್ಟ ಬಗ್ಗೆ ಮುಧೋಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದ್ದು, ಮೃತ ವ್ಯಕ್ತಿಯ ಪತ್ನಿ ಹಾಗೂ ಮಕ್ಕಳು ವಿಮೆ ಮೊತ್ತಕ್ಕೆ ಕ್ಲೇಮ್ ಮಾಡಿದ್ದರು. ವಿಮೆ ಕಂಪನಿ ಕ್ಲೇಮ್ ಇತ್ಯರ್ಥಪಡಿಸುವಲ್ಲಿ ನಿರ್ಲಕ್ಷ ವಹಿಸಿತ್ತು.

ಈ ಹಿನ್ನೆಲೆಯಲ್ಲಿ ಮೃತ ವ್ಯಕ್ತಿಯ ವಾರಸುದಾರರು ವಿಮಾ ಕಂಪನಿ ವಿರುದ್ಧ ಸೂಕ್ತ ಕ್ರಮಕೈಗೊಳ್ಳುವಂತೆ ಬಾಗಲಕೋಟೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ದೂರು ಸಲ್ಲಿಸಿದ್ದರು. ದೂರನ್ನು ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷ ಪ್ರಭುಲಿಂಗಸ್ವಾಮಿ ಹಿರೇಮಠ, ಮಹಿಳಾ ಸದಸ್ಯೆ ಸಿ.ಎಚ್.ಸಮಿಉನ್ನಿಸ್ ಅಬ್ರಾರ್ ವಿಮಾ ಪಾಲಸಿ ನಿಯಮದಂತೆ ಮೃತರ ವಾರಸುದಾರರಿಗೆ ವಿಮೆ ಮೊತ್ತ 15 ಲಕ್ಷ ರೂ. ಹಾಗೂ ಅದಕ್ಕೆ ಶೇ.6ರ ಬಡ್ಡಿ ಹಣದ ಸಮೇತ ನೀಡುವಂತೆ ಆಯೋಗ ಆದೇಶ ಹೊರಡಿಸಿದೆ.

ಅಲ್ಲದೆ ದೂರುದಾರರಿಗೆ ಆಗಿರುವ ಮಾನಸಿಕ ಹಿಂಸೆ ಮತ್ತು ಅನಾನುಕೂಲಕ್ಕಾಗಿ 10 ಸಾವಿರ ರೂ.ಗಳ ಪರಿಹಾರ ಮತ್ತು ದೂರಿನ ಖರ್ಚು 5 ಸಾವಿರ ರೂ.ಗಳನ್ನು ಎದುರುದಾರ ಎಸಿಕೆಒ ಜನರಲ್ ವಿಮಾ ಕಂಪನಿ ಕೊಡಬೇಕೆಂದು ಆಯೋಗ ತಿಳಿಸಿದೆ.

## ಬೇಸಿಗೆ ನಿಮಿತ್ತ ಕುಡಿಯುವ ನೀರು ಮತ್ತು ಮೇವಿನ ಲಭ್ಯತೆ ಕುರಿತು ತಹಶೀಲ್ದಾರ ಅಧ್ಯಕ್ಷತೆಯಲ್ಲಿ ಜರುಗಿದ ತಾಲೂಕು ಮಟ್ಟದ ಸಭೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಬೇಸಿಗೆಪ್ರಾರಂಭವಾಗಿರುವದರಿಂದ ಗ್ರಾಮೀಣ ಭಾಗ ಮತ್ತು ನಗರ ಪ್ರದೇಶಗಳಲ್ಲಿ ಕುಡಿಯುವ ನೀರು ಮತ್ತು ಮೇವಿನ ಲಭ್ಯತೆ ಕುರಿತು ದಿನಾಂಕ:20-03-2025ರಂದು ರಂದು ತಾಲೂಕ ಪಂಚಾಯತಿ ಕೊಪ್ಪಳದಲ್ಲಿ ಸಭೆ ಜರುಗಿತು.

ತಹಶೀಲ್ದಾರರಾದ ವಿಠ್ಠಲ್ ಚೌಗಲಾ ಸಭೆಯನ್ನು ಉದ್ದೇಶಿಸಿ ಮಾತನಾಡಿ ಬೇಸಿಗೆ ಪ್ರಾರಂಭವಾಗಿರುವುದರಿಂದ ಕುಡಿಯುವ ನೀರಿನ ಕೊರತೆ ಉಂಟಾಗುವ ಸಂಭವವಿದ್ದು, ಗ್ರಾಮೀಣ ಮತ್ತು ನಗರಕ್ಕೆ ಸಂಬಂಧಿಸಿದ ಎಲ್ಲಾ ಅಧಿಕಾರಿಗಳು ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಗತ್ಯ ಮುನ್ನಚ್ಚೇರಿಕೆ ಕ್ರಮ ಕೈಗೊಳ್ಳಲು ಸೂಚಿಸಿದರು. ನೀರಿನ ಮಾದರಿಯನ್ನು ಕಾಲಕಾಲಕ್ಕೆ ಪರೀಕ್ಷೆಗೆ ಒಳಪಡಿಸಲು ಅಗತ್ಯ ಕ್ರಮವಹಿಸಲು ಸೂಚಿಸಿದರು. ಯಾವುದೇ ಪೈಪ್ ಲೈನ್ ಒಡೆದು ಕಲುಷಿತ ನೀರು ಸರಬರಾಜು ಆಗದಂತೆ ಎಚ್ಚರವಹಿಸಲು ಸೂಚಿಸಿದರು. ಗ್ರಾಮಗಳಲ್ಲಿ ನೀರಿನ ಕೊರತೆ ಉಂಟಾದಲ್ಲಿ ಸದರಿ ಸಮಸ್ಯೆಯನ್ನು ಬಗೆಹರಿಸಲು ಖಾಸಗಿ ಬೋರ್ ವೇಲ್ ಗಳನ್ನು ಗುರುತಿಸಿ ಮತ್ತು ಖಾಸಗಿ ಬೋರವೇಲ್ ಮಾಲೀಕರ ಜೊತೆ ಒಪ್ಪಂದ ಮಾಡಿಕೊಳ್ಳಲು ಅಗತ್ಯ ಕ್ರಮವಹಿಸತಕ್ಕದ್ದು. ಕುಡಿಯುವ ನೀರಿನ ಯಾವುದೇ ಸಮಸ್ಯೆ ಉಂಟಾಗದಂತೆ ಎಚ್ಚರಿಕೆಯಿಂದ ಹಾಗೂ ತಕ್ಷಣವೇ ಸ್ಪಂಧಿಸುವಂತೆ ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಸೂಚಿಸಿದರು.

ತಾಲೂಕ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ ಸಭೆಯನ್ನು ಉದ್ದೇಶಿಸಿ ಮಾತನಾಡಿ ಪ್ರಸ್ತುತ ಕೊಪ್ಪಳ ತಾಲೂಕಿನ ವ್ಯಾಪ್ತಿಯ 8 ಗ್ರಾಮ ಪಂಚಾಯತಿಗಳ ವ್ಯಾಪ್ತಿಯ 11 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಉಂಟಾಗಿದ್ದು, ಸದರಿ ಗ್ರಾಮಗಳಲ್ಲಿ 14 ಖಾಸಗಿ ಬೋರವೇಲ್ ಗಳನ್ನು ಬಾಡಿಗೆ ಪಡೆದು ನೀರು ಸರಬರಾಜು ಮಾಡುತ್ತಿರುವ ವಿಷಯವನ್ನು ಸಭೆಯಲ್ಲಿ ತಿಳಿಸಿದರು. ಇನ್ನೂಳಿದ ಗ್ರಾಮಗಳಲ್ಲಿ ನೀರಿನ ಕೊರತೆ ಉಂಟಾದಲ್ಲಿ ಪರ್ಯಾಯ ವ್ಯವಸ್ಥೆಯಾಗಿ 338 ಖಾಸಗಿ ಬೋರವೇಲ್ ಗಳನ್ನು ಗುರುತಿಸಲಾಗಿದೆ. ಸದರಿ ಖಾಸಗಿ ಬೋರವೇಲ್ ಮಾಲೀಕರ ಜೊತೆ ಬಾಡಿಗೆ ಪಡೆಯಲು ಒಪ್ಪಂದ ಮಾಡಿಕೊಳ್ಳಲು ಸಂಬಂಧಿಸಿದ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು. ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗಬಹುದಾದ ಸಮಸ್ಯಾತ್ಮಕ ಗ್ರಾಮಗಳ ಪಟ್ಟಿ ಮಾಡಲಾಗಿದ್ದು ಏಪ್ರೀಲ್ ಅಂತ್ಯದವರೆಗೆ 11 ಗ್ರಾಮಗಳು ಹಾಗೂ ಮೇ ಅಂತ್ಯದವರೆಗೆ 13 ಗ್ರಾಮಗಳು ಒಟ್ಟು 24 ಗ್ರಾಮಗಳನ್ನು ಪಟ್ಟಿ ಮಾಡಿಕೊಳ್ಳಲಾಗಿದೆ ಎಂಬ ವಿಷಯವನ್ನು ಸಭೆಯಲ್ಲಿ ವಿವರಿಸಿದರು.

ಸಭೆಯಲ್ಲಿ ನಗರಸಭೆಯ ಅಧಿಕಾರಿಗಳು, ಭಾಗ್ಯನಗರ ಪಟ್ಟಣ ಪಂಚಾಯತಿಯ ಅಧಿಕಾರಿಗಳು, ತಾಲೂಕ ಮಟ್ಟದ ಅಧಿಕಾರಿಗಳು, ಉಪತಹಶೀಲ್ದಾರರು, ತಾಲೂಕ ಯೋಜನಾಧಿಕಾರಿ, ಕಂದಾಯ ನಿರೀಕ್ಷಕರು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಆಡಳಿತಾಧಿಕಾರಿಗಳು, ತಾಲೂಕ ಪಂಚಾಯತಿ ಸಿಬ್ಬಂದಿಗಳು ಸಭೆಯಲ್ಲಿ ಹಾಜರಿದ್ದರು.

### ಹೀಟ್ ಸ್ಟ್ರೋಕ್ ಚಿಕಿತ್ಸೆಗೆ ಸರಕಾರಿ ಆಸ್ಪತ್ರೆಗಳಲ್ಲಿ ಪ್ರತ್ಯೇಕ ವ್ಯವಸ್ಥೆ

# ಬಿಸಿಲಿನ ತಾಪ ತಪ್ಪಿಸಲು ಮುಂಜಾಗ್ರತೆ ಅಗತ್ಯ :ಜಾನಕಿ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.20-ದಿನದಿಂದ ದಿನಕ್ಕೆ ಬಿಸಿಲಿನ ತಾಪ ಹೆಚ್ಚಾಗುತ್ತಿರುವದರಿಂದ ಉಷ್ಣಾಂಶದಲ್ಲಿ ನಿರಂತರವಾಗಿ ಏರಿಕೆಯಾಗುತ್ತಿದ್ದು, ಇದರಿಂದ ಆರೋಗ್ಯದ ಮೇಲೆ ಸಮಸ್ಯೆಗಳನ್ನು ತಪ್ಪಿಸಲು ಮುಂಜಾಗ್ರತಾ ಕ್ರಮಗಳು ಅಗತ್ಯವಾಗಿವೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಷ್ಟ್ರೀಯ ಹವಾಮಾನ ಬದಲಾವಣೆ ಮತ್ತು ಮಾನವ ಆರೋಗ್ಯ ಕಾರ್ಯಕ್ರಮ, ಜಿಲ್ಲಾ ಪರಿಸರ ಕೋಶದಿಂದ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಾಮಾನ್ಯವಾಗಿ ಮನುಷ್ಯನ ದೇಹದ ಉಷ್ಣಾಂಶಕ್ಕಿಂತ ಹೆಚ್ಚಿನ ಉಷ್ಣಾಂಶದ ಒತ್ತಡದಿಂದ ತೀವ್ರ ಜ್ವರ, ಊತ, ಸ್ನಾಯುಗಳ ಸೆಳೆತ, ಪ್ರಜ್ಞೆ ತಪ್ಪುವುದು ಸೇರಿದಂತೆ ಇತರೆ ಸಮಸ್ಯೆಗಳು ಆರೋಗ್ಯದ ಮೇಲೆ ಉಂಟಾಗುತ್ತವೆ. ಇದನ್ನು ತಪ್ಪಿಸಲು ಮುಂಜಾಗ್ರತಾ ಕ್ರಮಕೈಗೊಳ್ಳುವುದು ಅಗತ್ಯವಾಗಿದೆ ಎಂದರು.

ಹೀಟ್ ಸ್ಟ್ರೋಕ್‌ನಿಂದ ಬಳಲುತ್ತಿರುವವರಿಗೆ ಜಿಲ್ಲಾ ಆಸ್ಪತ್ರೆಯಲ್ಲಿ 5 ಬೆಡ್ ಹಾಗೂ ಆಯಾ ತಾಲೂಕಾ ಆಸ್ಪತ್ರೆಗಳಲ್ಲಿ ತಲಾ 2 ಬೆಡ್‌ಗಳನ್ನು ಪ್ರತ್ಯೇಕವಾಗಿ ಸಜ್ಜುಗೊಳಿಸಲಾಗಿದೆ. ಅಲ್ಲದೇ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಚಿಕಿತ್ಸೆಗೆ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದ ಜಿಲ್ಲಾಧಿಕಾರಿಗಳು, ವೆಂಟಿಲೇಟರಗಳು ಚೆನ್ನಾಗಿ ಕೆಲಸ ಮಾಡುತ್ತಿರುವ ಬಗ್ಗೆ ಪರಿಶೀಲಿಸಬೇಕು. ಅಗತ್ಯ ಔಷದೋಪಚಾರ ಕೊರತೆ ಆಗದಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಮುತುವರ್ಜಿ ವಹಿಸಬೇಕು ಎಂದು ಸೂಚಿಸಿದರು.

ಹೀಟ್ ಸ್ಟ್ರೋಕ್ ಆಗದಂತೆ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸುವುದು ಸಹ ಮುಖ್ಯವಾಗಿದೆ. ಜಿಲ್ಲಾ ಮಟ್ಟದಲ್ಲಿ ಹಾಗೂ ಇಲಾಖಾ ಹಂತದಲ್ಲಿ ಕಂಟ್ರೋಲ್ ರೂಮ್ ತೆರೆಯುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಬಿಸಿ ಗಾಳಿಯ ಒತ್ತಡ ಹಾಗೂ ಬಿಸಿ ಗಾಳಿಗೆ ಸಂಬಂಧಪಟ್ಟ ಆರೋಗ್ಯ ಸಮಸ್ಯೆಗಳಿಂದ ಎಲ್ಲರಿಗೂ ಅಪಾಯವಿದ್ದು, ಚಿಕ್ಕ ಮಕ್ಕಳು, ಗರ್ಭಿಣಿಯರು ಹೊರಾಂಗಣದಲ್ಲಿ ಕೆಲಸ ನಿರ್ವಹಿಸುವವರು, ಮಾನಸಿಕ ಸಮಸ್ಯೆಗಳಿಂದ ಬಳಲುತ್ತಿರುವವರು, ವಿಶೇಷವಾಗಿ ಹೃದಯರೋಗ ಹಾಗೂ ರಕ್ತದ ಒತ್ತಡದಿಂದ ಬಳಲುತ್ತಿರುವವರು ಆರೋಗ್ಯದ ಮೇಲೆ ಹೆಚ್ಚಿನ ಗಮನ ಹರಿಸಬೇಕು. ಹೆಚ್ಚಾಗಿ ನೀರು ಕುಡಿಯಬೇಕು. ಉತ್ತಮ ಗಾಳಿ ತಣ್ಣಗಿರುವ ಪ್ರದೇಶದಲ್ಲಿ ಇರಬೇಕು. ಮಧ್ಯಾಹ್ನ 12 ರಿಂದ 3 ಗಂಟೆವರೆಗೆ ಹೊರಗೆ ಹೋಗುವುದನ್ನು ತಪ್ಪಿಸಬೇಕು ಎಂದು ಅವರು ಹೇಳಿದರು.

ಹಾವು ಕಡಿತ ಪ್ರಕರಣ:ಜಿಲ್ಲೆಯಲ್ಲಿ 2024-25ನೇ ಸಾಲಿನಲ್ಲಿ ಹಾವು ಕಡಿತಕ್ಕೆ ಸಂಬಂಧಿಸಿದಂತೆ 371 ಪ್ರಕರಣಗಳು ದಾಖಲಾಗಿದ್ದು, ಕಳೆದ 4 ತಿಂಗಳಲ್ಲಿ ಹಾವು ಕಡಿತದಿಂದ 4 ಜನ ಸಾವನ್ನಪ್ಪಿದ್ದಾರೆ. ಸಾವನ್ನಪ್ಪಿದ ಕುಟುಂಬಕ್ಕೆ ಪರಿಹಾರ ಒದಗಿಸಲು ಅರಣ್ಯ ಹಾಗೂ ಕೃಷಿ ಇಲಾಖೆ ತುರ್ತು ಕ್ರಮವಹಿಸಲು ಜಿಲ್ಲಾಧಿಕಾರಿ ಜಾನಕಿ ಸೂಚಿಸಿದರು.

ಹಾವು ಕಡಿದಾಗ ನಾಟಿವೈದ್ಯರ ಕಡೆ ಹೋಗದೇ ನೇರವಾಗಿ ಸರಕಾರಿ ಆಸ್ಪತ್ರೆಗೆ ತೆರಳಿ ಎ.ಎಸ್.ವಿ ಇಂಜಕ್ಷನ್ ಪಡೆದುಕೊಂಡರೆ ಸಾವಿನಿಂದ ಪಾರಾಗಬಹುದು. ಈ ಇಂಜಕ್ಷನ್ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಲಭ್ಯವಿದ್ದು, ಹಾವು ಕಡಿದಾಗ ನೇರವಾಗಿ ಸರಕಾರಿ ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆಯುವಂತೆ ಸಾರ್ವಜನಿಕರಲ್ಲಿ ಜಿಲ್ಲಾಧಿಕಾರಿಗಳು ಮನವಿ ಮಾಡಿಕೊಂಡರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿ ಋಥ್ರೇನ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಮಂಜುನಾಥ ಡಿ, ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೆನ್ನವರ, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ಅರವಿಂದ ಪಟ್ಟಣಶೆಟ್ಟಿ, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ಕುಸುಮಾ ಮಾಗಿ, ಭೂದಾಖಲೆ ಇಲಾಖೆಯ ಉಪನಿರ್ದೇಶಕ ರವಿಕುಮಾರ ಎಂ. ಸೇರಿದಂತೆ ಇತರರು ಉಪಸ್ಥಿತರಿದ್ದರು.

## ವಿಶೇಷ ಚೇತನ ಮಕ್ಕಳಿಗೆ ಕ್ರೀಡೆ ಮತ್ತು ಕ್ಷೇತ್ರ ಭೇಟಿ ಅರಿವು ಮೂಡಿಸುವ ಕಾರ್ಯಕ್ರಮ.





ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:-ಮಾ 20 ಇಲ್ಲಿನ ತಿಪುರಾಂತಿನ ಸಂಸ್ಥಾನಗವಿಮಠದಲ್ಲಿ ವಿಶೇಷ ಅಗತ್ಯತೆವುಳ್ಳ(ಅಫಖಒ) ಮಕ್ಕಳಿಗೆ ಕ್ರೀಡೆ ಮತ್ತು ಕ್ಷೇತ್ರ ಭೇಟಿ ಅರಿವು ಮೂಡಿಸುವ ಕಾರ್ಯಕ್ರಮ ಜರುಗಿತು. ಇದೇ ವೇಳೆ ಸಾನಿಧ್ಯ ವಹಿಸಿದ್ದ ತಿಪುರಾಂತಿನ ಪೂಜ್ಯಶ್ರೀ ಷ ಬ್ರ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ವಿಶೇಷ ಅಗತ್ಯತೆಯುಳ್ಳ ಮಕ್ಕಳಿಗೆ ಪ್ರಶಸ್ತಿ ಪ್ರದಾನ ಮಾಡಿ ಆಶೀರ್ವಚನ ನೀಡಿದರು ವಿಶೇಷ ಚೇತನ ಮಕ್ಕಳಿಗೆ ಸಮಾಜದ ಮುಖ್ಯ ವಾಹಿನಿಗೆ ತರಲು ಪಾಲಕ ಪೋಷಕರು ಸಮಾಜ ಸರಕಾರ ಮತ್ತು ಅಧಿಕಾರಿಗಳು ಹೆಚ್ಚಿನ ಕಾಳಜಿ ವಹಿಸಿದರೆ ಮಾತ್ರ ಸಮಾಜದ ಮುಖ್ಯ ವಾಹಿನಿಗೆ ಬರಲು ಸಾಧ್ಯ ಎಂದರು. ಬಿ. ಐ. ಇ. ಆರ್. ಟಿ. ಡಾ. ಕೆ. ಜಿ. ಶರಣಪ್ಪ ಗದಲೇಗಾಂವ ಪ್ರಸ್ತಾವಿಕ ಮಾತನಾಡಿದರು. ಈ ಸಂದರ್ಭದಲ್ಲಿ ಪುಂಡಲೀಕ್ ಬಸನಾಯಕ. ಬಾಲಕೃಷ್ಣ ಪಾಟೀಲ್. ದೈಹಿಕ ಶಿಕ್ಷಕರಾದ ಮಾರುತಿ ಸೂರ್ಯವಂಶಿ. ಹಿರಿಯ ಮುಖ್ಯ ಶಿಕ್ಷಕಿ ಶ್ಯಾಮಲಾ . ಅನಿತಾ . ಮಾರತಾ. ಕಾರ್ಯಕ್ರಮದ ಕೇಂದ್ರ ಬಿಂದುಗಳಾದ ವಿಶೇಷ ಚೇತನ ಮಕ್ಕಳು ಹಾಗೂ ಪಾಲಕ ಪೋಷಕರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಬಿ. ಆರ್. ಪಿ ಗಳಾದ ಶಾಲಿವಾನ ಬಿರಾದಾರ ಸಂಚಾಲನೆ. ಚನ್ನವೀರ ಹರಸುರ್ ಗದಲೇಗಾಂವ ವಂದಿಸಿದರು.

# ಸಾಹಿತ್ಯ ಕಮ್ಮಟಕ್ಕೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.20-ಕರ್ನಾಟಕ ಸಾಹಿತ್ಯ ಅಕಾಡೆಮಿ ಹಾಗೂ ಗೊಟಗೋಡಿ ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಸಹಯೋಗದಲ್ಲಿ ಗಿರಿಜನ ಉಪಯೋಜನೆಯಡಿ ಕನ್ನಡ ಸಾಹಿತ್ಯ ಮತ್ತು ಸಾಂವಿಧಾನಿಕ ಮೌಲ್ಯಗಳು ಎಂಬ ಹೆಸರಿನಲ್ಲಿ ಎಪ್ರೀಲ್ 21 ರಿಂದ 23 ವರೆಗೆ 3 ದಿನಗಳ ಕಾಲ ಕಮ್ಮಟವನ್ನು ಹಮ್ಮಿಕೊಳ್ಳಲಾಗಿದ್ದು, ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯಿರುವ 20 ರಿಂದ 45 ವರ್ಷ ವಯಸ್ಸಿನ ಪರಿಶಿಷ್ಟ ಪಂಗಡಕ್ಕೆ ಸೇರಿದ ರಾಜ್ಯದ ಎಲ್ಲಾ ಭಾಗದ ಅಭ್ಯರ್ಥಿಗಳು ಎಪ್ರೀಲ್ 5 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಅರ್ಜಿ ನಮೂನೆಯನ್ನು ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್‌ಸೈಟ್ ಗಣಣಠಿ://ಞಚಿಡಿಟಿಚಿಣಚಿಞಚಿ-ಖಚಿಛಿಚಿಚಿಜಜಚಿಟಥಿ.ಠಡಿಂ ದಿಂದ ಪಡೆದುಕೊಳ್ಳುವಂತೆ ಕರ್ನಾಟಕ ಸಾಹಿತ್ಯ ಅಕಾಡೆಮಿಯ ರಿಜಿಸ್ಟ್ರಾರ್ ಕರಿಯಪ್ಪ ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾತ್ಕಾಲಿಕ ಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.20.ಕಲಬುರಗಿ ಮಹಾನಗರಪಾಲಿಕೆ ಶೇ. 5ರ ಯೋಜನೆಯಡಿ 2024-25ನೇ ಸಾಲಿಗಾಗಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಬುದ್ದಿಮಾಂದ್ಯ ಮಕ್ಕಳಿಗೆ ಫೀಜಿಯೋಥೆರಫಿ ಒಳಪಡಿಸಲು ಅರ್ಜಿ ಆಹ್ವಾನಿಸಿ, ಅರ್ಹ ಹಾಗೂ ಅನರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಕಲಬುರಗಿ ಮಹಾನಗರಪಾಲಿಕೆಯ ನೋಟೀಸ್ ಬೋರ್ಡ್‌ನಲ್ಲಿ ಪ್ರಕಟಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಉಪ ಆಯುಕ್ತರು (ಆಡಳಿತ) ಅವರು ತಿಳಿಸಿದ್ದಾರೆ.

ಕಲಬುರಗಿ ಮಹಾನಗರ ಪಾಲಿಕೆಯ ಣಣಠಿ://ತಿತಿತಿ. ಞಚಿಟಚಿಛಣಡಿಚಿರುಛಿಣಥಿ.ಟಡಿಛಿ. ರಠತ ವೆಬ್‌ಸೈಟ್‌ನಲ್ಲಿಯೂ ಸಹ ಈಗಾಗಲೇ ಪ್ರಚುರಪಡಿಸಲಾಗಿದ್ದು. ಸದರಿ ತಾತ್ಕಾಲಿಕ ಅರ್ಹ ಹಾಗೂ ಅನರ್ಹ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳು ಇದ್ದಲ್ಲಿ 2025ರ ಮಾರ್ಚ್ 21 ರೊಳಗಾಗಿ ಪೂರಕ ದಾಖಲೆಗಳೊಂದಿಗೆ ಆಕ್ಷೇಪಣೆಗಳೊಂದಿಗೆ ಮಹಾನಗರ ಪಾಲಿಕೆ ಕಚೇರಿಯಲ್ಲಿ ಆಕ್ಷೇಪಣೆ ಸಲ್ಲಿಸಬೇಕು. ಕೊನೆಯ ದಿನಾಂಕದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

# ಮಾರ್ಚ್ 24 ರಂದು ವಿಶ್ವ ಕ್ಷಯರೋಗ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.20-ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕಚೇರಿ ಕಲಬುರಗಿ ಇವುಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಕ್ಷಯರೋಗ ದಿನಾಚರಣೆ ಅಂಗವಾಗಿ ಮಾರ್ಚ್ 24 ರಂದು ಬೆಳಿಗ್ಗೆ 8.30 ಗಂಟೆಗೆ ಕಲಬುರಗಿ ಜಿಲ್ಲಾ ಆಸ್ಪತ್ರೆಯಲ್ಲಿ ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯದರ್ಶಿ ಶ್ರೀನಿವಾಸ ನವಲೆ ಅವರು ಜಾಥಾ ಉದ್ಘಾಟಿಸುವರು.

ಅಂದು ಬೆಳಿಗ್ಗೆ 10.30 ಗಂ-ಟೆಗೆ ಕಲಬುರಗಿ ಹೊಸ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ವಿಶ್ವ ಕ್ಷಯರೋಗ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸುವರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಶರಣಬಸಪ್ಪ ಕ್ಯಾತನಾಳ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಜಂಟಿ ನಿರ್ದೇಶಕರ ಕಚೇರಿಯ ಸಹ ನಿರ್ದೇಶಕ ಡಾ. ಶಂಕ್ರಪ್ಪ ಮೈಲಾರಿ, ಉಪ ನಿರ್ದೇಶಕ ಡಾ. ಎ.ಎಸ್. ರುದ್ರವಾಡಿ, ಡಾ. ಶರಣಬಸಪ್ಪ ಗಣಜಲಖೇಡ, ಜಿಲ್ಲಾ ಆಸ್ಪತ್ರೆಯ ಜಿಲ್ಲಾ ಶಸ್ತ್ರಜ್ಞರು ಹಾಗೂ ಅಧೀಕ್ಷಕ ಡಾ. ರುಖಿಯಾ ಅಸ್ನರಬಾ, ಬೆಳಗಾವಿ ರಾಷ್ಟ್ರೀಯ ಪಾರಂಪರಿಕ ಚಿಕಿತ್ಸಾ ವಿಜ್ಞಾನ ಸಂಸ್ಥೆ ಐ.ಸಿ.ಎಮ್.ಎರ್. ವಿಜ್ಞಾನಿ ಡಾ. ಬನ್ನಪ್ಪ ಎಸ್. ಉಂಗಾರ ಅತಿಥಿಗಳಾಗಿ ಪಾಲ್ಗೊಳ್ಳುವರು. ಕಲಬುರಗಿ ವಿಭಾಗದ (ಕ್ಷಯ) ವಿಭಾಗೀಯ ವಿಶ್ವಸಂಸ್ಥೆ ಸಲಹೆಗಾರ ಡಾ. ನಿಮ್ರಾ ಶರೀನ ಅತಿಥಿ ಉಪನ್ಯಾಸ ನೀಡುವರು.

## ಉದ್ರಿ ಕೊಡದೇ ಇರುವುದಕ್ಕೆ ಚಾಕುವಿನಿಂದ ಇರಿದು ಕೊಲೆಗೆ ಯತ್ನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.20-ಕಿರಾಣಿ ಸಾಮಾನು ಉದ್ರಿ ಕೊಡದೇ ಇರುವುದಕ್ಕೆ ಗ್ರಾಹಕನೊಬ್ಬ ಕಿರಾಣಿ ಅಂಗಡಿ ಮಾಲಿಕನೊಬ್ಬನನ್ನು ಚಾಕುವಿನಿಂದ ಇರಿದು ಕೊಲೆ ಮಾಡಲು ಯತ್ನಿಸಿರುವ ಘಟನೆ ಶ್ರೀನಿವಾಸ ಸರಡಗಿ ಸಮೀಪದ ಮೊಕಾತಾಂಡಾದಲ್ಲಿ ನಡೆದಿದೆ.

ಅರ್ಜುನ ತಂದೆ ಶಂಕರ ರಾಠೋಡ್ ಎಂಬಾತನೆ ರಾಜು ತಂದೆ ಟೋಪು ರಾಠೋಡ್ ಎಂಬುವವರಿಗೆ ಚಾಕುವಿನಿಂದ ಇರಿದು ಕೊಲೆ ಮಾಡಲು ಯತ್ನಿಸಿದ್ದು, ಈ ಸಂಬಂಧ ಅವರು ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದಾರೆ.

ಅರ್ಜುನ ರಾಠೋಡ್ ಕಿರಾಣಿ ಅಂಗಡಿಗೆ ಬಂದು ಕಿರಾಣಿ ಸಾಮಾನುಗಳನ್ನು ಉದ್ರಿ ಕೊಡುವಂತೆ ಕೇಳಿದ್ದು, ಕಿರಾಣಿ ಸಾಮಾನುಗಳನ್ನು ಉದ್ರಿ ಕೊಡದೇ ಇರುವುದರಿಂದ ಅವಾಚ್ಯವಾಗಿ ಬೈಯ್ದು ಅಂಗಡಿಯ ಮುಂದೆ ಇಟ್ಟಿದ್ದ ಕಿರಾಣಿ ಡಬ್ಬಾಗಳನ್ನು ಕೆಳಗೆ ಎಸೆದು ಚಾಕುವಿನಿಂದ ಇರಿದು ಕೊಲೆಗೆ ಯತ್ನಿಸಿದ್ದಾನೆ ಎಂದು ಅವರು ದೂರಿನಲ್ಲಿ ತಿಳಿಸಿದ್ದಾರೆ.

ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬಸ್-ಬೈಕ್ ಮಧ್ಯೆ ಡಿಕ್ಕಿ -ಸ್ಥಳದಲ್ಲೇ ಮೃತಪಟ್ಟ ಬೈಕ್ ಸವಾರ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ :ಮಾ.20: ತಾಲ್ಲೂಕಿನ ದಾಡಗಿ ಕ್ರಾಸ್ ಸಮೀಪ ಸರ್ಕಾರಿ ಬಸ್ ಮತ್ತು ಬೈಕ್ ಮಧ್ಯೆ ಡಿಕ್ಕಿಯಾದ ಪರಿಣಾಮ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಔರಾದ್ ತಾಲ್ಲೂಕಿನ ಚೌದ್ರಿ ಬೆಳಕುಣಿಯ ಆಕಾಶ ದಿಲೀಪರಾವ್ ಬುಹೆ (28) ಮೃತ ಯುವಕ.



ಮೃತ ಯುವಕನು ಭಾಲ್ಕಿಯಿಂದ ಗೋರಟಾ ಗ್ರಾಮದಲ್ಲಿರುವ ಸಹೋದರಿ ಮನೆಗೆ ತೆರಳುತ್ತಿದ್ದಾಗ ಹುಮನಾಬಾದ್ ನಿಂದ ಭಾಲ್ಕಿ ಕಡೆಗೆ ಆಗಮಿಸುತ್ತಿದ್ದ ಬಸ್ ಮಧ್ಯೆ ಡಿಕ್ಕಿ ಸಂಭವಿಸಿದೆ. ಈ ಸಂಬಂಧ ಖಟಕಚಿಂಚೋಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮೂಗಿನ ಗಡ್ಡೆಗೆ ಎಂಡೊಸ್ಕೋಪಿ ಮೂಲಕ ಯಶಸ್ವಿ ಚಿಕಿತ್ಸೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.20– ನಗರದ ಬಿವಿವಿ ಸಂಘದ ಎಸ್.ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ಹಾನಗಲ್ಲ ಕುಮಾರೇಶ್ವರ ಆಸ್ಪತ್ರೆಯಲ್ಲಿ ದಾಖಲಾಗಿದ್ದ 17 ವರ್ಷದ ಬಾಲಕನಿಗೆ ಮೂಗಿನ ಹಿಂಭಾಗ ಗಂಟಲಿನಲ್ಲಿ ಬೆಳೆದಿದ್ದ ಗಡ್ಡೆಗೆ ಎಂಡೊಸ್ಕೋಪಿ ಮೂಲಕ ಯಶಸ್ವಿ ಚಿಕಿತ್ಸೆ ನೀಡಲಾಗಿದೆ.

ಈ ಗಡ್ಡೆ ಬೆಳೆದ ಪರಿಣಾಮವಾಗಿ ಮೂಗಿನಿಂದ ರಕ್ತಸ್ರಾವ ಹಾಗೂ ರೋಗಿಗೆ ಉಸಿರಾಡಲು ತೊಂದರೆ–ಯಾಗಿತ್ತು. ಆಸ್ಪತ್ರೆಯ ಕಿವಿ, ಮೂಗು, ಗಂಟಲು ವಿಭಾಗದ ಶಸ್ತ್ರಚಿಕಿತ್ಸಾ ತಜ್ಞ ಡಾ.ಎಸ್.ಎಸ್.ದೊಡ್ಡಮನಿ ಅವರ ನೇತೃತ್ವದಲ್ಲಿ ಡಾ.ಶಶಿಧರ ಸೂಲಿಗಾವಿ,ಡಾ.ಮಲ್ಲಿಕಾರ್ಜುನ ಪಾಟೀಲ ಮತ್ತು ಡಾ.ಅರ್ಚನಾ ಮೇತ್ರಿ ತಂಡ ಮೂಗಿನಲ್ಲಿ ಬೆಳೆದಿದ್ದ ಗಡ್ಡೆಗೆ ಅತ್ಯಾಧುನಿಕ ತಂತ್ರಜ್ಞಾನ ಕೋಬ್ಲೇಟರ್ ಹಾಗೂ ಎಂಡೊಸ್ಕೋಪಿಕ್ ಶಸ್ತ್ರಚಿಕಿತ್ಸೆ ಮಾಡಿ ಗಡ್ಡೆ ಹೊರತೆಗೆಯುವಲ್ಲಿ ಯಶಸ್ವಿಯಾಗಿದ್ದಾರೆ.

ಈ ಸಂದರ್ಭದಲ್ಲಿ ಅರವಳಿಕೆ ತಜ್ಞರಾದ ಡಾ.ದಿನೇಶ್ ನಾಯಕ,ಡಾ.ಪ್ರವೀಣ ಓಣಿಮಠ ಅವರೊಂದಿಗೆ ಸುಶ್ರೂಷಕರಾದ ನಾಗರಾಜ ಘಂಟಿ ಮತ್ತು ಪವನ ಗೌಡರ ನೆರವಾದರು. ರೋಗಿ ಸಂಪೂರ್ಣ ಗುಣಮುಖನಾಗಿದ್ದು, ಮೊದಲಿನಂತೆ ತನ್ನ ನಿತ್ಯದ ಕಾರ್ಯಗಳಲ್ಲಿ ತೊಡಗಿದ್ದಾನೆ ಎಂದು ವೈದ್ಯರು ತಿಳಿಸಿದ್ದಾರೆ.

ಶಸ್ತ್ರಕ್ರಿಯಾ ಪೂರ್ವದ ರೋಗಪತ್ತೆಗೆ ರೇಡಿಯಾಲಾಜಿಸ್ಟ್ ಡಾ.ಚೇತನಾ ಸುಲ್ತಾನಪುರಿ ಸಿಟಿ ಸ್ಕ್ಯಾನ ಮಾಡಿ ಜುವಿನೈಲ್ ನೇಸೋಫರಿಂಜಿಯಲ್ ಎಂ–ಜಿಯೋ ಫೈಬ್ರೋಮಾ ಎಂಬ ಕಾಯಿಲೆಯನ್ನು ಪತ್ತೆಹಚ್ಚಿದರು. ಶಸ್ತ್ರಚಿಕಿತ್ಸಾ ಸಮಯದಲ್ಲಿ ವಿಪರೀತ ರಕ್ತಸ್ರಾವವಾಗುವುದನ್ನು ತಡೆಯಲು ಗಡ್ಡೆಗೆ ರಕ್ತಪೂರೈಕೆ ಮಾಡುವ ರಕ್ತನಾಳವನ್ನು ಸ್ಥಗಿತಗೊಳಿಸಲು ಎಂಬೊಲೈಜೇಶನ್ ಚಿಕಿತ್ಸೆಯನ್ನು ಹೃದಯರೋಗ ತಜ್ಞರಾದ ಡಾ.ಸಮೀರಕುಮಾರ ಕುಲಕರ್ಣಿಯವರು ಮಾಡಿದರು.

ಈ ಯಶಸ್ವಿ ಚಿಕಿತ್ಸೆ ನಡೆಸಿದ ಕುಮಾರೇಶ್ವರ ಆಸ್ಪತ್ರೆಯ ವೈದ್ಯ ತಂಡ ಹಾಗೂ ಕಿವಿ, ಮೂಗು, ಗಂಟಲು ವಿಭಾಗದ ಮುಖ್ಯಸ್ಥರಾದ ಡಾ.ಚಂದ್ರಶೇಖರಯ್ಯ ಹಿರೇಮಠ ಅವರನ್ನು ಬಿವಿವಿ ಸಂಘದ ಕಾರ್ಯಾಧ್ಯಕ್ಷ ಡಾ ವೀರಣ್ಣ ಚರಂತಿಮಠ, ವೈದ್ಯಕೀಯ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ (ಬೇವೂರು), ಎಸ್.ಎನ್.ಮೆಡಿಕಲ್ ಕಾಲೇಜಿನ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ,ಎಚ್.ಎಸ್.ಕೆ.ಆಸ್ಪತ್ರೆಯ ಅಧೀಕ್ಷ ಡಾ.ಶ್ರೀರಾಮ ಕೋರಾ ಅಭಿನಂದಿಸಿದ್ದಾರೆ.

# ಸೇಡು ತೀರಿಸಿಕೊಂಡ ಕೊಲೆಗಡುಕರ ಬಂಧನ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಮಾ.20: ರೌಡಿಶೀಟರ್ ಸಣ್ಣಮಾಪಣ್ಣ ತಂದೆ ಭೀಮಪ್ಪ ಬಡಿಗೇರ(48)ನ ಕೊಲೆ ಮಾಡಿದ ಘಟನೆಗೆ ಸಂಬಂಧಪಟ್ಟಂತೆ 3 ಜನ ಆರೋಪಿಗಳನ್ನು ಪೊಲೀಸರು ಬಂಧಿಸಿ ಗುರುವಾರ ಯಾದಗಿರಿ ಜೈಲಿಗೆ ಕಳುಹಿಸಿದರು.

ಎ–2 ಆರೋಪಿ ಹುಸೇನಿ ತಂದೆ ಚಂದಾಸಾಬ್ ಪಟೇಲ್(37), ಶಿವಪ್ಪಗೌಡ ಮಳಗೊಂಡ ಅರಳಳ್ಳಿ(55), ಮಹ್ಮದ್ ರೀಯಾಜ್ ಗೋಗಿ (35) ಬಂಧಿತ ಆರೋಪಿಗಳಾಗಿದ್ದಾರೆ. ಪೊಲೀಸರು ಬಂಧಿಸಿ ವಿಚಾರಣೆ ನಡೆಸಿ ಜೈಲಿಗಟ್ಟಿದ್ದಾರೆ.ಹಳೆಯ ದ್ವೇಷ ಇಟ್ಟುಕೊಂಡು ಕೊಲೆ ಮಾಡಿರುವುದಾಗಿ ಆರೋಪಿಗಳು ಬಾಯಿ ಬಿಟ್ಟಿದ್ದಾರೆ ಎಂದು ಡಿಎಸ್‌ಪಿ ಜಾವೇದ ಇನಾಂದಾರ ತಿಳಿಸಿದ್ದಾರೆ.

ಈ ಕುರಿತು ಸುದ್ದಿಗಾರರಗೊಂದಿಗೆ ಮಾತನಾಡಿ ಮಾರ್ಚ 16 ರಂದು ರೌಡಿಶೀಟರ್ ಮಾಪಣ್ಣನನ್ನು ಹಾಡುಹಗಲೇ ಹತ್ಯೆಗೈಯಲಾಗಿತ್ತು. ಈ ಘಟನೆ ಇಡೀ ಶಹಾಪುರ ಬೆಚ್ಚಿಬಿದ್ದಿತ್ತು. ಕಾರ್‌ನಲ್ಲಿ ಬಂದಿದ್ದ ರಕ್ಕಸರು ಮಾಪಣ್ಣನ ಮೇಲೆ ಅಟ್ಯಾಕ್ ಮಾಡಿ ಬರೋಬ್ಬರಿ ಚಾಕುನಿಂದ 10 ಬಾರಿ ಇರಿದು ಹತ್ಯೆಗೈದಿದ್ದರು. ಭೀಕರ ಹತ್ಯೆಯ ಹಂತಕರನ್ನು ಪೊಲೀಸರು ಬೇಟೆ ಆಡಿದ್ದಾರೆ.

ಆರೋಪಿ ಹುಸೇನ್ ಪಟೇಲ್ ಮತ್ತು ಶಿವಪ್ಪಗೌಡ ಇಬ್ಬರಿಗೂ ಸ್ನೇಹವಿದ್ದು, ಮೃತ ಮಾಪಣ್ಣ ಮತ್ತು ಆತನ ಮಕ್ಕಳು ನಿತ್ಯ ಹುಸೇನಿನ ದಾಬಾಗೆ ಹೋಗಿ ಕಿರಿಕಿರಿ ಮಾಡುತ್ತಿದ್ದು ಹೀಗೆ ಸಹಿಸಿಕೊಂಡು ಬಂದಿದ್ದು ಒಂದು ತಿಂಗಳಿನಿಂದ ಅವಕಾಶಕ್ಕಾಗಿ ಕಾದು, ಸ್ಕೇಚ್ ಹಾಕಿ ಸಿಸಿಟಿವಿ ಇರದ ಜಾಗ ನೋಡಿ ಕೊಲೆ ಮಾಡಲಾಗಿದೆ ಎಂದು ತಿಳಿದು ಬಂದಿದೆ. ಇನ್ನೊರ್ವ ಆರೋಪಿ ಶಿವನಗೌಡ ಅರಳಳ್ಳಿ ಮತ್ತು ಮಾಪಣ್ಣನ ನಡುವೆ ಒಳಜಗಳವಿದ್ದು ಶಿವನಗೌಡ ಮನೆಯ ನ್ಯಾಯ ಪಂಚಾಯಿತಿ ಮಾಡಿ ಮಾಪಣ್ಣನು ಆಸ್ತಿ ಲಪಾಟಯಿಸಿದ್ದು ಅಲ್ಲಿಂದಲೆ ಮಾಪಣ್ಣ ಮತ್ತು ಶಿವಣಗೌಡ ನಡುವೆ ದ್ವೇಷ ಶುರುವಾಗಿತ್ತು ಎಂದು ಆರೋಪಿ ಬಾಯಿಬಿಟ್ಟಿದ್ದಾರೆ. 2009 ರಲ್ಲಿ ಮಾಪಣ್ಣ ಮತ್ತು ಅವನ ಮನೆಯವರು ಸೇರಿ–ಕೊಂಡು ಹುಸೇನಿಗೆ ಕೊಲೆ ಮಾಡುವ ಉದ್ದೇಶದಿಂದ ಹೊಡೆಬಡೆ ಮಾಡಿರುತ್ತಾರೆ. ಮತ್ತು ಆರೋಪಿ ಶಿವಣ್ಣಗೌಡ ಮೇಲೆಯು ಸಹ ಮಾಪಣ್ಣ ಹೊಡೆಬಡೆ ಮಾಡಿದ್ದು ಇಬ್ಬರಿಗೂ ದ್ವೇಷ ಬೆಳೆದಿದೆ.

ಮತ್ತೊರ್ವ ಆರೋಪಿ ರಿಯಾಜ್‌ನು ಮತ್ತು ಈ 3 ಜನ ಆರೋಪಿಗಳು ಸೇರಿಕೊಂಡು ಮಾಪಣ್ಣನ ಆಗು ಹೋಗುಗಳು, ಚಲನ ವಲನ ತಿಳಿದುಕೊಂಡು ಪ್ರತಿ ಭಾನುವಾರ ಭೀಮರಾಯನಗುಡಿಗೆ ತರಕಾರಿ ತರಲು ಬರುತ್ತಿದ್ದು ಇದನ್ನು ಖಚಿತಪಡಿಸಿಕೊಂಡ ಹಂತಕರು ಸಾದ್ಯಾಪುರ ಬ್ರಿಡ್ಜ್ ದಾಟಿದ ನಂತರ ಹಿಂಬಾಲಿಸಿ ಕಾರಿನಿಂದ ಮೋಟಾರ್ ಸೈಕಲ್ ಡಿಕ್ಕಿಪಡಿಸಿ, ಕಣ್ಣಿಗೆ ಖಾರದ ಪುಡಿ ಎರಚಿ ಮಚ್ಚು, ತಲವಾರ ಚಾಕುವಿನಿಂದ ಹೊಡೆದು ಕೊಲೆ ಮಾಡಿಲಾಗಿದೆ ಎಂದು ತನಿಖೆ ವೇಳೆ ಆರೋಪಿತರು ಒಪ್ಪಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.ಪ್ರಾಣ ಉಳಿಸಿಕೊಳ್ಳಲು ಮಾಪಣ್ಣ ಹರಸಾಹಸ ಮೃತ ರೌಡಿಶೀಟರ್ ಮಾಪಣ್ಣನಿಗೆ ಆರೋಪಿಗಳು ಮೊದಲು ಕಾರಪುಡಿ ಎರಚಿದ್ದು ನಂತರ ತಲವಾರ್ ಮತ್ತು ಚಾಕುನಿಂದ 10 ಬಾರಿ ಇರಿದು ಕೊಚ್ಚಿದ್ದು ಆದರೂ ಸಹ ಪ್ರಾಣ ಉಳಿಸಿಕೊಳ್ಳಲು ಹರಸಾಹಸ ಪಟ್ಟಿದ್ದು, ಅದೇ ಹೆದ್ದಾರಿ ರಸ್ತೆಗೆ ಖಾಸಗಿ ವಾಹನವೊಂದು ಬಂದು ಅಡ್ಡಗಟ್ಟಿ ಮೃತ ಮಾಪಣ್ಣ ವಾಹನಕ್ಕೆ ಜೋತು ಬಿದ್ದಿದ್ದಾನೆ ನಂತರ ಆರೋಪಿಗಳು ವಾಹನ ಚಾಲಕನಿಗೆ ಬೆದರಿಸಿದ ನಂತರ ರೋಡಿಗೆ ಹಾಕಿ ತಲವಾರ್‌ನಿಂದ ತಲೆಗೆ ಹೊಡೆದಿದ್ದು ಸ್ಥಳದಲ್ಲೆ ಮೃತಪಟ್ಟ ಬಳಿಕ ಆರೋಪಿಗಳು ಅಲ್ಲಿಂದ ಓಡಿ ಹೊಗಿದ್ದಾರೆ ಎಂದು ತಿಳಿದುಬಂದಿದೆ.

ಮಾಪಣ್ಣ ಕೊಲೆಗೆ ಸಂಭಧಪಟ್ಟಂತೆ ಸದರಿ ಪ್ರಕರಣ ತನಿಖಾ ಹಂತದಲ್ಲಿದ್ದು ಇನ್ನಷ್ಟು ಆರೋಪಿಗಳ ಶೋಧಕಾರ್ಯ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಕ್ಷೇತ್ರ ಪುನರ್ ವಿಂಗಡಣೆ: ಸಂಸತ್ತಿನ ಉಭಯ ಸದನಗಳಲ್ಲಿ ಗದ್ದಲ, ಕಲಾಪ ಮುಂದೂಡಿಕೆ




ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ: ಮಾ.20:ಕ್ಷೇತ್ರ ಪುನರ್ ವಿಂಗಡಣೆ ಪ್ರಕ್ರಿಯೆ ವಿರುದ್ಧ ವಿಪಕ್ಷ ಪಕ್ಷದ ಸಂಸದರು ಇಂದು ಲೋಕಸಭೆ ಹಾಗೂ ರಾಜ್ಯಸಭೆಯಲ್ಲಿ ಟೀ ಶರ್ಟ್‌ಗಳನ್ನು ಧರಿಸಿ ಪ್ರತಿಭಟನೆ ನಡೆಸಿದ್ದರಿಂದ ತೀವ್ರ ಗದ್ದಲ, ಕೋಲಾಹಲ ಏರ್ಪಟ್ಟು ಸಂಸತ್ತಿನ ಉಭಯ ಸದನಗಳ ಕಲಾಪವನ್ನು ನಾಳೆ ಮುಂದೂಡಲಾಯಿತು.

ಲೋಕಸಭೆ ಹಾಗೂ ವಿಧಾನಸಭೆ ಕ್ಷೇತ್ರ ಪುನರ್ ವಿಂಗಡಣೆ ವಿಷಯದ ಕುರಿತು ಘೋಷಣೆಗಳನ್ನು ಹೊಂದಿರುವ ಟಿ–ಶರ್ಟ್‌ಗಳನ್ನು ಧರಿಸಿ ವಿಪಕ್ಷ ಸಂಸದರು ಪ್ರತಿಭಟಿಸಿದ್ದರಿಂದ ಮಧ್ಯಾಹ್ನ 12 ಗಂಟೆಯವರೆಗೂ ತದನಂತರ ಮಧ್ಯಾಹ್ನ 2 ಗಂಟೆಯವರೆಗೂ ಕಲಾಪವನ್ನು ಮುಂದೂಡಲಾಗಿತ್ತು.

ಬಳಿಕ ಮಧ್ಯಾಹ್ನ 2 ಗಂಟೆಗೆ ಕಲಾಪ ಪುನರ್ ಆರಂಭವಾಗುತ್ತಿದ್ದಂತೆಯೇ,ವಿಪಕ್ಷ ಸಂಸದರು ಪ್ರತಿಭಟನೆಯನ್ನು ಮುಂದುವರೆಸಿದರು. ಸಭಾಧ್ಯಕ್ಷರ ಪೀಠದಲ್ಲಿದ್ದ ಕೃಷ್ಣಪ್ರಸಾದ್ ತೆನ್ನೆಟಿ ಅವರು, ಸರಿಯಾದ ಉಡುಪು ಧರಿಸಿ ಸದನಕ್ಕೆ ಮರಳುವಂತೆ ಪ್ರತಿಪಕ್ಷದ ಸದಸ್ಯರಿಗೆ ಮನವಿ ಮಾಡಿದರು.

"ಕೃಷಿಯ ಬಗ್ಗೆ ಚರ್ಚೆ ನಡೆಯಬೇಕಾಗಿದೆ. ದೇಶದ ಇಂತಹ ಮಹತ್ವದ ವಿಷಯವಾದ ಚರ್ಚೆಗೆ ನೀವು ಅವಕಾಶ ನೀಡುತ್ತಿಲ್ಲ. ಸಹಕರಿಸಿ ಕಲಾಪಕ್ಕೆ ಅವಕಾಶ ನೀಡಬೇಕೆಂದು ವಿಪಕ್ಷ ಸದಸ್ಯರಲ್ಲಿ ಮನವಿ ಮಾಡಿದರು. ಆದರೆ, ವಿಪಕ್ಷ ಸದಸ್ಯರು ಇದಕ್ಕೆ ಸೊಪ್ಪು ಹಾಕದಿದ್ದಾಗ ಕಲಾಪವನ್ನು ನಾಳೆಗೆ ಮುಂದೂಡಿದರು.

ಇದಕ್ಕೂ ಮುನ್ನಾ ಬೆಳಗ್ಗೆ 11 ಗಂಟೆಗೆ ಲೋಕಸಭೆ ಕಲಾಪ ಆರಂಭವಾಗುತ್ತಿದ್ದಂತೆಯೇ, ಡಿಎಂಕೆ ಸದಸ್ಯರು ಘೋಷಣೆಗಳನ್ನು ಹೊಂದಿರುವ ಟಿ–ಶರ್ಟ್‌ಗಳನ್ನು ಧರಿಸಿದ್ದನ್ನು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಆಕ್ಷೇಪಿಸಿದರು. ಇಂತಹ ಕ್ರಮಗಳು ಸದನದ ಕಾರ್ಯವಿಧಾನದ ನಿಯಮಗಳಿಗೆ ವಿರುದ್ಧವಾಗಿವೆ ಎಂದು ಹೇಳಿದರು

.ಡಿಎಂಕೆ ಸದಸ್ಯರು '#ಜಿಟಿಡಿಜಜಟುಟುಣಚಿಣುಂಟಿಗೆ ತಮಿಳುನಾಡು ಹೋರಾಡುತ್ತದೆ, ತಮಿಳುನಾಡು ಗೆಲ್ಲುತ್ತದೆ ಎಂಬ ಘೋಷಣೆಗಳನ್ನು ಹೊಂದಿರುವ ಬಿಳಿ ಟಿ–ಶರ್ಟ್‌ಗಳನ್ನು ಧರಿಸಿದ್ದರು. ಸದನವು ನಿಯಮ ಮತ್ತು ಕಾರ್ಯವಿಧಾನಗಳೊಂದಿಗೆ ಕಾರ್ಯನಿರ್ವಹಿಸುತ್ತದೆ. ಸದಸ್ಯರು ಸದನದ ಘನತೆ ಮತ್ತು ಗೌರವವನ್ನು ಕಾಪಾಡಿಕೊಳ್ಳಬೇಕು. ಕೆಲವು ಸಂಸದರು ನಿಯಮಗಳನ್ನು ಪಾಲಿಸುತ್ತಿಲ್ಲ ಮತ್ತು ಘನತೆಯನ್ನು ಉಲ್ಲಂಘಿಸುತ್ತಿದ್ದಾರೆ, ಇದು ಸ್ವೀಕಾರಾರ್ಹವಲ್ಲ ಎಂದು ಲೋಕಸಭಾಧ್ಯಕ್ಷ ಓಂ ಬಿರ್ಲಾ ಹೇಳಿದರು.

ಘೋಷಣೆಗಳನ್ನು ಬರೆದ ಟಿ–ಶರ್ಟ್‌ಗಳನ್ನು ಧರಿಸಿ ಬಂದ ಸದಸ್ಯರು ಸದನದಿಂದ ಹೊರಗೆ ಹೋಗಿ ಘನತೆಯನ್ನು ಕಾಪಾಡಿಕೊಳ್ಳಲು ಸರಿಯಾದ ಉಡುಪಿನೊಂದಿಗೆ ಹಿಂತಿರುಗುವಂತೆ ಸ್ಪೀಕರ್ ನಿರ್ದೇಶಿಸಿದರು. ಡಿಎಂಕೆ ಸದಸ್ಯರು ಲೋಕಸಭೆಯಲ್ಲಿ ಗಡಿನಿರ್ಣಯದ ವಿಷಯವನ್ನು ಎತ್ತಲು ಪ್ರಯತ್ನಿಸುತ್ತಿದ್ದಾರೆ, ಆದರೆ ಜನಗಣತಿ ಇನ್ನೂ ನಡೆಯದ ಕಾರಣ ಈ ವಿಷಯವು ಸರ್ಕಾರದ ಗಮನದಲ್ಲಿಲ್ಲ ಎಂದು ಹೇಳಿ ಸ್ಪೀಕರ್ ಅವರ ಮನವಿಯನ್ನು ತಿರಸ್ಕರಿಸಿದರು.

ರಾಜ್ಯಸಭೆಯೂ ಮುಂದೂಡಿಕೆ: ರಾಜ್ಯಸಭೆಯೂ ಇದೇ ರೀತಿಯ ಪ್ರತಿಭಟನೆಗಳಿಗೆ ಕಾರಣವಾಯಿತು. ಪರಿಣಾಮ ರಾಜ್ಯಸಭಾಧ್ಯಕ್ಷ ಜಗದೀಪ್ ಧಂಖರ್ ಅವರು ಆರಂಭದಲ್ಲಿ ಸದನವನ್ನು ಮಧ್ಯಾಹ್ನ 2 ಗಂಟೆಯವರೆಗೆ ಮುಂದೂಡಲಾಯಿತು. ಬಳಿಕ ಕಲಾಪ ಪುನರ್ ಆರಂಭವಾಗುತ್ತಿದ್ದಂತೆಯೇ ಪ್ರತಿಪಕ್ಷದ ಸದಸ್ಯರು ತಮ್ಮ ಪಟ್ಟು ಸಡಿಲಿಸದ ಹಿನ್ನೆಲೆಯಲ್ಲಿ ಕಲಾಪವನ್ನು ನಾಳೆಗೆ ಮುಂದೂಡಲಾಯಿತು.



ಕಲಬುರಗಿ: ಯುನೈಟೆಡ್ ಹಾಸ್ಪಿಟಲ್‌ನಿಂದ ರಂಜಾನ್ ನಿಮಿತ್ತ ಗುರುವಾರ ಹಮ್ಮಿಕೊಂಡಿದ್ದ ಇಫ್ತಾರ್ ಕೂಟದಲ್ಲಿ ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕ ಡಾ.ವಿಕ್ರಮ ಸಿದ್ದಾರೆಡ್ಡಿ ಅವರು ಇಸ್ಲಾಂ ಬಾಂಧವರೊಂದಿಗೆ ಉಪಾಹಾರ ಸೇವಿಸಿದರು.

# ಅಗ್ನಿ ಅವಘಡಕ್ಕೆ ಹೊತ್ತಿ ಉರಿದ ಬೃಹತ್ ಆಲದ ಮರ

ಮಲ್ಲಮ್ಮ ನುಡಿ ವಾರ್ತೆ

ಬೀದರ್,ಮಾ.20: ಗಡಿ ಜಿಲ್ಲೆಯಲ್ಲಿ ಮತ್ತೊಂದು ಅಗ್ನಿ ಅವಘಡ ನಡೆದಿದ್ದು ಬೃಹತ್ ಗಾತ್ರದ ಆಲದ ಮರ ಹೊತ್ತಿ ಉರಿದಿದೆ. ತಾಲ್ಲೂಕಿನ ನಂದಗಾಂವ್ ಗ್ರಾಮದಲ್ಲಿ ಘಟನೆ ಜರುಗಿದ್ದು, ಯಾರೋ ಕಿಡಿಗೇಡಿಗಳು ಬೃಹತ್ ಆಲದ ಮರಕ್ಕೆ ಬೆಂಕಿ ಹಚ್ಚಿರಬಹುದೆಂದು ಶಂಕಿಸಲಾಗಿದೆ. ನೂರಾರು ವರ್ಷದ ಬೃಹತ್ ಆಲದ ಮರ ಧಗ ಧಗನೆ ಹೊತ್ತಿ ಉರಿಯುವುದನ್ನ ಕಂಡ ಗ್ರಾಮಸ್ಥರು ಅಗ್ನಿಶಾಮಕ ಸಿಬ್ಬಂದಿಗಳಿಗೆ ವಿಷಯ ತಿಳಿಸಿದ್ದಾರೆ. ವಿಷಯ ತಿಳಿದು ಸ್ಥಳಕ್ಕೆ ದೌಡಾಯಿಸಿದ ಅಗ್ನಿಶಾಮಕ ದಳದ ಸಿಬ್ಬಂದಿಗಳು ಬೆಂಕಿ ಶಮನಗೊಳಿಸಲು ಹರಸಾಹಸ ಪಟ್ಟಿದ್ದಾರೆ. ಈ ಘಟನೆಯು ಜನವಾಡ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಜರುಗಿದೆ.

# ಕಲಬುರಗಿ ಜಿಲ್ಲೆಯ 131 ಪರೀಕ್ಷಾ ಕೇಂದ್ರಗಳ ಮೇಲೆ ವೆಬ್‌ಕಾಸ್ಟಿಂಗ್ ಮೂಲಕ ನಿಗಾ:ಭಂವರ್ ಸಿಂಗ್ ಮೀನಾ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.20:ಪ್ರಸಕ್ತ 2025ನೇ ಸಾಲಿನ ಎಸ್.ಎಸ್.ಎಲ್.ಸಿ.ಪರೀಕ್ಷೆ–1ಯು ಮಾರ್ಚ್ 21 ರಂದು ಶುಕ್ರವಾರದಿಂದ ಆರಂಭಗೊಳ್ಳಲಿದ್ದು, ನಕಲು ತಡೆಯುವ ನಿಟ್ಟಿನಲ್ಲಿ ಜಿಲ್ಲೆಯ 131 ಪರೀಕ್ಷಾ ಕೇಂದ್ರಗಳ ಮೇಲೆ ಇದೇ ಪ್ರಥಮ ಬಾರಿಗೆ ವೆಬ್ ಕಾಸ್ಟಿಂಗ್ ಮೂಲಕ ನಿಗಾ ಇಡಲಾಗಿದೆ ಎಂದು ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ ತಿಳಿಸಿದರು.

ಸಿ.ಸಿ.ಟಿ.ವಿ. ವೆಬ್‌ಕಾಸ್ಟಿಂಗ್ ಪರಿವೀಕ್ಷಣೆಗಾಗಿ ಈಗಾಗಲೇ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಸ್ಥಾಪಿಸಲಾಗಿರುವ ಕಂಟ್ರೋಲ್ ರೂಮ್‌ನ್ನು ವೀಕ್ಷಿಸಿದ ಅವರು, ಈ ಪರೀಕ್ಷೆಯು ಇದೇ ಮಾರ್ಚ್ 21 ರಿಂದ ಏಪ್ರಿಲ್ 4 ರ ವರೆಗೆ ನಡೆಯಲಿದ್ದು, ಒಟ್ಟು ಜಿಲ್ಲೆಯಲ್ಲಿ 131 ಪರೀಕ್ಷಾ ಕೇಂದ್ರಗಳಲ್ಲಿ 1912 ಕೋಠಡಿಗಳಿದ್ದು, ಎಲ್ಲಾ ಪರೀಕ್ಷಾ ಕೇಂದ್ರದ ಕೊಠಡಿಗಳಲ್ಲಿ ಪರೀಕ್ಷೆಯನ್ನು ಸೂಸುತ್ರವಾಗಿ ನಡೆಸಲು ಒಟ್ಟು 2452 ಸಿ.ಸಿ. ಕ್ಯಾಮೆರಾಗಳನ್ನು ಅಳವಡಿಸಲಾಗಿದ್ದು, ಇಲ್ಲಿಂದ ಪ್ರತಿ ಕೇಂದ್ರದ ಕೋಣೆಗಳನ್ನು ನೇರವಾಗಿ ವೀಕ್ಷಿಸಲಾಗುತ್ತಿದೆ ಎಂದರು.

ಮೊದಲನೆ ಹಂತದ ಮಾರ್ಚ್ 17 ರಂದು ಸಿ.ಸಿ.ಟಿ.ವಿ ವೆಬ್‌ಕಾಸ್ಟಿಂಗ್ ಡ್ರೈ ರನ್ ಮಾಡಲಾಗಿದ್ದು, ಇಂದು ಎರಡನೇ ಹಂತದ ಸಿ.ಸಿ.ಟಿ.ವಿ ವೆಬ್‌ಕಾಸ್ಟಿಂಗ್ ಡ್ರೈ ರನ್ ಮಾಡಲಾಗಿದೆ. ಜಿಲ್ಲೆಯ ಎಲ್ಲಾ ಪರೀಕ್ಷಾ ಕೇಂದ್ರಗಳ ಕೊಠಡಿಗಳಲ್ಲಿ ಸಿ.ಸಿ.ಟಿ.ಸಿ ಕ್ಯಾಮೆರಾಗಳು ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿರುವುದು ಡ್ರೈರನ್‌ನಲ್ಲಿ ಕಂಡು ಬಂದಿದೆ ಎಂದು ಅವರು ತಿಳಿಸಿದರು. ಜಿಲ್ಲೆಯ ಎಲ್ಲಾ 131 ಪರೀಕ್ಷಾ ಕೇಂದ್ರಗಳಲ್ಲಿನ ಪರೀಕ್ಷಾ ಕೊಠಡಿಗಳಲ್ಲಿನ ಸಿಸಿಟಿವಿ ಕ್ಯಾಮರಾ ಹೊಂದಿರುವ ಕೋಣೆಗಳಲ್ಲಿ ಇಂಟರ್‌ನೆಟ್ ಸ್ಪೀಡ್, ಯುಪಿಎಸ್ ಸೌಲಭ್ಯ ಕುರಿತು ತಾಲೂಕುವಾರು ಕ್ರೊಢೀಕೃತ ಮಾಹಿತಿಯನ್ನು ಪಡೆಯಲಾಗಿದೆ ಎಂದರು.

ಈ ಕಾರ್ಯಕ್ಕೆ ಪ್ರತಿ ತಾಲೂಕಿಗೆ ಗ್ರೂಪ್–ಬಿ ವೃಂದದ ಅಧಿಕಾರಿಗಳನ್ನು ತಂಡದ ನಾಯಕರನ್ನಾಗಿ ನೇಮಕ ಮಾಡಲಾಗಿದ್ದು, ಎಲ್ಲಾ ತಾಲೂಕಿನ ಕಂಪ್ಯೂಟರ್ ಪ್ರೋಗ್ರಾಮರ್ ಅವರು ಈ ಕಾರ್ಯಕ್ಕೆ ಸಹಾಯಕರನ್ನಾಗಿ ನೇಮಿಸಲಾಗಿದೆ. ಪರೀಕ್ಷಾ ದಿನದಂದು ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮೆರಾ ವೆಬ್‌ಕಾಸ್ಟಿಂಗ್‌ನಲ್ಲಿ ಯಾವುದೇ ರೀತಿಯ ಲೋಪದೋಷವಾಗದಂತೆ ಆಯಾ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಪ್ರತಿ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಕ್ರಮವಹಿಸಬೇಕೆಂದು ಸೂಚಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.